ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 58 ಸಂಚಿಕೆ– 58 | PAGE- 8 ಪುಟ–8 | ಮಂಗಳವಾರ 08.04.2025 | RS.2/- ಬೆಲೆ 2/–

# ಅಡುಗೆ ಅನಿಲ ದರ 50 ರೂ. ಇಂದಿನಿಂದ ಹೆಚ್ಚಳ

ನವದೆಹಲಿ,ಏ.7: ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಗ್ರಾಹಕರಿಗೆ ಕೇಂದ್ರ ಸರ್ಕಾರ ಶಾಕ್ ನೀಡಿದೆ.ಅಡುಗೆ ಅನಿಲ ಸಿಲಿಂಡರ್ ದರ 50 ರೂ. ಗಳಿಗೆ ಹೆಚ್ಚಿಸಿದೆ.

ಸಬ್ಸಿಡಿ ಮತ್ತು ಸಾಮಾನ್ಯ ವರ್ಗದ ಎಲ್ಲಾ ಗ್ರಾಹಕರಿಗೆ ಬೆಲೆಯನ್ನುಹೆಚ್ಚಳಮಾಡಲಾಗಿದೆ ಎಂದು ಕೇಂದ್ರ ತೈಲ ಇಲಾಖೆ ಸಚಿವ ಹರ್ ದೀಪ್ ಸಿಂಗ್ ಪುರಿ ಸೋಮವಾರ ತಿಳಿಸಿದ್ದಾರೆ.

ಪರಿಷ್ಕೃತದರಗಳುನಾಳೆಯಿಂದಲೆ ಜಾರಿಗೆ ಬರಲಿದೆ.

14.2 ಕೆಜಿ ಎಲ್‌ಪಿಜಿಯ ಬೆಲೆ ಉಜ್ವಲಾ ಅಡಿಯಲ್ಲಿ 500 ರಿಂದ 550 ಕ್ಕೆ ಮತ್ತು ಉಜ್ವಲಾ ಅಲ್ಲದ ಬಳಕೆದಾರರಿಗೆ



803 ರಿಂದ 853 ರೂಪಾಯಿಗೆ ಏರಿಕೆಯಾಗಲಿದೆ ಎಂದು ಅವರು ತಿಳಿಸಿದರು

ತೈಲ ಕಂಪನಿಗಳು ಸಿಲಿಂಡರ್ ಬೆಲೆ ಹೆಚ್ಚಿಸುವುದಾಗಿ ತಿಳಿಸಿವೆ, ಹೀಗಾಗಿ ಪ್ರತಿ ಎಲ್‌ಪಿಜಿ ಸಿಲಿಂಡರ್ ಬೆಲೆ 50 ರೂ. ಹೆಚ್ಚಳವಾಗಲಿದೆ.

ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನುಹೆಚ್ಚಿಸಿದೆ,ಆದಾಗ್ಯೂ, ಈ ಹೆಚ್ಚಳವನ್ನು ಗ್ರಾಹಕರಿಗೆ ವರ್ಗಾಯಿಸಲಾಗುವುದಿಲ್ಲಮತ್ತು ತೈಲ ಮಾರುಕಟ್ಟೆ ಕಂಪನಿಗಳು ಭರಿಸುತ್ತವೆ. ಇದಕ್ಕೂ ಮುನ್ನ ರಾಜ್ಯ ಸರ್ಕಾರ ಹಾಲು, ವಿದ್ಯುತ್, ಡೀಸೆಲ್, ಬಸ್ ದರ ಏರಿಕೆ ಮಾಡಿದ್ದನ್ನು ಇಲ್ಲಿ ಉಲ್ಲೇಖಿಸಬಹುದು.

## ಬೈಕ್-ಟೆಂಪೊ ಟ್ರಾವೆಲ್ಲರ್ ಮಧ್ಯೆ ಡಿಕ್ಕಿ: ಇಬ್ಬರ ಸಾವು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.7:ತಾಲ್ಲೂಕಿನ ಖಾನಾಪೂರ ಸಮೀಪದ ಧನ್ನೂರ ಕ್ರಾಸ್ ಬಳಿ ಬೈಕ್–ಟೆಂಪೊ ಟ್ರಾವೆಲ್ಲರ್ ಮಧ್ಯೆ ಭಾನುವಾರ ನಸುಕಿನ ಜಾವ ಡಿಕ್ಕಿ ಸಂಭವಿಸಿದ ಪರಿಣಾಮ ಇಬ್ಬರು ಬೈಕ್ ಸವಾರರು ಮೃತಪಟ್ಟಿದ್ದಾರೆ.

ಇಸ್ಮಾಯಿಲ್ ಗೂಡಸಾಬ್ (24) ಸ್ಥಳದಲ್ಲೇ ಮೃತಪಟ್ಟರೆ,ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದ ರಮೇಶ ಹಣಮಂತಪ್ಪಾ ಮುನ್ನೂರ(35)ಅವರಿಗೆ ಹೆಚ್ಚಿನ ಚಿಕಿತ್ಸೆಗಾಗಿ ಹೈದರಾಬಾದ್ ಆಸ್ಪತ್ರೆಗೆ ತೆಗೆದುಕೊಂಡು ಹೋದಾಗ ಚಿಕಿತ್ಸೆಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ.

ಗಾಯಗೊಂಡಿರುವ ಬಸವರಾಜ ಶರಣಪ್ಪ ಚಕಲೆ (45) ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಹೈದರಾಬಾದ್ ಆಸ್ಪತ್ರೆಗೆದಾಖಲಿಸಲಾಗಿದೆ.ಇವರೆಲ್ಲರೂ ಜಹೀರಾಬಾದ್ ತಾಲ್ಲೂಕಿನ ರತ್ನಾಪುರ ಗ್ರಾಮದವರು.ಕಾರ್ಮಿಕರಾಗಿರುವ ಇವರು ಭಾಲ್ಕಿಯಿಂದ ಬೈಕ್ ಮೇಲೆ ಬೀದರ್ ಕಡೆಗೆ ಬರುವಾಗ ಟೆಂಪೊ ಟ್ರಾವೆಲ್ಲರ್–ಬೈಕ್ ಮಧ್ಯೆ ಮುಖಾಮುಖಿ ಡಿಕ್ಕಿ ಸಂಭವಿಸಿದೆ.ಈ ಸಂಬಂಧ ಧನ್ನೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಮನೆಗೆ ನುಗ್ಗಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಎಸಗಿದ ಶಿಕ್ಷಕ

ಮಲ್ಲಮ್ಮನುಡಿ ವಾರ್ತೆ ಕಲಬುರಗಿ: ಮನೆಯಲ್ಲಿ ಯಾರೂ ಇಲ್ಲದ ವೇಳೆ ತನ್ನದೇ ವಿದ್ಯಾರ್ಥಿನಿ ಮನೆಗೆ ನುಗ್ಗಿ ಆಕೆಯ ಮೇಲೆ ಅತ್ಯಾಚಾರ ಎಸಗಿದ ಅತಿಥಿ ಶಿಕ್ಷಕ ಈಗ ಮಾದನ ಹಿಪ್ಪರಗಾ ಪೊಲೀಸರ ಅತಿಥಿಯಾಗಿದ್ದಾನೆ.

ಮಾದನಹಿಪ್ಪರಗಾ ಪೊಲೀಸ್ ಠಾಣೆ ವ್ಯಾಪ್ತಿಯ ಗ್ರಾಮವೊಂದರಲ್ಲಿ ಈ ಘಟನೆ ನಡೆದಿದ್ದು,ಶಿವರಾಜ್ ಎಂಬ ಅತಿಥಿ ಶಿಕ್ಷಕನೇ ಇಂಥದ್ದೊಂದು ಕೀಚಕ ಕೃತ್ಯ ಎಸಗಿದ ಹಿನ್ನೆಲೆಯಲ್ಲಿ ಪೊಲೀಸರು ಆತನನ್ನು ಪೋಕ್ಸೊ ಅಡಿಯಲ್ಲಿ ಬಂಧಿಸಿ ನ್ಯಾಯಾಲಯದ ಎದುರು ಹಾಜರುಪಡಿಸಿದ್ದಾರೆ.

14 ವರ್ಷದ ಅಪ್ರಾಪ್ತ ವಿದ್ಯಾರ್ಥಿನಿ ಮೇಲೆ ಶಿಕ್ಷಕ ನಡೆಸಿರುವ ಕೃತ್ಯದಿಂದ ಗ್ರಾಮದ ಜನರು ಆಕ್ರೋಶ ವ್ಯಕ್ತಪಡಿಸಿದ್ದು, ಆರೋಪಿಯ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದ್ದಾರೆ.

ಮಾದನಹಿಪ್ಪರಗಾ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಪ್ರಕರಣ ದಾಖಲಾಗಿದೆ.

## ಗ್ರಾ.ಪಂ ಸದಸ್ಯನ ಕೊಲೆ: ನಾಲ್ವರು ಆರೋಪಿಗಳ ಬಂಧನ



ಮಲ್ಲಮ್ಮನುಡಿ ವಾರ್ತೆ ಬೀದರ. ಏ. 07 : ನಗರದ ಅಲಿಯಾಬಾದ್ ರಿಂಗ್ ರಸ್ತೆಯಲ್ಲಿ ಶುಕ್ರವಾರ ನಡೆದ ಗ್ರಾಪಂ ಸದಸ್ಯ ವೈಜಿನಾಥ ದತ್ತಾತ್ರೇಯ ಅವರ ಕೊಲೆ ಪ್ರಕರಣವನ್ನು ಘಟನೆ ನಡೆದ 7 ಗಂಟೆಗಳಲ್ಲಿ ಪೊಲೀಸರು ಭೇದಿಸಿ, ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.

ನಗರದ ನಾವದಗೇರಿಯ ಇಬ್ಬರು ಹಾಗೂ ತಾಲೂಕಿನ ಹೊನ್ನಿಕೇರಿಯ ಇಬ್ಬರು ಸೇರಿ ನಾಲ್ವರನ್ನು ಬಂಧಿಸಲಾಗಿದೆ.

ಕೊಲೆಗೆ ಸಂಚು ರೂಪಿಸಿದ ಮುಖ್ಯ ಆರೋಪಿ ಪರಾರಿಯಾಗಿದ್ದು, ಬಂಧನಕ್ಕೆ ಜಾಲ ಬೀಸಲಾಗಿದೆ ಎಂದು ಜಿಲ್ಲಾ ಎಸ್.ಪಿ ಪ್ರದೀಪ್ ಗುಂಟಿ ಶನಿವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ವೈಜಿನಾಥ ಧಾಬಾದಲ್ಲಿ ಊಟ ಮಾಡಲು ಹೋಗಿದ್ದ ವೇಳೆ ಇಬ್ಬರು ಆರೋಪಿಗಳು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿ ಬೈಕ್ ಮೇಲೆ ಪರಾರಿಯಾಗಿದ್ದರು. ಈ ದೃಶ್ಯ ಸಿಸಿ ಟಿವಿಯಲ್ಲಿ ಸೆರೆಯಾಗಿತ್ತು. ಕೃತ್ಯ ಎಸಗಿದ ಇಬ್ಬರು ಹಾಗೂ ಅವರಿಗೆ ಸಹಕರಿಸಿದ ಇನ್ನಿಬ್ಬರನ್ನು ಬಂಧಿಸಲಾಗಿದೆ. ಪರಾರಿಯಾಗಿರುವ ಮುಖ್ಯ ಆರೋಪಿಯನ್ನು ಶೀಘ್ರದಲ್ಲೇ ಬಂಸಲಾಗುವುದು ಎಂದು ಹೇಳಿದರು.


(2ನೇ ಪುಟ ನೋಡಿ)

## ಆಂತರಿಕ ಆಕ್ರೋಶ ಮುಚ್ಚಿಹಾಕಲು ಜನಾಕ್ರೋಶ ಚಳುವಳಿ: ಸಚಿವ ಪ್ರಿಯಾಂಕ್ ಖರ್ಗೆ

ಮಲ್ಲಮ್ಮನುಡಿ ವಾರ್ತೆ ಕಲಬುರ್ಗಿ, ಏ.7: ಬಿಜೆಪಿಯಲ್ಲಿನ ಆಂತರಿಕ ಆಕ್ರೋಶವನ್ನು ಮುಚ್ಚಿ ಹಾಕಲು ಜನಾಕ್ರೋಶ ಚಳುವಳಿಯನ್ನು ಮಾಡುತ್ತಿದ್ದಾರೆ ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರೋಪಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯವರು ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳ ವಿರೋಧಿಸಿ ಮಾಡುತ್ತಿದ್ದು, ಅದು ನಮ್ಮ ಕೈಯಲ್ಲಿದೆಯೇ, ಜಾಗತಿಕ ಮಟ್ಟದಲ್ಲಿ ಕಚ್ಚಾ ತೈಲು ಬೆಲೆ ಇಳಿಕೆಯಾಗಿದೆ. ಕೇಂದ್ರ ಸರ್ಕಾರ ಕಡಿಮೆ ಮಾಡಲಿ ಎಂದು ಸವಾಲು ಹಾಕಿದರು.

ಕಳೆದ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಈ ಬಾರಿ 400ಕ್ಕಿಂತ ಹೆಚ್ಚು ಗೆಲುವು ಎಂದು ಘೋಷಿಸಿದ್ದನ್ನು ಮತದಾರರು ಹುಸಿ ಮಾಡಿದ್ದಾರೆ. ಬಿಜೆಪಿಯವರು ಪೆಟ್ರೋಲ್, ಡೀಸೆಲ್ ಬೆಲೆಗಳನ್ನು ತೆರಿಗೆ ಹೆಚ್ಚಿಸಿದರೆ ಬಲಿಷ್ಠ ರಾಷ್ಟ್ರ ಕಟ್ಟಲು, ಆರ್ಥಿಕ ವ್ಯವಸ್ಥೆ ಸುಭದ್ರಗೊಳಿಸಲು ಎಂದು ಹೇಳುತ್ತಾರೆ. ಹತ್ತು ವರ್ಷಗಳ ನಂತರ ನಾವು ಸುಂಕ ಹೆಚ್ಚು ಮಾಡಿದರೆ



ಅದು ಸಮಸ್ಯೆಯಾಗುತ್ತಿದೆ ಎಂದು ಅವರು ತೀವ್ರ ತರಾಟೆಗೆ ತೆಗೆದು–ಕೊಂಡರು.ಜಾಗತಿಕ ಮಟ್ಟದಲ್ಲಿನ ಬೆಲೆಯನ್ನು ರಾಷ್ಟ್ರದಲ್ಲಿಯೂ ತೆ–ಗೆದುಕೊಂಡು ಬನ್ನಿ ಎಂದು ಸವಾಲು ಹಾಕಿದ ಅವರು, ಚಿತ್ತಾಪುರದಲ್ಲಿನ ಜನಾಕ್ರೋಶ ಚಳುವಳಿಯಲ್ಲಿ 50 ಜನ ಇಲ್ಲ. ಆಟೋದಲ್ಲಿ ಮಾತ್ರ ಕೂಗೋಕ್ಕೆ ಇಟ್ಟುಕೊಂಡಿದ್ದಾರೆ ಎಂದು ಕಟುವಾಗಿ ಟೀಕಿಸಿದರು.

ರಾಜ್ಯಕ್ಕೆ ಕೇಂದ್ರದಿಂದ ಬರಬೇಕಾದ ಹಣ ಬರುತ್ತಿಲ್ಲ. ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಸಂಸದರು ಆಯ್ಕೆಯಾದಮೇಲೆ ಈಗಷ್ಟೇ ಕೇಂದ್ರ ಪ್ರಾಯೋಜಿತ ಅನುದಾನಬರುತ್ತಿದೆ. ಅದೂ ಅವರು ಕೇಂದ್ರಸರ್ಕಾರದ ಕಚೇರಿಗಳಿಗೆ ಅಲೆದಾಡಿದ ಮೇಲೆ.ಕೇಂದ್ರದಿಂದ ಮೊದಲು 60–40 ಇತ್ತು. ಈಗ ಅದು 60–40 ಆಗಿದೆ. ಜಲಜೀವನ್ ಮಿಷನ್ ಅಡಿ 2300 ಕೋಟಿ ರೂ.ಗಳು ರಾಜ್ಯಕ್ಕೆ ಬರಬೇಕು. ಬಂದಿದ್ದು ಕೇವಲ 517 ಕೋಟಿ ರೂ.ಗಳು. ನಾವು ಎರಡೂವರೆ ಸಾವಿರ ಕೋಟಿ ರೂ.ಗಳನ್ನು ಹಾಕಿದ್ದೇವೆ. ಈ ಕುರಿತು ಕೇಂದ್ರಕ್ಕೆ ಪತ್ರ ಬರೆದರೆ ನಮ್ಮ ಹತ್ತಿರ ದುಡ್ಡಿಲ್ಲ. ಮುಂದಿನ ಆರ್ಥಿಕ ವರ್ಷದಲ್ಲಿ ಹಣ ಕೊಡುತ್ತೇವೆ ಎಂದು ಪತ್ರ ಕೊಟ್ಟಿದ್ದಾರೆ. ನಮ್ಮ ತೆರಿಗೆಯಿಂದ ರಾಷ್ಟ್ರ ನಡೆಯುತ್ತಿದೆ. ನಾವು ಕಟ್ಟುತ್ತಿರುವ ಒಂದು ರೂ.ಗೆ 13 ಪೈಸೆ ಸಹ ಬರುತ್ತಿಲ್ಲ ಎಂದು ಅವರು ಅಸಮಾಧಾನ ಹೊರಹಾಕಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಕ್ರಮ ಕೈಗೊಳ್ಳುವ ಕುರಿತಂತೆ ಸಚಿವ ಸಂಪುಟದ ಉಪ ಸಮಿತಿಯಲ್ಲಿ ಚರ್ಚಿಸಲಾಗಿದೆ. ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯಿತಿ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳಿಗೆ ಈ ಬಗ್ಗೆ ಅವಶ್ಯ ಸಲಹೆ ನೀಡಲಾಗಿದ್ದು, ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಮಾನದಂಡ ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು.

ಖಾಸಗಿ ಬೋರ್‌ವೆಲ್ ಬಾಡಿಗೆ ಪಡೆದುಕೊಂಡು ನೀರು ಸರಬರಾಜು ಮಾಡುವುದು, ಹೊಸ ಬೋರ್‌ವೆಲ್ ಕೊರೆಸುವುದು ಹಾಗೂ ಟ್ಯಾಂಕರ್ ಮೂಲಕ ನೀರು ಒದಗಿಸುವುದು ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳಲು ಈಗಾಗಲೇ

(2ನೇ ಪುಟ ನೋಡಿ)

## ಇಂದು ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು,ಏ.7:ಕಳೆದ ಮಾರ್ಚ್ ತಿಂಗಳಿನಲ್ಲಿ ನಡೆದಿದ್ದ ದ್ವಿತೀಯ ಪಿಯುಸಿ–1 ಪರೀಕ್ಷೆ ಫಲಿತಾಂಶ ಏ.8 ರಂದು ಪ್ರಕಟವಾಗಲಿದೆ.

ಮಧ್ಯಾಹ್ನ 12.30ಕ್ಕೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸುದ್ದಿಗೋಷ್ಠಿಯಲ್ಲಿ ಫಲಿತಾಂಶ ಪ್ರಕಟ ಮಾಡಲಿದ್ದಾರೆ.

ಮಧ್ಯಾಹ್ನ 1.30ಕ್ಕೆ ಇಲಾಖೆ ವೆಬ್ ಸೈಟ್‌ನಲ್ಲಿ ಫಲಿತಾಂಶ ಲಭ್ಯವಾಗಲಿದೆ. ಮಾರ್ಚ್ 1 ರಿಂದ ಮಾರ್ಚ್ 20ರ ವರೆಗೆ ಈ ಬಾರಿ ಪರೀಕ್ಷೆ ನಡೆದಿತ್ತು. ಸುಮಾರು 7.13 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದರು.

ಆನ್‌ಲೈನ್ ಮೂಲಕವೂ ಫಲಿತಾಂಶ ವೀಕ್ಷಿಸಬಹುದಾಗಿದೆ. ಜತೆಗೆ, ಅಂಕಪಟ್ಟಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

ಫಲಿತಾಂಶ ಲಭ್ಯವಾಗೋ ವೆಬ್ ಸೈಟ್ ಹೀಗಿದೆ. https://ker-results.nic.in

## ಕೇಂದ್ರ ದೇಶದ ಜನರ ಆರೋಗ್ಯ ರಕ್ಷಣೆಗೆ ಹೆಚ್ಚು ಒತ್ತು ನೀಡಿದೆ : ಮೋದಿ

ಮಲ್ಲಮ್ಮನುಡಿ ವಾರ್ತೆ ನವದೆಹಲಿ, ಏ.7: ಕೇಂದ್ರ ಸರ್ಕಾರ ದೇಶದ ಜನರ ಆರೋಗ್ಯ ರಕ್ಷಣೆಗೆ ಹೆಚ್ಚು ಒತ್ತು ನೀಡಿದೆ ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ.ವಿಶ್ವ ಆರೋಗ್ಯ ದಿನದಂದು ತಮ್ಮ ಸಂದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಸರ್ಕಾರವು ಆರೋಗ್ಯ ರಕ್ಷಣೆಯ ಮೇಲೆ ಗಮನ ಹರಿಸುತ್ತದೆ ಮತ್ತು ಜನರ ಯೋಗಕ್ಷೇಮದ ವಿವಿಧ ಅಂಶಗಳಲ್ಲಿ ಹೂಡಿಕೆ ಮಾಡುತ್ತದೆ ಎಂದು ಪ್ರತಿಪಾದಿಸಿದ್ದಾರೆ.

ವಿಶ್ವ ಆರೋಗ್ಯ ದಿನದಂದು,

(2ನೇ ಪುಟ ನೋಡಿ)

## ರಾಜ್ಯದಲ್ಲಿ ಹೊಸದಾಗಿ 2 ಸಾವಿರ ಬಸ್ ಖರೀದಿ: ಸಚಿವ ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಏ.7:ಜನರ ಅನುಕೂಲಕ್ಕಾಗಿ ರಾಜ್ಯದಲ್ಲಿ ಎರಡು ಸಾವಿರ ಬಸ್ಸುಗಳನ್ನು ಖರೀದಿಸಲಾಗುತ್ತಿದ್ದು, ಅದರಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ 600 ರಿಂದ 700 ಬಸ್ಸುಗಳನ್ನು ಕೊಡುತ್ತೇವೆ ಎಂದು ಸಾರಿಗೆ ಮತ್ತು ಮುಜರಾಯಿ ಹಾಗೂ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಹೇಳಿದರು.

ಅವರು ಸೋಮವಾರ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಬೇವೂರಿನಲ್ಲಿ ನೂತನ ಬಸ್ ನಿಲ್ದಾಣದ ಶಂಕುಸ್ಥಾಪನೆ ಹಾಗೂ ಲೋಕೋಪಯೋಗಿ ಇಲಾಖೆಯ ಸರ್ಕ್ಯೂಟ್ ಹೌಸ್ ಕಟ್ಟಡದ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಹಬ್ಬ–ಹರಿ ದಿನಗಳ ಸಂದರ್ಭ ಹಾಗೂ ಶಾಲಾ–ಕಾಲೇಜುಗಳ ಮಕ್ಕಳಿಗೆ ಹೊಸದಾಗಿ ಬಸ್ ಖರೀದಿಸುವದರಿಂದ ಅವರು ದಿನಾಲು ಸಂಚಾರ ಮಾಡಲು ಅನುಕೂಲವಾಗುವದರ ಜೊತೆಗೆ



ಬಸ್ಸುಗಳ ಕೊರತೆ ನೀಗಿಸಿದಂತಾಗುತ್ತದೆ. ಯಲಬುರ್ಗಾ ಕ್ಷೇತ್ರದಲ್ಲಿ 16 ಬಸ್ಸ ನಿಲ್ದಾಣಗಳನ್ನು ಕಟ್ಟುತ್ತಿದ್ದೆವೆ. ಇಂದು ಬೇವೂರು ಹಾಗೂ ಹಿರೇವಂಕಲಕುಂಟಾ ನೂತನ ಬಸ್ ನಿಲ್ದಾಣಗಳ ಶಂಕುಸ್ಥಾಪನೆ ನೆರವೇರಿಸುತ್ತಿದ್ದೆನೆ.

ಮಂಗಳೂರಿಗೆ ಬಸ್ ನಿಲ್ದಾಣ ಮಾಡಲು ಇಂದೇ ಆದೇಶ ನೀಡಿದ್ದೆನೆ ಎಂದರು.

ಕೊಪ್ಪಳ–ಬೆಂಗಳೂರು ಹಾಗೂ ಕೊಪ್ಪಳ–ಬೀದರ ಜಿಲ್ಲೆಗಳಿಗೆ ಬರುವ ಕೆಲವೆ ದಿನಗಳಲ್ಲಿ ನಾನ ಎಸಿ ಸ್ಲೀಪರ್ ಬಸ್ಸುಗಳನ್ನು ಬಿಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೆನೆ. ಈ ಹಿಂದೆ ದಿನಪತ್ರಿಕೆಯಲ್ಲಿ ಬಂದ ಒಂದು ಸುದ್ದಿಯನ್ನು ಓದಿ 15 ರಿಂದ 20 ದಿನಗಳು ಬಿಟ್ಟು ಹುಲಿಗೆಮ್ಮ ದೇವಸ್ಥಾನಕ್ಕೆ ಒಂದು ವರ್ಷದ ಹಿಂದೆ ಭೇಟಿ ನೀಡಿ, ಹುಲಿಗೆಮ್ಮ ದೇವಸ್ಥಾನ ಪ್ರಾಧಿಕಾರ ಮಾಡಲು ತೀರ್ಮಾನ ಮಾಡಿದೆ. 4 ರಿಂದ 5 ತಿಂಗಳ ಹಿಂದೆ ಪ್ರಾಧಿಕಾರ ಮಾಡಲು ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ. ಹುಣ್ಣಿಮೆ ಸಂದರ್ಭದಲ್ಲಿ ಅಲ್ಲಿಗೆ ಒಂದು ಲಕ್ಷಕಿಂತ ಹೆಚ್ಚು ಜನರು ಭೇಟಿ ನೀಡುತ್ತಾರೆ. ಸೂಕ್ತ ವ್ಯವಸ್ಥೆ ಇಲ್ಲದ ಕಾರಣ ಜನರು ಎಲ್ಲೆಂದರಲ್ಲಿ ಮಲಗುತ್ತಾರೆ.ಹಾಗಾಗಿ ಪ್ರಾಧಿಕಾರದಿಂದ ದೇವಸ್ಥಾನಕ್ಕೆ ಬರುವ ಭಕ್ತರಿಗೆ ಉಳಿದುಕೊಳ್ಳಲು ಅನುಕೂಲಕರ ವ್ಯವಸ್ಥೆಗಳನ್ನು ಮಾಡಲಾಗುವುದು ಎಂದು ಹೇಳಿದರು.

ಅಂಜನಾದ್ರಿಗೆ ಹಿಂದಿನ ಸರ್ಕಾರ 19 ಕೋಟಿ ಅನುದಾನ ನೀಡಿತ್ತು ನಮ್ಮ ಸರ್ಕಾರ ಬಂದಮೇಲೆ 100 ಕೋಟಿ ಅನುದಾನ ನೀಡಲಾಗಿದೆ. ಪ್ರವಾಸಿ ಮಂದಿರ, ಶಾಫಿಂಗ್ ಕಾಂಪ್ಲೆಕ್ಸ್, ಪ್ರದಕ್ಷಿಣಾ ಪಥ, ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ಮೂಲಕ ಆಂಜನೇಯ ದೇವಸ್ಥಾನಕ್ಕೆ ಬರುವ ಭಕ್ತರಿಗೆ ಸೂಕ್ತ ವ್ಯವಸ್ಥೆಗಳನ್ನು ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿ, ಮಹಿಳೆಯರು ತಮ್ಮ

(2ನೇ ಪುಟ ನೋಡಿ)

## ಕೇಂದ್ರದಿಂದ: ಪೆಟ್ರೋಲ್,ಡೀಸೆಲ್ ಮೇಲಿನ ಅಬಕಾರಿ ಸುಂಕ ಹೆಚ್ಚಳ

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.7:ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಡೀಸೆಲ್ ದರ ಏರಿಕೆ ಮಾಡಿ ವಾಹನ ಸವಾರರಿಗೆ ಶಾಕ್ ನೀಡಿತ್ತು. ಇದೀಗ ಕೇಂದ್ರ ಸರ್ಕಾರವೂ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಹೆಚ್ಚಿಸಿದೆ. ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ 2 ರೂ ಹೆಚ್ಚಿಸಲಾಗಿದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ನಾಳೆ ಅಂದರೆ ಮಂಗಳವಾರದಿಂದ ಜಾರಿಗೆ ಬರಲಿದೆ. ಅಮೆರಿಕದ ಆಡಳಿತವು ವಿಧಿಸಿರುವ ಸುಂಕಗಳ ಪರಿಣಾಮವಾಗಿ, ಜಾಗತಿಕ ಕಚ್ಚಾ ತೈಲ ಬೆಲೆಗಳು ವಾಸ್ತವವಾಗಿ ಕುಸಿಯುತ್ತಿರುವ ಸಮಯದಲ್ಲಿ ಕೇಂದ್ರ ಸರ್ಕಾರ ಈ ಕ್ರಮ ಕೈಗೊಂಡಿದೆ. ಏತನ್ಮಧ್ಯೆ, ಅಬಕಾರಿ ಸುಂಕ ಹೆಚ್ಚಳದ ಹೊರತಾಗಿಯೂ ಪೆಟ್ರೋಲ್ ಮತ್ತು ಡೀಸೆಲ್ ಚಿಲ್ಲರೆ ಬೆಲೆಗಳು ಬದಲಾಗುವ ಸಾಧ್ಯತೆಯಿಲ್ಲ ಎಂದು ಉದ್ಯಮ ಮೂಲಗಳು ತಿಳಿಸಿವೆ.

ಸರ್ಕಾರ ಹೊರಡಿಸಿದ ಆದೇಶದಲ್ಲಿ ಪೆಟ್ರೋಲ್ ಮೇಲಿನ ಅಬಕಾರಿ ಸುಂಕವನ್ನು ಲೀಟರ್‌ಗೆ 13 ರೂ. ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕವನ್ನು ಲೀಟ–ರ್‌ಗೆ 10 ರೂ. ಹೆಚ್ಚಿಸಲಾಗಿದೆ ಎಂದು ತಿಳಿಸಲಾಗಿದೆ. ಆದೇಶವು ಚಿಲ್ಲರೆ ಬೆಲೆಗಳ ಮೇಲೆ ಬೀರುವ ಪರಿಣಾಮವನ್ನು ನಿರ್ದಿಷ್ಟಪಡಿಸದಿದ್ದರೂ, ಚಿಲ್ಲರೆ ಬೆಲೆಗಳಲ್ಲಿ ಯಾವುದೇ ಬದಲಾವಣೆಯಾಗುವ ಸಾಧ್ಯತೆಯಿಲ್ಲ ಎಂದು ಉದ್ಯಮ ಮೂಲಗಳು ತಿಳಿಸಿವೆ.

ಅಂತಾರಾಷ್ಟ್ರೀಯ ತೈಲ ಬೆಲೆಗಳಲ್ಲಿನ ಕುಸಿತದಿಂದಾಗಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳಲ್ಲಿನ ಇಳಿಕೆಯೊಂದಿಗೆ ಹೆಚ್ಚಿದ ಅಬಕಾರಿ ಸುಂಕವನ್ನು ಸರಿಹೊಂದಿಸುವ ಸಾಧ್ಯತೆಯಿದೆ. ಇತ್ತೀಚೆಗೆ ಹೆಚ್ಚುತ್ತಿರುವ ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳು ಮತ್ತು ವಿವಿಧ ತೈಲ ಉತ್ಪಾದನಾ ಕಂಪನಿಗಳ (OPCs) ಮೇಲೆ ವಿಧಿಸಲಾದ ನಿರ್ಬಂಧಗಳ ನಡುವೆ, ಭಾರತವು ತನ್ನ ಪೆಟ್ರೋಲಿಯಂ ಆಮದುಗಳನ್ನು ವೈವಿಧ್ಯಗೊಳಿಸಿದೆ. ವಿವಿಧ ಭೌಗೋಳಿಕ ಸ್ಥಳಗಳಲ್ಲಿರುವ ದೇಶಗಳಿಂದ ಕಚ್ಚಾ ತೈಲವನ್ನು ಖರೀದಿಸುತ್ತಿದೆ ಎಂದು ವರದಿಯಾಗಿದೆ.

## ಒಂದನೇ ಪುಟದಿಂದ

### 2 ಸಾವಿರ ಬಸ್ ಖರೀದಿ: ಸಚಿವ ರಾಮಲಿಂಗಾರೆಡ್ಡಿ

ಮಕ್ಕಳನ್ನು ಕರೆದುಕೊಂಡು ಬಿಸಿಲಿನಲ್ಲಿ ನಿಲ್ಲುತ್ತಿದ್ದರು ಅವರ ಕಷ್ಟ ನೋಡಿ ಎಲ್ಲಾ ಕಡೆ ಬಸ್ ನಿಲ್ದಾಣಗಳನ್ನು ಮಾಡುತ್ತಿದ್ದೇನೆ. ಇಂದು ಬೇವೂರ ಹಾಗೂ ಹಿರೇವಂಕಲಕುಂಟಾ ಬಸ್ ನಿಲ್ದಾಣಗಳ ಶಂಕುಸ್ಥಾಪನೆ ನೆರವೇರಿಸಲಾಗುತ್ತಿದೆ. 6 ಕೋಟಿ ರೂ ವೆಚ್ಚದಲ್ಲಿ ಮಂಗಳೂರು ಹೊಸ ಬಸ್ ನಿಲ್ದಾಣ ಮಾಡಲಾಗುವುದು. ಇದಕ್ಕೆ ಸಾರಿಗೆ ಸಚಿವರು ಇಂದೇ ಅನುಮೋದನೆ ನೀಡಿದ್ದಾರೆ ಎಂದರು.

ಕೆರೆ ತುಂಬಿಸುವ ಯೋಜನೆ, ಸಿಮೆಂಟ್ ರಸ್ತೆ, ಕುಡಿಯುವ ನೀರಿನ ವ್ಯವಸ್ಥೆ, ಕುಕನೂರಿನಲ್ಲಿ 100 ಬೆಡ್ ಆಸ್ಪತ್ರೆ, ಯಲಬುರ್ಗಾದಲ್ಲಿ ಬರುವ ಕೆಲವೆ ದಿನಗಳಲ್ಲಿ ರೈಲು ಉದ್ಘಾಟನೆ ನೆರವೇರಲಿದೆ. ಇನ್ನೂ ಹತ್ತು ಹಲವಾರು ಅಭಿವೃದ್ಧಿ ಕಾಮಗಾರಿಗಳು ನನ್ನ ಕ್ಷೇತ್ರದಲ್ಲಿ ನಡೆಯುತ್ತಿವೆ. ರಾಷ್ಟ್ರೀಯ ಹೆದ್ದಾರಿ, ರೈಲು ಮಾಡಿಸಿದ ಉದ್ದೇಶ ನಮ್ಮ ತಾಲೂಕಿನ ಅಭಿವೃದ್ಧಿ ಯಾಗಿದೆ. ಈ ಬೇಸಿಗೆಯಲ್ಲಿ ಜನರಿಗೆ ಯಾವುದೇ ರೀತಿಯ ಕುಡಿಯುವ ನೀರಿನ ತೊಂದರೆ ಆಗಬಾರದು.ಒಂದು ವೇಳೆ ಯಾವುದೇ ಸಮಸ್ಯೆಯಾದರೆ, ಸಂಬಧಿಸಿದ ಇಲಾಖೆಯ ಅಧಿಕಾರಿಗಳನ್ನು ನೇರ ಹೊಣೆಗಾರರನ್ನಾಗಿ ಮಾಡುವುದರ ಜೊತೆಗೆ ಅವರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದರು.

ಸಿದ್ರಾಮಯ್ಯನವರ ಸರ್ಕಾರ ಜನತೆಗೆ ಪ್ರತಿವರ್ಷ ಒಂದು ಲಕ್ಷ ಮೂರು ಸಾವಿರ ಕೋಟಿ ಹಣವನ್ನು ನೇರವಾಗಿ ಜನರಿಗೆ ಕೊಡುತ್ತಿದೆ. ಗ್ಯಾರಂಟಿ ಯೋಜನೆಗಳ ಜೊತೆಗೆ 52 ಸಾವಿರ ಕೋಟಿ ಹಣವನ್ನು ಜನರಿಗೆ ಕೊಡುತ್ತಿದ್ದೇವೆ. ಶಕ್ತಿ ಯೋಜನೆ ಅಡಿ ಮಹಿಳೆಯರು ರಾಜ್ಯದಲ್ಲಿ ಪ್ರತಿದಿನ 60 ರಿಂದ 62 ಲಕ್ಷ ಮಹಿಳೆಯರು ಉಚಿತವಾಗಿ ಬಸ್ಸುಗಳಲ್ಲಿ ಪ್ರಯಾಣ ಮಾಡುತ್ತಿದ್ದಾರೆ. ಇದೊಂದು ಜಾಗತಿಕ ದಾಖಲೆ ಯಾವ ರಾಜ್ಯದಲ್ಲಿ ಈ ರೀತಿಯ ಉಚಿತ ಯೋಜನೆ ಕೊಟ್ಟಿಲ್ಲ. ಮಹಿಳೆಯರು ಉಚಿತವಾಗಿ ಪ್ರಯಾಣ ಮಾಡಲು ನಮ್ಮ ಸರ್ಕಾರ ಸಾರಿಗೆ ನಿಗಮಗಳಿಗೆ ಇಲ್ಲಿಯವರೆಗೆ 10 ಸಾವಿರ 500 ಕೋಟಿ ಹಣವನ್ನು ಕೊಟ್ಟಿದ್ದು, ಇದಕ್ಕಾಗಿ ಈ ವರ್ಷದ ಬಜೆಟನಲ್ಲಿ 6000 ಸಾವಿರ ಕೋಟಿ ರೂ. ಹಣವನ್ನು ಮೀಸಲಿಡಲಾಗಿದೆ. ಪ್ರಯಾಣಿಕರಿಗೆ ತೊಂದರೆ ಆಗಬಾರದು ಎನ್ನುವ ಕಾರಣಕ್ಕಾಗಿ ಹೊಸ ಬಸ್ಸುಗಳನ್ನು ಖರೀದಿಮಾಡಲಾಗುತ್ತಿದೆ ಎಂದು ಹೇಳಿದರು.

ಕೊಪ್ಪಳ ಲೋಕಸಭಾ ಕ್ಷೇತ್ರದ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಅವರು ಮಾತನಾಡಿ, ಯಲಬುರ್ಗಾ ಕ್ಷೇತ್ರದಲ್ಲಿ ಬಸ್ ನಿಲ್ದಾಣ. ಶಾಲಾ-ಕೊಠಡಿಗಳು. ಪ್ರಾಥಮಿಕ ಆರೋಗ್ಯ ಕೇಂದ್ರಗಳು ಎಷ್ಟು ಇರಬೇಕು ಅದಕ್ಕಿಂತ ಹೆಚ್ಚು ಆಗಿವೆ. ಜಿಲ್ಲಾ ಕೇಂದ್ರದಲ್ಲಿ ಇರುವ ಸೌಲಭ್ಯಗಳನ್ನು ಇಲ್ಲಿನ ಜನರಿಗೆ ಸಿಗಬೇಕೆಂದು ರಾಯರೆಡ್ಡಿ ಸಾಹೇಬರು ತಮ್ಮ ಕ್ಷೇತ್ರದ ಅಭಿವೃದ್ಧಿ ಮಾಡಿದ್ದಾರೆ. ಶಕ್ತಿ ಯೋಜನೆ ಜಾರಿಯಾದಾಗಿನಿಂದ ಈಗ ಜನರು ನಾಲ್ಕು ಪಟ್ಟು ತಿರುಗಾಡುತ್ತಿದ್ದಾರೆ. ಒಂದೇ ಒಂದು ಸಮಸ್ಯೆಗಳಾಗದಂತೆ ಸಾರಿಗೆ ಸಚಿವರು ಅದನ್ನು ನಿಭಾಯಿಸಿಕೊಂಡು ಬರುತ್ತಿದ್ದಾರೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಬೇವೂರು ಗ್ರಾಮ ಪಂಚಾಯತಿ ಅಧ್ಯಕ್ಷರಾದ ಅಂದಮ್ಮ ಗವಿಸಿದ್ದಪ್ಪ ಬಳಿಗಾರ, ಜಿಲ್ಲಾಧಿಕಾರಿ ನಲಿನ್ ಅತುಲ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಕಲಬುರಗಿ ವ್ಯವಸ್ಥಾಪಕ ನಿರ್ದೇಶಕರಾದ ರಾಚಪ್ಪ ಎಮ್., ಕಲಬುರಗಿ ಮುಖ್ಯ ಕಾಮಗಾರಿ ಅಭಿಯಂತರಾದ ಚನ್ನನ ಬೋರಯ್ಯ. ಕೊಪ್ಪಳ ವಿಭಾಗೀಯ ನಿಯಂತ್ರಣಾಧಿಕಾರಿ ಎಮ್.ವೆಂಕಟೇಶ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರಾದ ಹೇಮಂತ್, ಕೊಪ್ಪಳ ಸಹಾಯಕ ಆಯುಕ್ತರಾದ ಕ್ಯಾ. ಮಹೇಶ್ ಮಾಲಗಿತ್ತಿ, ಇತರೆ ಗಣ್ಯರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

### ಜನಾಕ್ರೋಶ ಚಳುವಳಿ: ಸಚಿವ ಪ್ರಿಯಾಂಕ್ ಖರ್ಗೆ

ಸೂಚನೆ ನೀಡಲಾಗಿದೆ. ಬರ ಘೋಷಣೆಯಾದರೆ ಬೇಕಾಗುವ ಅನುದಾನಕ್ಕಾಗಿ ಪಿಡಿ ಅಕೌಂಟ್ ನಲ್ಲಿ ಸಾಕಷ್ಟು ಅನುದಾನ ಬಿಡುಗಡೆ ಮಾಡಲು ಕೂಡಾ ಅಗತ್ಯ ಕ್ರಮ ವಹಿಸಲಾಗುತ್ತಿದೆ. ಮುಂದಿನ ವಾರದಲ್ಲಿ ನಡೆಯಲಿರುವ ಸಚಿವ ಸಂಪುಟ ಉಪಸಮಿತಿ ಸಭೆಯಲ್ಲಿ ಈ ಬಗ್ಗೆ ಮತ್ತೆ ಚರ್ಚಿಸಲಾಗುವುದು ಎಂದು ಅವರು ತಿಳಿಸಿದರು.

ಜನರಿಗೆ ಕುಡಿಯುವ ನೀರು ಒದಗಿಸಲು ಮೊದಲ ಆದ್ಯತೆ ನೀಡಲಾಗುವುದು. ನಂತರ ಬೆಳೆಗಳಿಗೆ ಹರಿಸಲು ಯೋಚಿಸಲಾಗುತ್ತದೆ. ನಮ್ಮ ಭಾಗದ ಜನರಿಗೆ ನೀರು ಒದಗಿಸುವ ವಿಚಾರದಲ್ಲಿ ಮಹಾರಾಷ್ಟ್ರದಿಂದ ನೀರು ಹರಿಸಲು ಪತ್ರಬರೆಯುವಂತೆ ಮುಖ್ಯಮಂತ್ರಿ ಅವರಿಗೆ ಮನವಿ ಮಾಡಲಾಗಿತ್ತು. ಹಾಗಾಗಿ, ಕೃಷ್ಣಾ ನದಿಗೆ ನೀರು ಹರಿಸುವಂತೆ ಈಗಾಗಲೇ ಸಿಎಂ ಮಹಾರಾಷ್ಟ್ರ ರಾಜ್ಯಕ್ಕೆ ಪತ್ರ ಬರೆದಿದ್ದಾರೆ. ಅಲ್ಲಿನ ಜಲಾಶಯಗಳಲ್ಲಿ ನೀರಿನ ಲಭ್ಯತೆ ಕುರಿತಂತೆ ಮಹಾರಾಷ್ಟ್ರ ಸರ್ಕಾರ ಅಧಿಕೃತ ಮಾಹಿತಿ ಒದಗಿಸಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ತಮಿಳುನಾಡಿಗೆ ಸುಪ್ರಿಂಕೋರ್ಟ್ ನಿರ್ದೇಶನದಂತೆ ಮಾತ್ರ ರಾಜ್ಯದಿಂದ ನೀರು ಬಿಡುಗಡೆ ಮಾಡಲಾಗಿದೆ. ಕಾವೇರಿಗೆ ಇರುವಷ್ಟು ಮಹತ್ವ ಕೃಷ್ಣಾಗೂ ಇದೆ ಎಂದು ಅವರು ಹೇಳಿದರು.

### ಬಿಸಿಲಿನ ಝಳ ಹೆಚ್ಚಳ: ಕಲಬುರಗಿ ಉಚ್ಛ ನ್ಯಾಯಾಲಯ ಸೇರಿ 8 ನ್ಯಾಯಾಲಯಗಳ ಕಲಾಪ ಸಮಯದಲ್ಲಿ ಬದಲಾವಣೆ

ಕಲಬುರಗಿ:ಏ.7: ಬಿಸಿಲಿನ ಬೇಗ ಹೆಚ್ಚಿರುವ ಹಿನ್ನೆಲೆಯಲ್ಲಿ ಕಲಬುರ್ಗಿಯ ಉಚ್ಛ ನ್ಯಾಯಾಲಯದ ಕಲಾಪದ ಸಮಯದಲ್ಲಿ ಬದಲಾವಣೆ ಮಾಡಲಾಗಿದ್ದು, ಬೆಳಿಗ್ಗೆ 8ಕ್ಕೆ ಆರಂಭವಾಗುವ ಕಲಾಪವು ಮಧ್ಯಾಹ್ನ 1.30ಕ್ಕೆ ಮುಗಿಯಲಿದೆ. ಇದೇ ನಿಯಮವನ್ನು ಕಲಬುರ್ಗಿ ಮತ್ತು ಬೆಳಗಾವಿ ವಿಭಾಗದ ಎಂಟು ಜಿಲ್ಲಾ ನ್ಯಾಯಾಂಗಕ್ಕೂ ವಿಸ್ತರಿಸಲಾಗಿದೆ. ಏಪ್ರಿಲ್ 3ರಿಂದ ಸಮಯ ಬದಲಾವಣೆ ಜಾರಿಗೆ ಬಂದಿದ್ದು, ಮೇ 31ರವರೆಗೂ ಮುಂದುವರಿಯಲಿದೆ ಎಂದು ರಿಜಿಸ್ಟಾರ್ ಜನರಲ್ ಕೆ.ಎಸ್.ಭರತ್ ಕುಮಾರ್ ಅವರು ತಿಳಿಸಿದ್ದಾರೆ.

ಕಲಬುರ್ಗಿ, ಬೀದರ್, ಯಾದಗಿರಿ, ಕೊಪ್ಪಳ, ರಾಯಚೂರು ಮತ್ತು ಬಳ್ಳಾರಿ ಹಾಗೂ ಬೆಳಗಾವಿ ವಿಭಾಗದ ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲಾ ನ್ಯಾಯಾಂಗ ಮತ್ತು ಹೈಕೋರ್ಟ್ನ ಕಲಬುರ್ಗಿ ಪೀಠದಲ್ಲಿ ಕಲಾಪಗಳು ಬೆಳಿಗ್ಗೆ 8 ಗಂಟೆಗೆ ಆರಂಭವಾಗಲಿದ್ದು, 11ರವರೆಗೆ ನಡೆಯಲಿದೆ. ಅರ್ಧ ತಾಸು ವಿರಾಮವಿರಲಿದ್ದು, ಆನಂತರ 11.30ರಿಂದ 1.30ರವರೆಗೆ ಕಲಾಪ ನಡೆಯಲಿದೆ. ಕಚೇರಿಯು ಬೆಳಿಗ್ಗೆ 7.30ರಿಂದ ಮಧ್ಯಾಹ್ನ 2 ಗಂಟೆವರೆಗೆ ನಡೆಯಲಿದೆ. ಶನಿವಾರ ಇದಕ್ಕೆ ವಿನಾಯಿತಿ ಇರಲಿದೆ. ಶನಿವಾರ ಬೆಳಿಗ್ಗೆ 7.30ರಿಂದ 11.30ರವರೆಗೆ ಕಚೇರಿ ಕಾರ್ಯನಿರ್ವಹಿಸಲಿದೆ ಎಂದು ಅವರು ಹೇಳಿಕೆಯಲ್ಲಿ ವಿವರಿಸಿದ್ದಾರೆ. ಸಿವಿಲ್, ಕ್ರಿಮಿನಲ್, ಕೌಟುಂಬಿಕ ಮತ್ತು ಕಾರ್ಮಿಕ ನ್ಯಾಯಾಲಯಗಳಲ್ಲಿನ ಕಲಾಪದ ಸಮಯದಲ್ಲಿ ಬದಲಾವಣೆ ಮಾಡಲಾಗಿದ್ದು, 26.04.2025 ಮತ್ತು 24.05.2025ರ ನಾಲ್ಕನೇ ಶನಿವಾರದಂದು ಜಿಲ್ಲಾ ನ್ಯಾಯಾಂಗದಲ್ಲಿ ಕಲಾಪವು 7.30ಕ್ಕೆ ಆರಂಭವಾಗಲಿದ್ದು, ಮಧ್ಯಾಹ್ನ 12ಕ್ಕೆ ಮುಕ್ತಾಯವಾಗಲಿದೆ. ಜಿಲ್ಲಾ ನ್ಯಾಯಾಲಯದ ಸಿಬ್ಬಂದಿಗೆ ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸುವಂತೆ ಅವರು ಸೂಚಿಸಿದ್ದಾರೆ.

### 425 ಜನರ ಆರೋಗ್ಯ ಉಚಿತ ತಪಾಸಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 07 : ಜನವಾಡ್ ರೋಟರಿ ಕ್ಲಬ್ ಬೀದರ್ ಹಾಗೂ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ವತಿಯಿಂದ ಬೀದರ್ ತಾಲ್ಲೂಕಿನ ಮನ್ನಳ್ಳಿ ಗ್ರಾಮದ ಬಸವ ಪ್ರೌಢಶಾಲೆಯಲ್ಲಿ ಭಾನುವಾರ ನಡೆದ ಶಿಬಿರದಲ್ಲಿ 425 ಜನರ ಉಚಿತ ಆರೋಗ್ಯ ತಪಾಸಣೆ ಮಾಡಲಾಯಿತು.

ದಂತ, ನೇತ್ರ, ಎಲುಬು, ನರ, ಕಿವಿ, ಮೂಗು, ಗಂಟಲು, ಹೃದಯ ಮೊದಲಾದ ರೋಗಗಳ ತಪಾಸಣೆ ನಡೆಸಿ, ಔಷಧ ವಿತರಿಸಲಾಯಿತು.

ಇಸಿಜಿ, ಟೂಡಿ, ರಕ್ತದೊತ್ತಡ, ಮಧುಮೇಹ, ರಕ್ತಪರೀಕ್ಷೆಗಳನ್ನು ಸಹ ಉಚಿತವಾಗಿ ನಡೆಸಲಾಯಿತು. ನೇತ್ರ ಸಮಸ್ಯೆ ಹೊಂದಿದ ಐವರಿಗೆ ಶಸ್ತ್ರಚಿಕಿತ್ಸೆಗೆ ಸಲಹೆ ನೀಡಲಾಯಿತು.

ಡಾ.ವಿ.ವಿ.ನಾಗರಾಜ, ಡಾ.ಸಿದ್ಧಲಿಂಗೇಶ್ವರ ಎ. ಮಠಪತಿ, ಡಾ.ರಾಜಶೇಖರ ಸೇಡಂಕರ್, ಡಾ.ನಿತಿನ್ ಗುದಗೆ, ಡಾ.ಶಿವಕುಮಾರ ಪಾಟೀಲ, ಡಾ.ಪ್ರಶಾಂತ ಪಾಟೀಲ, ಡಾ.ಸುಪ್ರಿಯಾ ಕೋಡಗೆ ಪಾಟೀಲ, ಡಾ.ಪರಮೇಶ್ವರ ಬಿರಾದಾರ, ಡಾ.ವಿನಾಯಕ ಜ್ಯಾಂತೆ, ಡಾ.ಬಸವಪ್ರಸಾದ್ ಪಾಟೀಲ, ಎಸ್.ಬಿ.ಪಾಟೀಲ ದಂತ ಆಸ್ಪತ್ರೆ, ಮೇಗೂರ್ ಐ ಕೇರ್ ಆಸ್ಪತ್ರೆಯ ವೈದ್ಯರು ತಪಾಸಣೆ ಮಾಡಿದರು.

ಜನರಿಗೆ ನೆರವಾಗಲು ಶಿಬಿರ: 'ಗ್ರಾಮೀಣ ಭಾಗದ ಜನರಿಗೆ ನೆರವಾಗಲು ಉಚಿತ ಆರೋಗ್ಯ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದೆ' ಎಂದು ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಕ್ಲಬ್ ಅಧ್ಯಕ್ಷ ಸೋಮಶೇಖರ ಪಾಟೀಲ ಹೇಳಿದರು.

ಬೀದರ್ ಎಪಿಎಂಸಿ ಮಾಜಿ ಅಧ್ಯಕ್ಷ ಅನಿಲಕುಮಾರ ಪನ್ನಾಳೆ ಶಿಬಿರ ಉದ್ಘಾಟಿಸಿದರು. ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ, ಪಿಎ???ಐ ನಂದಿನಿ, ಕ್ಲಬ್ ಮಾಜಿ ಅಧ್ಯಕ್ಷ ಹಾವಶೆಟ್ಟಿ ಪಾಟೀಲ, ರವಿ ಮೂಲಗೆ, ಡಾ.ಸಿದ್ಧಲಿಂಗೇಶ್ವರ ಮಠಪತಿ, ಕೃಪಾಸಿಂಧು ಪಾಟೀಲ, ಅನಿಲ್ ಮಸೂದಿ ಹಾಜರಿದ್ದರು.

### ನಾಲ್ವರು ಆರೋಪಿಗಳ ಬಂಧನ

ಹೊನ್ನಿಕೇರಿಯಲ್ಲಿ ನಡೆದ ಪೋಕ್ಸೋ, ಎಸ್ಸಿ, ಎಸ್ಟಿ ದೌರ್ಜನ್ಯ ಪ್ರಕರಣದಲ್ಲಿ ನೊಂದ ಕುಟುಂಬದ ಪರ ನಿಂತು, ಅವರಿಗೆ ವೈಜಿನಾಥ ನೆರವು ನೀಡಿದ್ದರು. ಅದೇ ಗ್ರಾಮದ ವ್ಯಕ್ತಿ ಸೇಡಿನಿಂದ ಕೊ*ಲೆಗೆ ಸಂಚು ರೂಪಿಸಿದ್ದಾನೆ ಎಂದು ಬಂಧಿತರು ತಪ್ಪೊಪ್ಪಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.ಡಿವೈಎಸ್ಪಿಗಳಾದ ಶಿವನಗೌಡ ಪಾಟೀಲ್, ಎಸ್.ಎನ್. ಸನಾದಿ ನೇತೃತ್ವದಲ್ಲಿ ನೂತನ ನಗರ ಠಾಣೆ ಸಿಪಿಐ ವಿಜಯಕುಮಾರ ಬಾವಗಿ, ಪಿಎಸ್ಐಗಳಾದ ಪ್ರಭಾಕರ್ ಪಾಟೀಲ್, ಸೈಯದ್ ಪಟೇಲ್, ಅಬ್ದುಲ್ ಸಮದ್, ಹುಲೆಪ್ಪ, ಸಿಬ್ಬಂದಿ ರಾಹುಲ್, ಪ್ರಕಾಶ, ಸತೀಶ್, ನವೀನ್, ಗಂಗಾಧರ ಅವರನ್ನು ಒಳಗೊಂಡ ತಂಡವು ಪ್ರಕರಣವನ್ನು ಭೇದಿಸಿದೆ ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ಹೆಚ್ಚುವರಿ ಎಸ್.ಪಿ ಚಂದ್ರಕಾಂತ ಪೂಜಾರಿ ಇದ್ದರು.

### ರಕ್ಷಣೆಗೆ ಹೆಚ್ಚು ಒತ್ತು ನೀಡಿದೆ : ಮೋದಿ

ಆರೋಗ್ಯಕರ ಜಗತ್ತನ್ನು ನಿರ್ಮಿಸುವ ನಮ್ಮ ಬದ್ಧತೆಯನ್ನು ಪುನರುಚ್ಚರಿಸೋಣ ಎಂದು ಅವರು ಹೇಳಿದರು. ಉತ್ತಮ ಆರೋಗ್ಯವು ಅಭಿವೃದ್ಧಿ ಹೊಂದುತ್ತಿರುವ ಪ್ರತಿಯೊಂದು ಸಮಾಜದ ಅಡಿಪಾಯವಾಗಿದೆ ಎಂದು ಅವರು ತಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ್ದಾರೆ.

### ಹೊತ್ತಿ ಉರಿದ ಗುಜರಿ ಅಂಗಡಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಏ.7: ನಗರದ ಕೈಗಾರಿಕಾ ಪ್ರದೇಶದಲ್ಲಿ ಇರುವ ಗುಜರಿ ಅಂಗಡಿಗೆ ಭಾರೀ ಪ್ರಮಾಣದ ಬೆಂಕಿ ಹತ್ತಿಕೊಂಡು ಪಕ್ಕದ ಅಂಗಡಿಗಳಿಗೂ ಅಪಾರ ಹಾನಿಯನ್ನುಂಟು ಮಾಡಿರುವ ಘಟನೆ ಸೋಮವಾರ ಸಂಭವಿಸಿದೆ.

ವರ್ತುಲ ರಸ್ತೆ ಪ್ರದೇಶದಲ್ಲಿ ಇರುವ ಕೈಗಾರಿಕಾ ಬಡಾವಣೆಯಲ್ಲಿ ಬಾಬಾ ಗುಜರಿ ಅಂಗಡಿಯ ಗೋದಾಮಿಗೆ ಭಾರೀ ಪ್ರಮಾಣದಲ್ಲಿ ಬೆಂಕಿ ಅವಘಡ ಸಂಭವಿಸಿ, ಅಪಾರ ಪ್ರಮಾಣದ ಹಾನಿಯನ್ನುಂಟು ಆಗಿದೆ. ಸ್ಥಳಕ್ಕೆ ಬಂದ ಅಗ್ನಿಶಾಮಕ ದಳದ ಸಿಬ್ಬಂದಿಗಳು ಬೆಂಕಿ ಶಮನಗೊಳಿಸಲು ಹರಸಾಹಸಪಟ್ಟರು. ಗ್ರಾಮೀಣ ಪೋಲಿಸ್ ಠಾಣೆಯ ವ್ಯಾಪ್ತಿಯಲ್ಲಿ ಅಗ್ನಿ ಅನಾಹುತ ಸಂಭವಿಸಿದೆ.

### ಗೋಪಾನಪಲ್ಲಿ ಗ್ರಾಮದಲ್ಲಿ ನಮ್ಮ ಊರು ನಮ್ಮ ಕೆರೆ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಸೇಡಂ.ಏ. 07: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್. (ರಿ,)ಸೇಡಂ ತಾಲೂಕಿನ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಲ್ಲಿ ಆಯ್ಕೆಯಾದ 752 ನೇಯ ದೇವಿ ಕೆರೆಯ ನಾಮಫಲಕ ಅನಾವರಣ ಮತ್ತು ಕೆರೆ ಹಸ್ತಾಂತರ ಕಾರ್ಯಕ್ರಮವನ್ನು ಡಾ. ಶರಣ ಪ್ರಕಾಶ ಪಾಟೀಲ ಊಡಗಿ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು ಕಾರ್ಯಕ್ರಮ ಉದ್ಘಾಟಿಸಿದರು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆಯು ಗ್ರಾಮೀಣ ಜನರ ಅಭಿವೃದ್ಧಿಗಾಗಿ ಶ್ರಮಿಸುತ್ತಿದೆ. ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸ್ವಸಹಾಯ ಸಂಘಗಳನ್ನು ಮಾಡಿ ಅವುಗಳಿಗೆ ನೇರವಾಗಿ ಬ್ಯಾಂಕಿನಿಂದ ಕಡಿಮೆ ಬಡ್ಡಿ ದರದಲ್ಲಿ ಪ್ರಗತಿ ನಿಧಿ ನೀಡುವಂತ ವ್ಯವಸ್ಥೆ ಮಾಡಿದೆ. ಮಾಶಾಸನ ಕಾರ್ಯಕ್ರಮ, ವಾತ್ಸಲ್ಯ ಮನೆ ಕಾರ್ಯಕ್ರಮಗಳನ್ನು ಮಾಡುತ್ತಿದೆ ಎಂದರು. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ವಹಿಸಿದ ಮ.ನಿ.ಪ್ರ ಪಂಚಾಕ್ಷರಿ ಮಹಾಸ್ವಾಮೀಜಿಯವರು

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ನಮ್ಮೂರ ನಮ್ಮ ಕೆರೆ, ದೇವಸ್ಥಾನ ಜೀರ್ಣೋದ್ಧಾರ, ಸಮುದಾಯ ಅಭಿವೃದ್ಧಿ ಕಾರ್ಯಕ್ರಮ, ನಿರ್ಗತಿಕರಿಗೆ ಮಾಶಾಸನ ಮತ್ತು ವಾತ್ಸಲ್ಯ ಮನೆ ನಿರ್ಮಾಣ ಮಾಡಿಸಿ ಕೊಡುತ್ತಿದೆ ಸಮಾಜದಲ್ಲಿ ಬದಲಾವಣೆಗಾಗಿ ಗ್ರಾಮ ಅಭಿವೃದ್ಧಿ ಯೋಜನೆ ಹತ್ತಲುವಾರು ಕಾರ್ಯಕ್ರಮಗಳನ್ನು ಕಾರ್ಯರೂಪದಲ್ಲಿ ಬಂದಿವೆ.

ಸದಾಶಿವರೆಡ್ಡಿ ಗೋಪಾನಪಲ್ಲಿ ನಮ್ಮ ಗ್ರಾಮದಲ್ಲಿ ನಮ್ಮೂರ ನಮ್ಮ ಕೆರೆಯ ಕಾರ್ಯಕ್ರಮದಡಿಯಲ್ಲಿ ಒಳ್ಳೆಯ ರೀತಿಯಲ್ಲಿ ಕೆರೆ ಹೊಳೆತ್ತಿರುವುದು ನಮಗೆ ಸಂತಸ ತಂದಿದೆ. ಈ ಸಂಸ್ಥೆಯಲ್ಲಿ ಇರುವ ಸೌಲಭ್ಯಗಳನ್ನು ಪಡೆದುಕೊಂಡು ಎಂದು ಮಾತನಾಡಿದರು.

ಈ ಸಂದರ್ಭದಲ್ಲಿ ಗಣಪತಿ ಮಾಳಂಜಿ ನಿರ್ದೇಶಕರು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್(ರಿ,) ಕಲಬುರ್ಗಿ ಜಿಲ್ಲೆ.

ಶ್ರೀಮತಿ ಪದ್ಮಮ್ಮ ರಾಮರೆಡ್ಡಿ ಅಧ್ಯಕ್ಷರು ಗ್ರಾಮ ಪಂಚಾಯತ್ ಲಿಂಗಂಪಲ್ಲಿ,

ಮಸೂದನ್‌ರೆಡ್ಡಿ ಮಾಲಿಪಾಟೀಲ್ ನಿರ್ದೇಶಕರು ಕೃಷಿ ವಿಶ್ವವಿದ್ಯಾಲಯ ರಾಯಚೂರು, ದಾಮೋದರ್ ರೆಡ್ಡಿ ಪಾಟೀಲ್ ಮಾಜಿ ಸದಸ್ಯರು ಜಿಲ್ಲಾ ಪಂಚಾಯತ್ ಮುಧೋಳ್ ಕ್ಷೇತ್ರ, ರವಿ ನಂದಿಗಾಂವ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮುಧೋಳ, ವೆಂಕಟರೆಡ್ಡಿ ಕಡತಾಲ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಮುಧೋಳ, ಲಕ್ಷ್ಮಿಕಾಂತ್ ಕುಲಕರ್ಣಿ ಮಾಜಿ ತಾಲೂಕು ಪಂಚಾಯಿತಿ ಸದಸ್ಯರು ಮತ್ತು ಊರಿನ ಎಲ್ಲಾ ಗ್ರಾಮಸ್ಥರು ಉಪಸ್ಥಿತರಿದ್ದರು.

### 19ರ ಯುವತಿಯ ಕಿಡ್ನ್ಯಾಪ್ : 22 ಮಂದಿ ಕಾಮುಕರಿಂದ ಗ್ಯಾಂಗ್ ರೇಪ್

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಏ.7: 19 ವರ್ಷದ ಯುವತಿಯನ್ನ ಅಪಹರಿಸಿ 22 ಮಂದಿ ದಿನವಿಡೀ ಸಾಮೂಹಿಕ ಅತ್ಯಾಚಾರ ಎಸಗಿರುವ ಘಟನೆ ಉತ್ತರ ಪ್ರದೇಶದ ವಾರಣಾಸಿಯಲ್ಲಿ ನಡೆದಿದೆ. ಘಟನೆಗೆ ಸಂಬಂಧಿಸಿದಂತೆ 6 ಮಂದಿಯನ್ನು ಬಂಧಿಸಲಾಗಿದ್ದು, ಉಳಿದವರಿಗಾಗಿ ಶೋಧ ನಡೆಸಲಾಗುತ್ತಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಉತ್ತರ ವಾರಣಾಸಿಯ ಲಾಲ್‌ಪುರ್ ಪ್ರದೇಶದ ನಿವಾಸಿಯಾಗಿರುವ ಯುವತಿ ಕಳೆದ ಮಾರ್ಚ್ 29ರಂದು ತನ್ನ ಸ್ನೇಹಿತರನ್ನ ಭೇಟಿಯಾಗಲು ಮನೆಯಿಂದ ಹೊರಟಿದ್ದಳು. ಇದೇ ರೀತಿ ಆಗಾಗ್ಗೆ ತನ್ನ ಸ್ನೇಹಿತರನ್ನ ಭೇಟಿಯಾಗಿ ಯಾವುದೇ ತೊಂದರೆ ಇಲ್ಲದೇ ಮನೆಗೆ ಬರುತ್ತಿದ್ದಳು. ಆದ್ರೆ ಅಂದು ಮನೆಗೆ ಮರಳಲು ಸಾಧ್ಯವಾಗಲಿಲ್ಲ. ಕೊನೆಗೆ ಊರೆಲ್ಲ ಹುಡುಕಾಡಿದರೂ ಸಿಗದಿದ್ದ ಕಾರಣ ಪೋಷಕರು ಏಪ್ರಿಲ್ 4ರಂದು ಪೊಲೀಸರಿಗೆ ದೂರು ನೀಡಿದ್ದರು.

### ಚಳಕಾಪುರ: ಸಿದ್ಧಾರೂಢರ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಏ.7:ತಾಲ್ಲೂಕಿನ ಚಳಕಾಪುರ ಗ್ರಾಮದಲ್ಲಿ ಸಿದ್ಧಾರೂಢರ ಜಾತ್ರಾ ಮಹೋತ್ಸವ ನಿಮಿತ್ತ ಸಿದ್ಧಾರೂಢರ ರಥೋತ್ಸವ ನಡೆಯಿತು.

ಸಿದ್ಧಾರೂಢರ ಮಠದಿಂದ ಆರಂಭವಾದ ರಥೋತ್ಸವ ಸಿದ್ಧಾರೂಢರು ಜನಿಸಿದ ಮನೆಗೆ ತೆರಳಿ ಪುನಃ ಮಠಕ್ಕೆ ಮರಳಿತು. ರಥೋತ್ಸವದಲ್ಲಿ ಪುರವಂತರ ಕುಣಿತ ಸರ್ವರ ಗಮನ ಸೆಳೆಯಿತು.

ರಥೋತ್ಸವದಲ್ಲಿ ಶಿವಕುಮಾರ ಸ್ವಾಮೀಜಿ, ಶಂಕರಾನಂದ ಸ್ವಾಮೀಜಿ, ಪುರವಂತರಾದ ಧೂಳಯ್ಯಸ್ವಾಮಿ, ಸಂತೋಷ ಬೆಟ್ಟದ, ಸಂಜು ಜೈನಾಪುರ, ಕಾಶಿನಾಥ ಬೆಟ್ಟದ, ಬಸವರಾಜ ಕೊಂಡಿ, ಕಲ್ಲಪ್ಪ ರುದ್ರಪ್ಪನೋರ್, ಸುಭಾಷ ಕೆನಡೆ ಇದ್ದರು.

### ನಮ್ಮ ಹೊಲ ನಮ್ಮ ರಸ್ತೆ ಯೋಜನೆ ಅಡಿ ರಸ್ತೆ ನಿರ್ಮಾಣ ಕುರಿತು ಅರ್ಜಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಏ.7: ಸೊಸೈಟಿ ಆಫ್ ಫಾರ್ಮರ್ಸ್ ಕಮ್ಯುನಿಟಿ(ರೈತ ಸಂಘ) ಹೊಳಸಮುದ್ರ ವತಿಯಿಂದ "ನಮ್ಮ ಹೊಲ ನಮ್ಮ ರಸ್ತೆ" ಯೋಜನೆ ಅಡಿ ರಸ್ತೆ ನಿರ್ಮಾಣ ಕುರಿತು ತಹಸೀಲ್ದಾರ ಅವರಿಗೆ ಬರೆದ ಮನವಿ ಪತ್ರ ಸೋಮವಾರ ಗ್ರೇಡ-2 ತಹಸೀಲ್ದಾರ ರಮೇಶ ಪೆದ್ದೆ ಅವರ ಮೂಲಕ ಸಲ್ಲಿಸಲಾಯಿತು. ಈ ಸಂಬಂಧ ಮಾತನಾಡಿದ ಸಾಮಾಜಿಕ ಹೋರಾಟಗಾರ ಭೀಮ ಹಂಗರಗೆ ನಮ್ಮ ಹೊಲ ನಮ್ಮ ರಸ್ತೆ ಯೋಜನೆ,

2022-23ನೇ ಸಾಲಿನ ನರೇಗಾ ಯೋಜನೆಯ ಕಾರ್ಯಾಚರಣೆ-ಯ ಮಾರ್ಗಸೂಚಿಗಳಂತೆ ರೈತರ ಹೊಲಗದ್ದೆ/ತೋಟ/ ಜಮೀನುಗಳಿಗೆ ರಸ್ತೆ ಸಂಪರ್ಕವನ್ನು ಕಲ್ಪಿಸುವ ಕಾಮಗಾರಿಗಳನ್ನು ತೆಗೆದುಕೊಳ್ಳಲು ತೀರ್ಮಾನಿಸಿ ರಾಜ್ಯ ಸರಕಾರ ಆದೇಶ ಬಗ್ಗೆ ಉಲ್ಲೇಖ ಮಾಡಿದರು.

ತಾಲೂಕಿನ ಹೊಳಸಮುದ್ರ ಗ್ರಾಮದ ರೈತರಿಗೆ ಹೊಲಕ್ಕೆ ಹೋಗಲು ರಸ್ತೆ ಸಮಸ್ಯೆ ಆಗುತ್ತಿದ್ದು, ತೋರಣ ರಸ್ತೆಯಿಂದ ಪ್ರಾರಂಭವಾಗಿ ಹೆಬ್ಬಾಳ ನದಿಯಲ್ಲಿ ಕೊನೆಗೊಳ್ಳುವ ಕಾಲು ದಾರಿ ನಮ್ಮ ಹೊಲಗಳ ಮೂಲಕ ಹಾದುಹೋಗುತ್ತದೆ. ಆದಾಗ್ಯೂ ರಸ್ತೆ ಇಲ್ಲದಿರುವುದರಿಂದ ಕೃಷಿ, ಕೊಯ್ದು ಮತ್ತು ಇತರ ಅಗತ್ಯ ಕಾರ್ಯಗಳನ್ನು ನಿರ್ವಹಿಸುವುದು ನಮಗೆ ಸವಾಲಿನ ಸಂಗತಿಯಾಗಿದೆ. ಈ ಸಮಸ್ಯೆಯನ್ನು ಪರಿಹರಿಸಲು, ಕಾಲು ರೋಡ ಎರಡೂ ಬದಿಗಳಲ್ಲಿರುವ ರೈತರಾದ ನಾವು, 10 ಅಡಿ ಅಗಲದ ಶ್ರೇಣೀಕೃತ ರಸ್ತೆಯನ್ನು ರಚಿಸಲು ಪ್ರತಿ ಬದಿಯಿಂದ 5 ಅಡಿ ಭೂಮಿಯನ್ನು ಕೊಡುಗೆ-ಯಾಗಿ ನೀಡಲು ರೈತರು ಒಪ್ಪಿಕೊಂಡಿದ್ದಾರೆ,

ಎಲ್ಲಾ 18 ರೈತರ ಸಹಿ ಮಾಡಿದ ಅರ್ಜಿಯನ್ನು ಮಾನ್ಯ ತಹಸೀಲ್ದಾರ ಮತ್ತು ತಾ. ಪಂ. ಕಾರ್ಯ ನಿರ್ವಾಹಕ ಅಧಿಕಾರಗಳ ಕಚೇರಿಗೆ ಬಂಧು ಸಲ್ಲಿಸಿದ್ದೇವೆ. ಅವರಿಂದ ಸಕಾರಾತ್ಮಕ ವಿಶ್ವಾಸ ಬಂದಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ರೈತರಾದ ನಾನರಾವ ಮಾಧವರಾವ ಶಿಂದೆ, ತ್ರಿಂಬಕ ಬಾಜಿರಾವ, ವೆಂಕಟರಾವ ಬಾಜಿರಾವ, ಸಂತೋಷ ಅಡೆಪ್ಪ, ಅಶೋಕ ಚನ್ನಬಸಪ್ಪ, ಉಮಾಕಾಂತ ವಿಠ್ಠಲರಾವ, ಚಂದ್ರಕಾಂತ ವಿಠ್ಠಲರಾವ, ಪ್ರಭು ಚನ್ನಬಸಪ್ಪ, ಹರಿದೇವ ಧೊಂಡಿಬಾ, ಪುಂಡಲೀಕ ಧೊಂಡಿಬಾ, ತುಕಾರಾಮ ಮಾಧವರಾವ, ನಾನಾರಾವ ಮಾಧವರಾವ, ಮನೋಹರ ಕೋಳಿ, ಕೆರಬಾ ಕೋಳಿ, ಜಗದೀಶ ಗೋವಿಂದ, ಪಾಂಡುರಂಗ ವೆಂಕಟ, ಸತೀಶ ವೆಂಕಟ, ಸಂತ್ರಾಮ ಕೇರ, ಸಂಗಮೇಶ ಮುರ್ಕೆ ಸೇರಿದಂತೆ ಇನ್ನಿತರ ಇದ್ದರು.

### ಡಾ.ಬಿ.ಆರ್.ಅಂಬೇಡ್ಕರ್ ಅವರ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆ ಇಂದು

ಮಲ್ಲಮ್ಮ ನುಡಿ ವಾರ್ತೆ

ಬೀದರ: ಏ.7: ಇದೇ ಏಪ್ರಿಲ್.14 ರಂದು ಡಾ॥ ಬಿ.ಆರ್. ಅಂಬೇಡ್ಕರರವರ 134ನೇ ಜಯಂತಿಯನ್ನು ಆಚರಿಸುವ ಕುರಿತು ದಿನಾಂಕ: 08-04-2025 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ ಎಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಈ ಪೂರ್ವಭಾವಿ ಸಭೆಗೆ ದಲಿತ ಸಂಘಟನೆಗಳ ಪದಾಧಿಕಾರಿಗಳು, ಮಹಿಳಾ ಸಂಘಟನೆಗಳ ಪದಾಧಿಕಾರಿಗಳು, ಎಲ್ಲಾ ಧಾರ್ಮಿಕ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಕನ್ನಡ ಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಇತರೆ ಎಲ್ಲಾ ಸಂಘಟನೆ, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಅವರು ತಿಳಿಸಿದ್ದಾರೆ.

# ಅನಗತ್ಯಾಗಿ ಕಚೇರಿಗೆ ಅಲೆದಾಡಿಸುವುದನ್ನು ತಪ್ಪಿಸಬೇಕು; ಲೋಕಾಯುಕ್ತ ಎಸ್ಪಿ:- ಉಮೇಶ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಸಾರ್ವಜನಿಕರ ಕೆಲಸಗಳನ್ನು ಸಕಾಲದಲ್ಲಿ ಮಾಡಿಕೊಡುವ ಮೂಲಕ ಸರ್ಕಾರಿ ವ್ಯವಸ್ಥೆ ಬಗ್ಗೆ ಜನರಿಗೆ ವಿಶ್ವಾಸ ಮೂಡುವಂತೆ ಮಾಡಲು ಸರ್ಕಾರಿ ಸಿಬ್ಬಂದಿಗಳು ಮುಂದಾಗಬೇಕು ಎಂದು ಲೋಕಾಯುಕ್ತ ಎಸ್‌ಪಿ ಉಮೇಶ್ ಬಿ. ಕೆ. ಹೇಳಿದರು. ಪಟ್ಟಣದಲ್ಲಿ ಗುರುವಾರ ನಡೆದ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಪಾಲ್ಗೊಂಡು ಸಾರ್ವಜನಿಕರ ಕುಂದುಕೊರತೆ ಆಲಿಸಿ ಅವರು ಮಾತನಾಡಿದರು. ಅಧಿಕಾರಿಗಳು ಪಾರದರ್ಶಕವಾಗಿ ಕೆಲಸ ಮಾಡಬೇಕು. ಸಾಮಾನ್ಯ ಜನರನ್ನು ಸರ್ಕಾರಿ ಕಚೇರಿಗಳಿಗೆ ಅನಗತ್ಯಾಗಿ ಅಲೆದಾಡಿಸುವ ಪರಿಪಾಠವನ್ನು ತಪ್ಪಿಸಬೇಕು. ನಿಗದಿತ ಕಾಲಮಿತಿಯಲ್ಲಿ ಸಾರ್ವಜನಿಕರ ಕೆಲಸಗಳನ್ನು ಮುಗಿಸಬೇಕು. ಆ ಮೂಲಕವಾಗಿ ಜನಸ್ನೇಹಿ ಆಡಳಿತ ಮಾಡಬೇಕು ಎಂದರು. ಜಾತಿ, ಆದಾಯ ಸೇರಿದಂತೆ ವಿವಿಧ ಪ್ರಮಾಣ ಪತ್ರ ಪಡೆಯಲು ಹರಸಾಹಸ ಪಡಬೇಕಿದೆ ಎಂದು ಸಾರ್ವಜನಿಕರೊಬ್ಬರು ದೂರಿದರು. ಸಕಾಲದಲ್ಲಿ ಇಷ್ಟು ದಿನದೊಳಗೆ ಪ್ರಮಾಣ ಪತ್ರ ನೀಡಬೇಕು ಎಂಬ ಆದೇಶ ಇದ್ದರೂ ಸಹ, ಸತಾಯಿಸುತ್ತಿದ್ದಾರೆ. ಜಾತಿ, ಆದಾಯ ಮತ್ತಿತರ ಪ್ರಮಾಣ ಪತ್ರ ಪಡೆಯಲು ಅಗತ್ಯ ದಾಖಲಾತಿಯ ಮಾಹಿತಿ ಫಲಕವನ್ನು ಅಳವಡಿಸಿದ್ದಲ್ಲಿ ಒದಗಿಸಲಾಗುವುದು, ಆದ-ರೆ ಸತಾಯಿಸುವುದು ಏಕೆ ಎಂದು ಸಾರ್ವಜನಿಕರೊಬ್ಬರು ಅಳಲುತೊಡಿಕೊಂಡರು. ಈ ಬಗ್ಗೆ ಪ್ರತಿಕ್ರಿಯಿಸಿದ ಲೋಕಾಯುಕ್ತ ಎಸ್‌ಪಿ ಉಮೇಶ್ ಬಿ.ಕೆ. ಅವರು ಅನಗತ್ಯವಾಗಿ ಸತಾಯಿಸುತ್ತಿದ್ದರೆ ಲೋಕಾಯುಕ್ತ ನಿಯಮನುಸಾರ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು. ಇದೊಂದು ಗಂಭೀರ ವಿಚಾರವಾಗಿದ್ದು, ಯಾರನ್ನು ಸಹ ಸತಾಯಿಸದೆ ಗೌರವದಿಂದ ಕಾಣಬೇಕು. ಪ್ರಮಾಣ ಪತ್ರ ಪಡೆಯಲು ಅಗತ್ಯ ದಾಖಲೆಗಳನ್ನು ಸಲ್ಲಿಸದೇ ಇದ್ದಲ್ಲಿ, ಹಿಂಬರಹವನ್ನಾದರೂ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಅಂಗನವಾಡಿ ಕಾರ್ಯಕರ್ತೆಯರನ್ನು ನೇಮಕಾತಿಯಲ್ಲಿ ಸ್ಥಳೀಯರಿಗೆ ಮೊದಲ ಅವಕಾಶ ನೀಡಬೇಕು ಎಂದು ಸುತ್ತೋಲೆ ಇದರೂ ಕೂಡ ಬೇರೆ ಗ್ರಾಮದವರಿಗೆ ನೇಮಕಾತಿ ಮಾಡಿಕೊಂಡಿದ್ದಾರೆ

# ಬಿಜೆಪಿ ಪಕ್ಷದ 45ನೇ ಸಂಸ್ಥಾಪನಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಭಾರತೀಯ ಜನತಾ ಪಕ್ಷದ 45ನೇ ಸಂಸ್ಥಾಪನಾ ದಿನಾಚರಣೆ ನಿಮಿತ್ಯ ಪುರಸಭೆ ಮಾಜಿ ಅಧ್ಯ-ಕ್ಷೆ ಮಾಲಾಶ್ರೀ ಎಸ್. ಭುತ್ತಾಳೆ ಅವರ ಮನೆಯ ಮೇಲೆ ಪಕ್ಷದ ಧ್ವಜಾರೋಹಣ ಮಾಡುವುದರ ಮೂಲಕ 45ನೇ ಸಂಸ್ಥಾಪನಾ ದಿನಾಚರಣೆ ಆಚರಿಸಿದರು. ಈ ಸಂದರ್ಭದಲ್ಲಿ ಶಾಮರಾವ ಭುತ್ತಾಳೆ, ಕರಣಕುಮಾರ, ಅಮೃತ, ನವೀನ್ ಉಪಸ್ಥಿತರಿದ್ದರು.

# ದೌರ್ಜನ್ಯದಿಂದ ರೈತರ ಜಮೀನು ಸರ್ವೆ ಮಾಡಿದ ಅಧಿಕಾರಿಗಳು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರ ಕಂದಾಯ ಇಲಾಖೆಯ ಅಧಿಕಾರಿಗಳು ಪಕ್ಕದ ಸರ್ವೆ ನಂಬರ್ ಅಳತೆ ಮಾಡಲು ಬಂದು ದೌರ್ಜನ್ಯ ಮಾಡಿ ನನ್ನ ಜಮೀನನ್ನು ಅಳತೆ ಮಾಡಿ ತೇಜೋವಧೆ ಮಾಡಿರುತ್ತಾರೆ ಎಂದು ರೈತ ಹನುಮಂತಪ್ಪ ಹೇಳಿದರು.

ಕುಕನೂರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಹನುಮಂತಪ್ಪ ಸಂಗತಿ ಮಾತನಾಡುತ್ತ ತಾಲೂಕಿನ ಇಟಗಿ ಗ್ರಾಮದಲ್ಲಿ ಕೃಷಿ ಜಮೀನನ್ನು ತಾವು ಹೊಂದಿದ್ದು ಸರ್ವೆ ನಂಬರ್ 498 ಆಗಿದ್ದು 6 ಎಕರೆ 25 ವಿಸ್ತೀರ್ಣ ಹೊಂದಿರುತ್ತದೆ. ಪಕ್ಕದಲ್ಲಿರುವ 497 ಸರ್ವೇ ನಂಬರ್ ನಲ್ಲಿ 1995-96ನೇ ಸಾಲಿನಲ್ಲಿ ಆಶ್ರಯ ಯೋಜನೆ ಹಾಗೂ ನಿವೇಶಕ್ಕಾಗಿ ರೈತರಿಂದ ಸರಕಾರ ಭೂಮಿ ಖರೀದಿ ಮಾಡಿ ನಿವೇಶನ ನಿರ್ಮಾಣ ಮಾಡಿದ್ದು 113 ನಿವೇಶನಗಳಲ್ಲಿ ಬಹುತೇಕ ನಿವೇಶನಗಳನ್ನು ಉಳ್ಳವರಿಗೆ ಹಾಗೂ ಒಂದೊಂದು ಕುಟುಂಬಕ್ಕೆ ಎರಡರಿಂದ ಮೂರು ನಿಮಿಷಗಳನ್ನು ನೀಡಿರುತ್ತಾರೆ. ಜೊತೆಗೆ ಇತ್ತೀಚಿಗೆ ಮಾರ್ಚ್ ಆರರಂದು ಈ ನಿವೇಶನವುಳ್ಳ ಜಮೀನನ್ನು ಸರ್ವೆ ಕಾರ್ಯಕ್ಕೆ ಎಂದು ಆಗಮಿಸಿದ ಅಧಿಕಾರಿಗಳು ದೌರ್ಜನ್ಯ ತೋರಿ 497 ಸರ್ವೇ ನಂಬರ್ ಬದಲು ನನ್ನ ಸರ್ವೇ ನಂಬರ್ 498ರಲ್ಲಿ ದೌರ್ಜನ್ಯದಿಂದ ಅಳತೆ ಮಾಡಿಕೊಂಡು ಹೋಗಿರುವುದು ಹಲವು ಅನುಮಾನವನ್ನು ಸೃಷ್ಟಿ ಮಾಡಿದೆ ಜೊತೆಗೆ ನನಗೆ ಸಹಿ ಮಾಡುವಂತೆ ಕಂದಾಯ ಇಲಾಖೆಯ ಅಧಿಕಾರಿಗಳು ಒತ್ತಾಯಿಸಿದ್ದು ನಾನು ಒಪ್ಪದೆ ಇದ್ದದ್ದರಿಂದ ಗ್ರಾಮದ ಪಂಚಾಯತ್ ಕಾರ್ಯಾಲಯದ ಅಭಿವೃದ್ಧಿ ಅಧಿಕಾರಿ ಪಕ್ಕದ ಬಡಾವಣೆಯಲ್ಲಿ ಸಿಸಿ ರಸ್ತೆ ಹಾಗೂ ಚರಂಡಿ ಕಾಮಗಾರಿ ನಿರ್ಮಾಣ ಮಾಡಲು ತಕರಾರು ನೀಡಿರುವುದಾಗಿ ಮೇಲಾಧಿಕಾರಿಗೆ ವರದಿ ನೀಡಿರುತ್ತಾರೆ.

ಮುಖ್ಯವಾಗಿ ನಾನು ನನ್ನ ಜಮೀನನ್ನು ಸರ್ವೆಗೆ ಅರ್ಜಿ ಸಲ್ಲಿಸದೇ ಇದ್ದರೂ ಸಹ ಯಾವುದೇ ನೋಟಿಸ್ ನೀಡದೆ ಏಕಾಏಕಿ ನನ್ನ ಜಮೀನಿಗೆ ಆಗಮಿಸಿ ಅಧಿಕಾರಿಗಳು ಸರ್ವೆ ಕಾರ್ಯ ಮಾಡಿದ್ದು ಸಹಿ ಮಾಡದೆ ಇರುವ ನನ್ನ ಮೇಲೆ ಅಭಿವೃದ್ಧಿ ಅಧಿಕಾರಿಗಳು ಇಲ್ಲ ಸಲ್ಲದ ಆರೋಪ ಮಾಡಿ ತೇಜವುದೇ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ತಕ್ಷಣವೇ ಅಧಿಕಾರಿಗಳು ಈ ಎಲ್ಲಾ ದೌರ್ಜನವನ್ನು ನಿಲ್ಲಿಸದೆ ಹೋದಲ್ಲಿ ನ್ಯಾಯಾಂಗದ ಮೊರೆ ಹೋಗುವುದಾಗಿ ಎಚ್ಚರಿಕೆ ನೀಡಿದರು. ವೇಳೆಯಲ್ಲಿ ಗ್ರಾಮದ ಪ್ರಮುಖರಾದ ಮಹೇಶ್ ದೊಡ್ಡಮನಿ ಜೊತೆಯಲ್ಲಿದ್ದರು.

# ರಾಮ ಎಂದರೆ ಸತ್ಯದರ್ಶನ - ಹಾರಕೂಡ ಶ್ರೀ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 7 ರಾಮ ಎಂದರೆ ಅದು ನಾಮವಲ್ಲ, ಸತ್ಯದರ್ಶನದ ಸಾಕ್ಷಾತ್ಕಾರವೇ ರಾಮ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡದ ಶ್ರೀರಾಮಲಿಂಗೇಶ್ವರ ದೇವಸ್ಥಾನದಲ್ಲಿ ರಾಮನವಮಿ ಅಂಗವಾಗಿ ಏರ್ಪಡಿಸಿದ ಧರ್ಮ ಸಭೆಯ ಪಾವನ ಸಾನಿಧ್ಯವಹಿಸಿ ಮಾತನಾಡಿ ರಾಮ ಭರತಖಂಡದ ದೊಡ್ಡ ಆದರ್ಶವಾಗಿದ್ದು, ತ್ಯಾಗ, ಸೇವೆ, ಪಿತ್ರವಾಕ್ಯ ಪರಿಪಾಲನೆ, ಸರ್ವರಲ್ಲಿ ಸಹಾನುಭೂತಿ, ಶುದ್ಧ ಅಂತ:ಕರಣ, ಶಿಷ್ಟರಕ್ಷಣೆ, ದುಷ್ಟ ಶಿಕ್ಷೆ ಇವೆಲ್ಲವುಗಳ ಪರಿಪೂರ್ಣ ವ್ಯಕ್ತಿತ್ವವೇ ಶ್ರೀರಾಮಚಂದ್ರ.

ಅಂದು ಶ್ರೀರಾಮಚಂದ್ರರು ಹೊತ್ತಿಸಿದ ದಿವ್ಯಧರ್ಮಜ್ಯೋತಿಯ ಪ್ರಭೆ ಇಂದಿಗೂ ಲೋಕಕಲ್ಯಾಣದ ಚಿರಂತನ ದೀಪ್ತಿಯಾಗಿ ನಿಂತಿರುವುದು ಭಾರತೀಯರ ಹೆಮ್ಮೆ. ಶ್ರೀರಾಮರ ಕಾರುಣ್ಯದಿಂದ ಪ್ರತಿ ಮನೆಯೂ ಅಯೋಧ್ಯೆಯಾಗಲಿ, ಸರ್ವರಿಗೂ ಸರ್ವ ಮಂಗಳವಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ಮಹಾದೇವ ಪೂಜಾರಿ, ವಿಜಯಕುಮಾರ ಸಂಗೋಳಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ನಾಗಣ್ಣ ಪೂಜಾರಿ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಪ್ರಾರ್ಥನಾ ಗೀತೆ. ಮಲ್ಲಪ್ಪ ಖೇಲ್ಡೆ ವಂದಿಸಿದರು.

# ಶಾಂತರಸರು ಕನ್ನಡದ ಗಜಲ್ ಗಾರುಡಿಗ : ರೇವಣಸಿದ್ದಪ್ಪ ದೊರೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:ಏ.7-ಉರ್ದುವಿನ ಕಾವ್ಯರಾಣಿ ಗಜಲ್ ಪ್ರಕಾರವನ್ನು ಕನ್ನಡ ಸಾಹಿತ್ಯಲೋಕಕ್ಕೆ ಪರಿಚಯಿಸಿದ ಶಾಂತರಸರು ಕನ್ನಡದ ಗಜಲ್ ಗಾರುಡಿಗರಾಗಿದ್ದಾರೆ ಎಂದು ರಾಂಪೂರ ಸರ್ಕಾರಿ ಪಿಯು ಕಾಲೇಜು ಉಪನ್ಯಾಸಕರಾದ ರೇವಣಸಿದ್ದಪ್ಪ ದೊರೆ ಹೇಳಿದರು.

ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದಿಂದ ನಗರದ ನಿವೃತ್ತ ಸರ್ಕಾರಿ ನೌಕರರ ಸಂಘದ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ಶಾಂತರಸರ ಜನ್ಮಶತಮಾನೋತ್ಸವ ಪ್ರಯುಕ್ತ ಶಾಂತರಸರ ಗಜಲ್, ಕತೆ, ಕಾದಂಬರಿ ಕುರಿತ ಉಪನ್ಯಾಸ ಸಮಾರಂಭದಲ್ಲಿ ಮಾತನಾಡಿ ಬೇರೆ ಭಾಷೆಯ ಕಾವ್ಯ ಪ್ರಕಾರವಾದ ಗಜಲ್ ಕನ್ನಡಕ್ಕೆ ಪರಿಚಯಿಸಿದ ಹೆಗ್ಗಳಿಕೆ ಶಾಂತರಸರದು ಎಂದರು. ಸ್ವಾತಂತ್ರ್ಯ ಚಳುವಳಿ, ಏಕೀಕರಣ, ವಿಮೋಚನಾ ಚಳವಳಿ ಸೇರಿ ಈ ನೆಲದ ಜನ ಸಮುದಾಯದ ಎದುರಿಸಿದ ಬಿಕ್ಕಟ್ಟುಗಳನ್ನು ಅವರ ಕತೆ, ಕಾದಂಬರಿಗಳಲ್ಲಿ ವಸ್ತುವಾಯಿತು. ಬದುಕಿನ ಉತ್ಕಟ ಪ್ರೇಮ, ನಶ್ವರತೆ, ಜೀವನದ ಚಲನೆ ಗಜಲ್ ಗಳ ವಸ್ತುವಾಯಿತು ಎಂದರು.

ಡಾ. ಜಯದೇವಿತಾಯಿ ಲಿಗಾಡೆ ಪ್ರತಿಷ್ಠಾನದ ಅಧ್ಯಕ್ಷ ಎಸ್. ಜಿ. ಹುಡೇದ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಶಾಂತರಸರು ಭಾಲ್ಕಿ ಹಿರೇಮಠದಲ್ಲಿದ್ದು ವ್ಯಾಸಂಗ ಮಾಡಿದ್ದಾರೆ. ವಚನ ಸಾಹಿತ್ಯ ಹಾಗೂ ಪೂಜ್ಯ ಚೆನ್ನಬಸವ ಪಟ್ಟದೇವರ ಪ್ರಭಾವ ಅವರ ಮೇಲೆ ಆಗಿತ್ತು. ಅವರು ಬರೆದ ಸಣ್ಣಗೌಡಸಾನಿ ಊಳಿಗಮಾನ್ಯ ವ್ಯವಸ್ಥೆಯ ಕರಾಳ ಮುಖ ಪರಿಚಯಿಸುತ್ತದೆ ಎಂದರು.

ರಂಗಕರ್ಮಿ ಉಮೇಶ ಪಾಟೀಲ ಶಾಂತರಸರ 'ಗೋದಾನ' ಕತೆಯನ್ನು ನಾಟಕೀಯವಾಗಿ ವಾಚನ. . ನಾಗೇಂದ್ರ ಬಿರಾದಾರ, ನಿತಿನ್ ನಿಲಕಂಠೆ ಗಜಲ್ ಗಾಯನ.

ನಿವೃತ್ತ ಸರ್ಕಾರಿ ನೌಕರರ ಸಂಘದ ಗೌರವಾಧ್ಯಕ್ಷ ಬಸವಣಪ್ಪಾ ನೆಲೋಗಿ, ಭೀಮಾಶಂಕರ ಮಾಶಾಳಕರ, ಪ್ರೇಮಸಾಗರ ಪಾಟೀಲ, ಚಂದ್ರಕಾಂತ ಅಕ್ಕಣ್ಣ, ಸಂಜುಕುಮಾರ ನಡುಕರ, ರಾಜಶೇಖರ ಬಿರಾದಾರ, ಧರ್ಮಣ್ಣ ಚಿತ್ತಾ, ಅಂಬಾರಾಯ ಸೈದಾಪುರೆ, ಶಿವಪುತ್ರಪ್ಪ ಸಂಗನಬಸವ , ಶಿವಪುತ್ರ ಮಿರಾಜದಾರ, ಬಸವರಾಜ ಮಠಪತಿ, ಮಾಣಿಕಪ್ಪ ಸಂಗನಬಟ್ಟೆ,, ಮಲ್ಲಿಕಾರ್ಜುನ ಛತ್ರೆ, ನಿವರ್ತಿ ಜಾಧವ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಶರಣಬಸವ ಬಿರಾದಾರ ಸ್ವಾಗತಿಸಿದರು. ಪ್ರತಿಷ್ಠಾನದ ಕಾರ್ಯದರ್ಶಿ ದೇವೇಂದ್ರ ಬರಗಾಲೆ ನಿರೂಪಿಸಿದರು.

ಶಾಲಿವಾನ ಕಾಕನಾಳೆ ವಂದಿಸಿದರು.

# ರಾಮಲಿಂಗೇಶ್ವರ ಮಹಿಮೆ ಅಪಾರ:- ಶಾಸಕ ಸಿದ್ದು ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ರಾಮಲಿಂಗೇಶ್ವರ ಮಹಿಮೆ ಅಪಾರವಾಗಿದೆ. ರಾಜಕಾರಣ ಬಂದಾಗ ರಾಜ-ಕಾರಣ ಮಾಡೋಣ ಗ್ರಾಮದ ಅಭಿವೃದ್ಧಿ ವಿಚಾರದಲ್ಲಿ ಎಲ್ಲರೂ ಒಂದಾಗಿರಬೇಕು ಎಂಬುದು ನನ್ನ ಆಶಯ.ಎಂದು ಶಾಸಕ ಡಾ. ಸಿದ್ದು ಪಾಟೀಲ್ ತಾಲೂಕಿನ ರಾಂಪುರ ರಾಮಲಿಂಗೇಶ್ವರ ಜಾತ್ರಾ ಮಹೋತ್ಸವ ಹಾಗೂ ಧರ್ಮಸಭೆ ಕಾರ್ಯಕ್ರಮದಲ್ಲಿ ಮಾತನಾಡುತ್ತಾ ತಿಳಿಸಿದರು. ರಾಮಲಿಂಗೇಶ್ವರ ಮೇಲೆ ಭಕ್ತಿ ಶ್ರದ್ಧೆ ಇಟ್ಟರೆ ನಮ್ಮ ಇಷ್ಟಾರ್ಥಗಳು ಸಿದ್ಧವಾಗುತ್ತವೆ ಎಂದರು. ದೇವಸ್ಥಾನದ ಅಭಿವೃದ್ಧಿಗೆ ನಾನು ಒಬ್ಬ ಸೇವಕನಾಗಿ ಸೇವೆ ಸಲ್ಲಿಸುತ್ತೇನೆ. ಊರು ಅಂದ್ಮೇಲೆ ರಾಜಕೀಯ ಸಾಮಾನ್ಯವೇ, ಗ್ರಾಮದ ವಿಚಾರ ಬಂದಾಗ ಗ್ರಾಮಸ್ಥರು ಒಗ್ಗಟ್ಟಾಗಿ ಕೆಲಸ ಮಾಡಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು. ದೇವಸ್ಥಾನ ಮುಂಭಾಗದಲ್ಲಿ ಸಿಸಿ ರಸ್ತೆ ಹಾಗೂ ಬೋರ್ವೆಲ್, ಶುದ್ಧ ಕುಡಿಯುವ ನೀರಿನ ಘಟಕ ಅತಿ ಶೀಘ್ರದಲ್ಲೇ ಮಾಡಿಕೊಡುವುದಾಗಿ ಹೇಳಿದರು. ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಸುರೇಶ ಮಾಶೆಟ್ಟಿ ಮಾತನಾಡಿ, ಶ್ರೀ ರಾಮಲಿಂಗೇಶ್ವರ ಜಾತ್ರಾ ಮಹೋತ್ಸವ ಅಂಗವಾಗಿ ಮಾರ್ಚ್ 26ರಿಂದ ಏಪ್ರಿಲ್ 6ರ ವರೆಗೆ ಪ್ರವಚನ ಕಾರ್ಯಕ್ರಮ ಜರುಗಿತ್ತು. ಬೆಳಿಗ್ಗೆ 6ಘಂಟೆಗೆ ಕುಂಭ ಮೆರವಣಿಗೆ, ರುದ್ರಭಿಷೇಕ, ಉಚಿತ ಆರೋಗ್ಯ ತಪಾಸಣೆ, ರಾತ್ರಿ ಧರ್ಮಸಭೆ, ರಾಮಲಿಂಗೇಶ್ವರ ತೊಟ್ಟಿಲು ಕಾರ್ಯಕ್ರಮ ಜರುಗಿದವು. ಏಪ್ರಿಲ್ 7ಕ್ಕೆ ಬೆಳಿಗ್ಗೆ ರಾಮಲಿಂಗೇಶ್ವರರಿಗೆ ರುದ್ರಭಿಷೇಕ ಪೂಜೆ, ಪಲ್ಲಕ್ಕಿ ಉತ್ಸವವನ್ನು ಸೋಮವಾರ ರಾತ್ರಿ 8 ಘಂಟೆಗೆ ದೇವಸ್ಥಾನದಿಂದ ಜರುಗಿ ಗ್ರಾಮದ ಪ್ರಮುಖ ರಸ್ತೆಗಳ ಮೂಲಕ ಮರು ದಿನ ಬೆಳಿಗ್ಗೆ ಪಲ್ಲಕ್ಕಿ ದೇವಸ್ಥಾನಕ್ಕೆ ತಲುಪುತ್ತದೆ, ಏಪ್ರಿಲ್ 8ಕ್ಕೆ ಬೆಳಿಗ್ಗೆ 6ಘಂಟೆಗೆ ಜಂಗಿ ಕುಸ್ತಿ ಜರುಗುವುದು ಎಂದು ತಿಳಿಸಿದರು.. ಟ್ರಸ್ಟ್ ಉಪಾಧ್ಯಕ್ಷ ಅಪ್ಪಣ್ಣ ಹಳಕೇರಿ ಮಾತನಾಡಿ ಶ್ರೀ ರಾಮಲಿಂಗೇಶ್ವರ ಭಕ್ತರ ಕಷ್ಟಗಳು ನಿವಾರಿಸಲು ಪವಾಡ ಪುರುಷರಾಗಿದ್ದಾರೆ ಇಲ್ಲಿ ಭಕ್ತಿಯಿಂದ ಬೇಡಿದವರಿಗೆ ಬೇಡಿದ ವರ ಸಿಗುತ್ತದೆ, ರಾಮಲಿಂಗೇಶ್ವರ ಆಶೀರ್ವಾದದಿಂದ ದೇವಸ್ಥಾನ ಅಭಿವೃದ್ಧಿ ಆಗುತ್ತಿದೆ ಎಂದು ಹೇಳಿದರು. ಹಲಬರ್ಗಾ-ಶಿವಣಿ ಮಠದ ಪೀಠಾಧಿಪತಿಗಳಾದ ಹಾವಲಿಂಗೇಶ್ವರ ಸ್ವಾಮಿಗಳು ಆಶೀರ್ವಚನ ನೀಡಿದರು. ಇದೆ ವೇಳೆ ಇತ್ತೀಚಿಗೆ ಅಗಲಿದ ದೇವಸ್ಥಾನ ಟ್ರಸ್ಟ್ ಮಾಜಿ ಅಧ್ಯಕ್ಷ ಮಚೇಂದ್ರ ಪಾಟೀಲ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಟ್ರಸ್ಟಿನ ಗೌರವಾಧ್ಯಕ್ಷರು ಹಾಗೂ ಮಹಾರಾಷ್ಟ್ರ ರಾಜ್ಯದ ಸೋಲಾಪುರನ ಮಾಜಿ ಶಾಸಕ ವಿಶ್ವನಾಥ ಚಕೋಟೆ, ಕಾರ್ಯದರ್ಶಿ ಶಾಮರಾವ್ ಜೋಳದಪಗೆ, ಜಂಟಿ ಕಾರ್ಯದರ್ಶಿ ರಾಮಲಿಂಗಪ್ಪ ಮಾಲಿಪಾಟೀಲ, ಮಾಡೇಪ್ಪ ಪಾಟೀಲ್, ಜಗದೀಶ್ ಮೂಲಗೆ, ಬಾಬುರಾವ್ ಗಣಜಲಖೇಡ, ಬಿಎಸ್ಎಸ್‌ಕೆ ನಿರ್ದೇಶಕ ಮಲ್ಲಿಕಾರ್ಜುನ ಪಾಟೀಲ್, ವಿಶ್ವನಾಥ ಪಾಟೀಲ್, ಪಿಎಸ್ಐ ಬಾಷುಮಿಯಾ ಕೊಂಚೂರ್ ಸೇರಿದಂತೆ ಗ್ರಾಮ ಪಂಚಾಯತ್ ಸದಸ್ಯರು ಉಪಸ್ಥಿತರಿದ್ದರು. ಜಾತ್ರಾ ಮಹೋತ್ಸವಕ್ಕೆ ನೆರೆ ರಾಜ್ಯದ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ ಕರ್ನಾಟಕ ಸೇರಿದಂತೆ ಸಾವಿರಾರು ಭಕ್ತಾದಿಗಳು ಭಾಗವಹಿಸಿ ದೇವರ ದರ್ಶನ ಪಡೆದರು. ಬಂದ ಭಕ್ತಾದಿಗಳಿಗೆ ಅನ್ನ ದಾಸೋಹ ವ್ಯವಸ್ಥೆ ಮಾಡಲಾಗಿತ್ತು.

# ಕುರುಗೋಡು: ಇಂದು ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07-ಕುರುಗೋಡು ಜೆಸ್ಕಾಂ ವ್ಯಾಪ್ತಿಯ ಕುರುಗೋಡು ಪಟ್ಟಣದಲ್ಲಿ ರಸ್ತೆ ಅಗಲೀಕರಣ ಕಾಮಗಾರಿ ತುರ್ತಾಗಿ ಕೈಗೊಳ್ಳುತ್ತಿರುವುದರಿಂದ 110/11ಕೆ.ವಿ ಕುರುಗೋಡು ವಿದ್ಯುತ್ ಉಪ- ಕೇಂದ್ರದ 11ಕೆ.ವಿ ಮಾರ್ಗಗಳಲ್ಲಿ ಏ.08 ರಂದು ಬೆಳಿಗ್ಗೆ 09 ರಿಂದ ಸಂಜೆ 04 ರವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:

ಎಫ್-1 ಕುರುಗೋಡು ಮಾರ್ಗದ ಕುರುಗೋಡು ನಗರ, ಯಲ್ಲಾಪುರ ಕ್ರಾಸ್. ಎಫ್-2 ಗೆಣಿಕೆಹಾಳ್ ಐಪಿ ಫೀಡರ್(ಎಫ್-14 ಫೀಡರ್) ಮಾರ್ಗದ ಹೊಸ ಗೆಣಿಕೆಹಾಳ್, ಹಳೇ ಗೆಣಿಕೆಹಾಳ್, ಬಸವಪುರ, ಅನ್ನಪೂರ್ಣೇಶ್ವರಿ ಕ್ಯಾಂಪ್, ವದ್ದಟ್ಟಿ, ವದ್ದಟ್ಟಿ ಕ್ರಾಸ್ ಕೃಷಿ ಪ್ರದೇಶಗಳು.


ಎಫ್-5 ಸಿಂಧಿಗೇರಿ ಐ.ಪಿ ಫೀಡರ್ ಮಾರ್ಗದ ಬೈಲೂರು, ಮಲ್ಲೇಶ್ವರ ಕ್ಯಾಂಪ್, ಗೋಪಾಲಪುರ ಕ್ಯಾಂಪ್, ಗೂಳೆಪ್ಪ ಮಠದ ಕೃಷಿ ಪ್ರದೇಶಗಳು. ಎಫ್-7 ಬಾದನಹಟ್ಟಿ ಐ.ಪಿ ಫೀಡರ್ ಮಾರ್ಗದ ಬಾದನಹಟ್ಟಿ, ವದ್ದಟ್ಟಿ, ಶ್ರಂಗಳಿ, ಸಿಂಧಿಗೇರಿ, ಶ್ರಿಂಗಳಿ, ಮಾರುತಿ ಕ್ಯಾಂಪ್, ಗಂಗಾಭವಾನಿ ಕ್ಯಾಂಪ್, ಸಪ್ತಗಿರಿ ಕ್ಯಾಂಪ್ ಕೃಷಿ ಪ್ರದೇಶಗಳು.

ಎಫ್-8 ಎಲ್.ಐ.ಎಸ್ ಎನ್.ಜೆ.ವೈ ಫೀಡರ್ ಮಾರ್ಗದ ಹೊಸಗೆಣಿಕೆಹಾಳ್, ಹಳೇ ಗೆಣಿಕೆಹಾಳ್, ಕ್ಯಾದಿಗೆಹಾಳ್, ಬಸವಪುರ, ಕ್ಯಾದಿಗೆ ಹಾಳ್ ಕ್ರಾಸ್ ಹಾಗೂ ಇತರೆ ಗ್ರಾಮಗಳು.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕುರುಗೋಡು ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಚಿಟಗುಪ್ಪ:- ಕರ್ನಾಟಕ ರಾಜ್ಯದ ಹಜ್ ಕಮಿಟಿಯ ರಾಜ್ಯಾಧ್ಯಕ್ಷ ಝುಲ್ಫೆಕರ್ ಅಹ್ಮದ್ ಖಾನ (ಟಿಪು) ಅವರು ಚಿಟಗುಪ್ಪ ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಪಟ್ಟಣದ ಉದ್ಯಮಿಗಳು, ಸಮಾಜ ಕಾರ್ಯಕರ್ತರು ಜಾಮಿಯಾ ನೂರುಲ್ ಇಸ್ಲಾಂ ಶಾಲೆಯ ಪ್ರಧಾನ ಕಾರ್ಯದರ್ಶಿ ಮಹಮ್ಮದ್ ಅಸ್ಲಾಂಮಿಯಾ ಅವರು ಸನ್ಮಾನಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಪುರಸಭೆ ಉಪಾಧ್ಯಕ್ಷ ಮುಜಾಫರ್ ಪಟೇಲ್, ಕಾಂಗ್ರೆಸ್ ಹಿರಿಯ ಮುಖಂಡ ಅಶೋಕ ಸ್ವಾಮಿ, ಮೌಲಾನಾ ತಸದ್ದುಖ್ ನದವಿ, ರಾಶೀದ್ ಪಟೇಲ್, ತಬರೇಜ್, ನಸೀರ್ ಖಾನ, ನಸೀರ್ ಹಕಿಮ್, ಹಬ್ಬಿಬ್, ಬಾಬಾ ಆರ್.ಸಿ.ಸಿ., ಮುಫ್ತಿ ಅಬ್ದುಲ್ ವಾಜಿದ್, ಸೇರಿದಂತೆ ಇತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)




ಬಸವಕಲ್ಯಾಣ :- ತಾಲೂಕಿನ ಸುಕ್ಷೇತ್ರ ಹಾರಕೂಡ ಸಂಸ್ಥಾನ ಹಿರೇಮಠದ ದಾಸೋಹ ಮನೆಯಲ್ಲಿ ಶ್ರೀ ರಾಮನವಮಿ ನಿಮಿತ್ಯ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶ್ರೀ ರಾಮನ ಭಾವಚಿತ್ರಕ್ಕೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಅಲ್ಲಮಪ್ರಭು ಹಿರೇಮಠ, ಹೇಮಲತಾ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ )

# ಹುಡಗಿ: ರಾಮನವಮಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಶ್ರೀರಾಮನವಮಿ ಆಂಗವಾಗಿ ತಾಲ್ಲೂಕಿನ ಹುಡಗಿ ಗ್ರಾಮದ ಶ್ರೀ ವಾಲ್ಮೀಕಿ ರಾಮ ಮಂದಿರದಹತ್ತಿರದದಲ್ಲಿರುವ ರಾಮನ ವೃತ್ತದಲ್ಲಿ ರಾಮನ ಭಾವಚಿತ್ರಕ್ಕೆ ಊರಿನ ಗ್ರಾಮಸ್ಥರಿಂದ ವಿಶೇಷ ಪೂಜೆ ನೆರವೇರಿಸಲಾಯಿತ್ತು. ದೇವಸ್ಥಾನದಲ್ಲಿ ಬೆಳಗ್ಗೆಯಿಂದಲ್ಲೇ ನಡೆದ ವಿವಿಧ ಧಾರ್ಮಿಕ ಕಾರ್ಯಕ್ರಗಳಲ್ಲಿ ಭಾಗವಹಿಸಿದ ಭಕ್ತರು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ತಮ್ಮ ತಮ್ಮ ಇಷ್ಟಾರ್ಥಗಳನ್ನು ಈಡೇರಿಸುವಂತೆ ದೇವರಲ್ಲಿ ಪ್ರಾರ್ಥಿಸಿದರು. ಊರಿನ ಗ್ರಾಮಸ್ಥರು ರಾಮ ಮಂದಿರಕ್ಕೆ ತೆರಳಿ ನೈವಿದ್ಯವನ್ನು ಆರ್ಪಿಸಿ ದರ್ಶನ ಪಡೆದು ಪುನೀತರಾದರು. ಭಾನುವಾರ ಸಾಯಂಕಾಲ ತೊಟ್ಟಿಲು ಕಾರ್ಯಕ್ರಮದಲ್ಲಿ ಇಡೀ ರಾತ್ರಿವಿಡಿ ಭಜನೆ ಕಿರ್ತನೆ ಹಾಗೂ ವಿವಿಧ ಸಂಸ್ಕೃತಿಕ ಕಾರ್ಯಕ್ರಮಗಳನ್ನು ನೆರವೇರಿಸಲಾಯಿತ್ತು. ಈ ಸಂದರ್ಭದಲ್ಲಿ ಹುಸೇನಪ್ಪ ಮಂಗಲಗಿ. ಮಾರುತಿ ಪದ್ಮ. ವೀರಣ್ಣ ಉದ್ಗೀರ್. ದಯಾನಂದ ಮೇತ್ರಿ. ಶಿವರಾಜ್ ಛತ್ರಿ. ಮಾರುತಿ ಉದ್ಗೀರ್. ಧೂಳಪ್ಪ ಮಿಂಟ್ರಿಮೆನ್. ನಾಗನಾಥ್ ಬೋಯಿ. ಜಗನಾಥ್ ಉದಗೀರ್. ವೀರಣ್ಣ ಪದ್ಮ. ಅನಿಲ್ ಕೂರಾಲಿ. ತುಕರಾಮ್ ಪದ್ಮ. ಈಶ್ವರ್ ಕೌಡಿಯಾಳ. ಶಿವರಾಜ್ ಛತ್ರಿ. ವೀರಭದ್ರ ಬೋಯಿ. ಈಶ್ವರ್ ಮೇತ್ರಿ. ಸುಭಾಷ್ ಮೇತ್ರಿ.ಧನರಾಜ್ ಹಿರಿನಾಗಂವ್. ಜ್ಞಾನೇಶ್ವರ್ ಮಂಗಲಗಿ. ಪ್ರಭಾಕರ್ ಬಿರಾದರ್. ಯುವರಾಜ್ ಬೋಯಿ. ಲಿಂಗಪ್ಪ ಛತ್ರಿ. ಶ್ರೀಮಂತ ಮೇತ್ರಿ. ಸಿದ್ದು ಬುಟ್ಟಿ ಇದ್ದರು.



ಬೀದರ್ :ವಿಶ್ವವಿದ್ಯಾಲಯದ ಲಾಂಛನ ಸಿದ್ಧಪಡಿಸಿದ ಪ್ರಯುಕ್ತ ಸಾಹಿತಿ ಡಾ. ಬಸವರಾಜ ಬಲ್ಲೂರ ಹಾಗೂ ಡಾ. ಶಿವಗಂಗಾ ರುಮ್ಮಾ ಅವರನ್ನು ಭಾಲ್ಕಿ ತಾಲ್ಲೂಕಿನ ಹಾಲಹಳ್ಳಿ ಸಮೀಪದ ಬೀದರ್ ವಿಶ್ವವಿದ್ಯಾಲಯದಲ್ಲಿ ಶನಿವಾರ ನಡೆದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಸನ್ಮಾನಿಸಿದರು. ಪೌರಾಡಳಿತ ಸಚಿವ ರಹೀಂಖಾನ್, ವಿಧಾನ ಪರಿಷತ್ ಸದಸ್ಯ ಎಂ.ಜಿ. ಮುಳೆ, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಕುಲಪತಿ ಪ್ರೊ. ಬಿ.ಎಸ್. ಬಿರಾದಾರ ಮತ್ತಿತರರು ಇದ್ದರು.

## ಬೇಧ ಭಾವ ಬಿಡಿ, ಒಂದಾಗಿ ಬಾಳಿ :ಸಚಿವ ರಹೀಂಖಾನ್




ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 07 : ಮನುಷ್ಯರೆಲ್ಲರೂ ಭೇದ ಭಾವ ಬಿಟ್ಟು ಒಂದಾಗಿ ಬಾಳಬೇಕು ಎಂದು ಪೌರಾಡಳಿತ ಹಾಗೂ ಹಜ್ ಸಚಿವ ರಹೀಂಖಾನ್ ಹೇಳಿದರು.

ಜಮಾ ಅತೆ ಇಸ್ಲಾಮಿ ಹಿಂದ್, ಸದ್ಭಾವನಾ ಮಂಚ್ ಹಾಗೂ ರಾಬ್ತಾ ಎ ಮಿಲ್ಲತ್ ವೇದಿಕೆ ವತಿಯಿಂದ ರಂಜಾನ್ ಪ್ರಯುಕ್ತ ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಭಾನುವಾರ ಆಯೋಜಿಸಿದ್ದ ಈದ್ ಸ್ನೇಹಕೂಟದಲ್ಲಿ ಅವರು ಮಾತನಾಡಿದರು.

ದೇಹದಲ್ಲಿ ಹರಿಯುವ ರಕ್ತ, ಉಸಿರಾಡುವ ಗಾಳಿ ಒಂದೇ ಇರುವಾಗ, ಭೇದ ಭಾವ ಇರಬಾರದು ಎಂದು ತಿಳಿಸಿದರು.

ಮುಸಲ್ಮಾನರು ವೈಯಕ್ತಿಕ, ಸಮುದಾಯದ ಸುಧಾರಣೆ ಜತೆಗೆ ಇತರರ ಸುಧಾರಣೆಗೂ ಪ್ರಯತ್ನಿಸಬೇಕು ಎಂದು ಹೇಳಿದರು.ಶಿಕ್ಷಣ, ಆರೋಗ್ಯ, ಮೂಲಸೌಕರ್ಯ ಸೇರಿದಂತೆ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಸರ್ಕಾರದಿಂದ ಕೋಟ್ಯಂತರ ರೂಪಾಯಿ ಅನುದಾನ ಒದಗಿಸಲಾಗಿದೆ. ಕಾಮಗಾರಿಗಳ ಉದ್ಘಾಟನೆಗೆ ಏಪ್ರಿಲ್ 16 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬೀದರಗೆ ಬರಲಿದ್ದಾರೆ.ಬೀದರನಿಂದ ನಾಗರಿಕ ವಿಮಾನಯಾನ ಸೇವೆಯೂ ಶೀಘ್ರ ಪುನರಾರಂಭವಾಗಲಿದೆ ಎಂದು ಮಾಹಿತಿ ನೀಡಿದರು.

ಅಧ್ಯಕ್ಷತೆವಹಿಸಿದ್ದ ಮಂಗಳೂರಿನ ಇಸ್ಹಾಕ್ ಪುತ್ತೂರ ಮಾತನಾಡಿ, ಸಂತೋಷ ಹಾಗೂ ಪ್ರೀತಿ ಪರಸ್ಪರ ಹಂಚಿಕೊಳ್ಳುವುದರಿಂದ ವೃದ್ಧಿಯಾಗುತ್ತದೆ. ಸಮೃದ್ಧ ರಾಷ್ಟ್ರ ಕಟ್ಟಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಪುಣ್ಯ ಮತ್ತು ಪಾಪದ ಪ್ರತಿಫಲ ಮನುಷ್ಯ ಜೀವಂತ ಇದ್ದಾಗಲಷ್ಟೇ ಅಲ್ಲ, ಸತ್ತನಂತರವೂ ಸಿಗುತ್ತದೆ. ಹೀಗಾಗಿ ಒಳ್ಳೆಯ ಕೆಲಸಗಳನ್ನೇ ಮಾಡಬೇಕು ಎಂದು ತಿಳಿಸಿದರು.

ದ್ವೇಷ ಭಾಷಣ, ವೈರತ್ವ, ಜಗಳ, ಕೊಲೆ, ಸುಲಿಗೆ, ಕ್ಷೋಬೆ ಉಂಟು ಮಾಡುವವರು ಅದರ ಪ್ರತಿಫಲ ಅನುಭವಿಸಲೇಬೇಕಾಗುತ್ತದೆ ಎಂದು ಹೇಳಿದರು.

ಮೌಲ್ವಿ ಮಹಮ್ಮದ್ ಫಹೀಮುದ್ದೀನ್ ಮಾತನಾಡಿ, ಭೂಮಿಯಲ್ಲಿ ಮನುಷ್ಯನಿಗೆ ಮಹತ್ವದ ಸ್ಥಾನವಿದೆ. ಅದನ್ನು ತಿಳಿದು ಉತ್ತಮ ವ್ಯಕ್ತಿಯಾಗಿ ಬದುಕಬೇಕು. ಒಳಿತು ಮಾಡುತ್ತ, ಕೆಡಕನ್ನು ತ್ಯಜಿಸಬೇಕು ಎಂದು ತಿಳಿಸಿದರು.

ಜೇನಿನ ನೊಣಗಳು ವಿವಿಧ ಹೂವುಗಳಿಂದ ರಸ ಹೀರಿ ಜೇನು ತುಪ್ಪ ನೀಡುವಂತೆ, ಮನುಷ್ಯರು ಬೇರೆಯವರಿಗೆ ಸಿಹಿ ನೀಡಬೇಕೇ ಹೊರತು ವಿಷವನ್ನಲ್ಲ ಎಂದು ಹೇಳಿದರು.

ನಿಶ್ಚಿತವಾಗಿಯೂ ನಾವು ಅಲ್ಲಾಹನೆಡೆಗೆ ಮರಳಬೇಕಿದೆ. ಮರಣಾನಂತರ ಜೀವನದ ಸ್ಮರಣೆ ನಾವು ಯಾವಾಗಲೂ ಮಾಡುತ್ತಿರಬೇಕು ಎಂದರು.

ನೌಬಾದನ ಬ್ರಹ್ಮಕುಮಾರಿ ಆಶ್ರಮದ ಜ್ಯೋತಿ ಬಹೆನ್‌ಜಿ ಮಾತನಾಡಿ, ಈ ಜಗತ್ತು ಪ್ರವಾಸಿ ತಾಣವೆಂದು ತಿಳಿದು, ನಾವೆಲ್ಲ ಪ್ರವಾಸಿಗರಂತೆ ಜೀವನ ಸಾಗಿಸಬೇಕು. ಆತ್ಮಶಾಂತಿಗಾಗಿ ದೇವರ ಸ್ಮರಣೆ ಮಾಡಬೇಕು ಎಂದು ಹೇಳಿದರು.

ಸೆಕ್ರೇಡ್ ಹಾರ್ಟ್ ಚರ್ಚನ ಫಾದರ್ ಕ್ಲೇರಿ ಡಿಸೋಜಾ ಮಾತನಾಡಿ, ಇಂದು ಅಧರ್ಮೀಯರು ಧರ್ಮದ ಬಗ್ಗೆ ಮಾತನಾಡುತ್ತಿದ್ದಾರೆ. ಧರ್ಮ ಅರಿತವರು ಮೌನವಾಗಿದ್ದಾರೆ. ನಾವು ಒಳಿತನ್ನು ಪ್ರೋತ್ಸಾಹಿಸುವವರು ಹಾಗೂ ಕೆಡುಕನ್ನು ವಿರೋಧಿಸುವವರಾಗಬೇಕು ಎಂದು ತಿಳಿಸಿದರು.

ಆಣದೂರಿನ ಭಂತೆ ಧಮ್ಮಾನಂದ ಮಹಾಥೆರೋ ಮಾತನಾಡಿ, ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವ ಇಸ್ಲಾಂನ ಶ್ರೇಷ್ಠ ಮಾನವೀಯ ಮೌಲ್ಯಗಳಾಗಿವೆ. ಈದ್ ಸ್ನೇಹಕೂಟಗಳು ಕೋಮು ಸೌಹಾರ್ದ ಕಾಪಾಡಲು ಸಹಕಾರಿಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮೌಲಾನಾ ಮಹಮ್ಮದ್ ಮೋನಿಶ್ ಕಿರ್ಮಾನ್ ಮಾತನಾಡಿದರು. ಸರ್ದಾರ್ ಗ್ಯಾನಿ ದರ್ಬಾರಾಸಿಂಗ್, ನಗರಸಭೆ ಅಧ್ಯಕ್ಷ ಮಹಮ್ಮದ್ ಗೌಸ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಲೀಂ ಪಾಶಾ, ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಡಾ. ಸಂಜೀವಕುಮಾರ ಅತಿವಾಳೆ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ, ಜಾಗತಿಕ ಲಿಂಗಾಯತ ಮಹಾಸಭಾ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ, ಪ್ರಮುಖರಾದ ಮಡಿವಾಳಪ್ಪ ಗಂಗಶೆಟ್ಟಿ, ಮಂಗಲಾ ಭಾಗವತ್, ಇಕ್ಬಾಲ್ ಗಾಜಿ, ತೌಹೀದ್ ಶಿಂಧೆ, ಸಂಜೀವ ಸೂರ್ಯವಂಶಿ, ಗುರುನಾಥ ಗಡ್ಡೆ, ಮಹಮ್ಮದ್ ಆಸಿಫೊದ್ದೀನ್, ಎಂ.ಎಸ್. ಮನೋಹರ ಉಪಸ್ಥಿತರಿದ್ದರು.

ಹಾಫಿಜ್ ಸೈಯದ್ ಅತೀಕುಲ್ಲಾರ ಪವಿತ್ರ ಕುರಾನ್ ಪಠಣದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಫುರ್ಖಾನ್ ಪಾಶಾ ಅವರು ಪಠಣದ ಕನ್ನಡ ಅನುವಾದ ಮಾಡಿದರು.

ಜಮಾ ಅತೆ ಇಸ್ಲಾಮಿ ಹಿಂದ್ ಬೀದರ್ ನಗರ ಘಟಕದ ಅಧ್ಯಕ್ಷ ಮಹಮ್ಮದ್ ಮೌಝ್ಝುಮ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಮಹಮ್ಮದ್ ನಿಜಾಮುದ್ದೀನ್ ಸ್ವಾಗತಿಸಿ, ನಿರೂಪಿಸಿದರು.



ಕಮಲನಗರ:ತಾಲೂಕಿನ ಡಿಗ್ಗಿ ಗ್ರಾಮದ ಹನುಮಾನ ದೇವಾಲಯದಲ್ಲಿ ರವಿವಾರ ಶ್ರೀ ರಾಮ ನವಮಿ ಹಬ್ಬ ಆಚರಿಸಲಾಯಿತು. ಭಜನೆ ಹಾಡುಗಳ ಮೂಲಕ ರಾಮನ ರಾಧನೆ ನಡೆಯಿತು, ರಾಮನ ತೊಟ್ಟಿಲು ಕಾರ್ಯಕ್ರಮ ಜರುಗಿತು, ಯುವಕರು ಭಕ್ತರಿಗೆ ಪ್ರಸದ ವ್ಯವಸ್ಥೆ ಮಾಡಿದರು, ಈ ಸಂದರ್ಭದಲ್ಲಿ ಬಾಲ ರಾಮನ ವೇಷದಾರಿ ಪಿಯುಷ ತಂದೆ ವಿಜಯಕುಮಾರ ಬನವಾಸೆ ಎಲ್ಲರ ಗಮನ ಸೆಳೆದನು. (ಮಲ್ಲಮ್ಮ ನುಡಿ ಚಿತ್ರ)

## ಬಡವರ ಹಿತ ಕಾಪಾಡುವುದು ಸಂಘದ ಉದ್ದೇಶ: ಸೋಮಶೇಖರ ಪಾಟೀಲ ಗಾದಗಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 07 : ಏ. 11 ರಂದು ಸಂಜೆ 6.30 ಗಂಟೆಗೆ ನಗರದ ಚಿಕ್ಕಪೇಟ್ ಸಮೀಪದ ಲಾವಣ್ಯ ಕನ್ವೆನ್ಶನ್ ಹಾಲ್‌ನಲ್ಲಿ ಸರ್ದಾರ ವಲ್ಲಭಭಾಯಿ ಪಟೇಲ್ ಸೌಹಾರ್ದ ಸಹಕಾರಿ ಸಂಘ ನಿಯಮಿತ ಉದ್ಘಾಟಿಸಲಾಗುತ್ತಿದೆ ಎಂದು ಬ್ಯಾಂಕ್‌ನ ಅಧ್ಯಕ್ಷ ಸೋಮಶೇಖರ ಪಾಟೀಲ ಗಾದಗಿ ತಿಳಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಹಿಂದೂ ಎಕಾನಾಮಿಕ್ ಫೋರಂ ಅಡಿಯಲ್ಲಿ ಬೀದರನಲ್ಲಿ ಪ್ರಪ್ರಥಮ ಬಾರಿಗೆ ಆರಂಭಿಸಲಾಗುತ್ತಿದೆ. ಈಗಾಗಲೇ ಈ ಸಹಕಾರಿ ಸಂಘದಲ್ಲಿ 500 ಕ್ಕೂ ಹೆಚ್ಚು ಜನ ಶೇರ್ ಹೋಲ್ಡರ್ ಸದಸ್ಯರಾಗಿದ್ದು, ಬ್ಯಾಂಕಿನಿಂದ ಬರುವ ಆದಾಯದಿಂದ ಸನಾತನ ಸಂಸ್ಕೃತಿಯುಳ್ಳ ಹಿಂದುಳಿದ ವರ್ಗದ ಜನರಿಗೆ ಅನೇಕ ಕಲ್ಯಾಣ ಕಾರ್ಯಕ್ರಮಗಳನ್ನು, ಅಭಿವೃದ್ಧಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುವುದೆಂದು ತಿಳಿಸಿದರು. ಹಿಂದೂ ಎಕಾನಾಮಿಕ್ ಫೋರಂನ ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಶಿವಪ್ರಸಾದ ಟಿ.ಆರ್. ಅವರ ಪ್ರಸ್ತಾವನೆಯನ್ನು ಅನುಮೋದಿಸಿದ ಹಿಂದೂ ಎಕನಾಮಿಕ್ ಫೋರಂ ಸಂಸ್ಥಾಪಕರಾದ ಸ್ವಾಮಿ ವಿಜ್ಞಾನಂದಜೀ ಅವರು ದೇಶದಾದ್ಯಂತ ಒಂದು ಸೌಹಾರ್ದ ಸೊಸೈಟಿ ಮತ್ತು ಕೋ ಆಪರೇಟಿವ್ ಸೊಸೈಟಿ ಸ್ಥಾಪನೆ ಮಾಡುವ ಪ್ರಸ್ತಾವಕ್ಕೆ ಅನುಮೋದನೆ ನೀಡಿದ್ದರು ಎಂದರು.

ಅಂದು ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಚಿದಂಬರಾಶ್ರಮದ ಪೂಜ್ಯ ಡಾ. ಶಿವಕುಮಾರ ಸ್ವಾಮೀಜಿ ವಹಿಸುವರು. ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಕಾರ್ಯಕ್ರಮ ಉದ್ಘಾಟಿಸಲಿದ್ದು, ಹಿಂದೂ ಎಕನಾಮಿಕ್ ಫೋರಂನ ಸಂಘಟನಾ ಕಾರ್ಯದರ್ಶಿ ಶಿವಪ್ರಸಾದ ಟಿಆರ್, ಕರ್ನಾಟಕ ರಾಜ್ಯ ಸೌಹಾರ್ದ ಸಹಕಾರಿ ನಿಯಮಿತದ ನಿರ್ದೇಶಕ ಗುರುನಾಥ ಜ್ಯಾಂತಿಕರ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ತನ್ನ ಅಧ್ಯಕ್ಷತೆಯಲ್ಲಿ ಈ ಕಾರ್ಯಕ್ರಮ ಜರುಗಲಿದ್ದು, ಸಂಘದ ಉಪಾಧ್ಯಕ್ಷ ವೀರಶೆಟ್ಟಿ ಮಣಗೆ, ಗೌರವ ಅತಿಥಿಗಳಾಗಿ ಸಂಘಚಾಲಕರಾದ ಶಿವರಾಜ ಹಲಶೆಟ್ಟಿ ಭಾಗವಹಿಸುವರು ಎಂದು ಹೇಳಿದರು. ಸಂಘದ ನಿರ್ದೇಶಕರ ಮಂಡಳಿಯ ವಿವರಣೆ ನೀಡಿದ ಗಾದಗಿಯವರು ತಾನು ಈ ಸಹಕಾರಿ ನಿಯಮಿತದ ಅಧ್ಯಕ್ಷರಾಗಿದ್ದು, ಉಪಾಧ್ಯಕ್ಷರಾಗಿ ವೀರಶೆಟ್ಟಿ ಮಣಗೆ, ನಿರ್ದೇಶಕರಾಗಿ ಶಂಕರರಾವ ಕೊಟಾರ್ಕಿ, ಕುಶಾಲರಾವ ಪಾಟೀಲ ಖಾಜಾಪುರ, ಅರುಣಕುಮಾರ ಖೂಬಾ, ಮಡಿವಾಳಪ್ಪ ಗಂಗಶೆಟ್ಟಿ, ಸಿದ್ಧರಾಜ ಪಾಟೀಲ, ಮಹೇಶ ಚಲುವಾ, ವೀರೇಂದ್ರ ಶಾಸ್ತ್ರಿ, ಸೂರ್ಯಕಾಂತ ರಾಮಶೆಟ್ಟಿ, ರವಿ ಶಂಕರಶೆಟ್ಟಿ, ಉಮೇಶ ಮೂಲಿಮನಿ, ಅಮರ ಫುಲೇಕಾರ್, ಜಾಧವ್ ಪಟೇಲ್, ಜೈಸಿಂಗ್ ರಾಠೋಡ್, ವಿಜಯಲಕ್ಷ್ಮಿ ಸತೀಶ ಚೊಂಡೆ, ಸಾಯಿಪ್ರಿಯ ಚಿದ್ರಿ ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾಗಿ ಶಿವಕುಮಾರ ಯದಲಾಪುರೆ ಅವರನ್ನು ನೇಮಕ ಮಾಡಲಾಗಿದೆ ಎಂದರು.

ಇದೇ ವೇಳೆ ಸಹಕಾರಿ ಸಂಘ ನಿಯಮಿತದ ಉಪಾಧ್ಯಕ್ಷ ವೀರಶೆಟ್ಟಿ ಮಣಗೆ, ನಿರ್ದೇಶಕರಾದ ಶಂಕರರಾವ ಕೊಟಾರ್ಕಿ, ವೀರೇಂದ್ರ ಶಾಸ್ತ್ರಿ, ಸಿದ್ಧರಾಜ ಪಾಟೀಲ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ನಕಲಿ ವಿಕಲಚೇತನ ಕಾರ್ಡ್ ಪಡೆದವರ ವಿರುದ್ಧ ಕ್ರಮ ಜರುಗಿಸಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 07 : ನಕಲಿ ವಿಕಲಚೇತನರ ಕಾರ್ಡ್ ಮಾಡುತ್ತಿರುವ ವೈದ್ಯರು, ದಲ್ಲಾಳಿಗಳು ಹಾಗೂ ಸಂಬಂಧಪಟ್ಟ ವಿಕಲಚೇತನ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಸಾಮಾಜಿಕ ಹೋರಾಟಗಾರ ಸಂಗಮೇಶ ಭಾವಿದೊಡ್ಡಿ ಆಗ್ರಹಿಸಿದರು.

ಶನಿವಾರ ಪ್ರಕಟಣೆ ಹೊರಡಿಸಿದ ಅವರು, ಸರ್ಕಾರ ವಿಕಲಚೇತನರಿಗೆ ಹಲವು ಯೋಜನೆಗಳು ಜಾರಿ ಮಾಡಿದ್ದರು 'ದೇವರು ಕೊಟ್ಟರು ಪೂಜಾರಿ ಕೊಡಲಿಲ್ಲ' ಎನ್ನುವಂತೆ ಕಿರಿಯ ಶ್ರೇಣಿ ಅಧಿಕಾರಿಗಳು ವಿಕಲಚೇತನರನ್ನು ದಾರಿ ತಪ್ಪಿಸಿ ಅವರಿಗೆ ಸಿಗುವಂತ ಸವಲತ್ತುಗಳು ಅವರ ಕೈಗೆ ಕೊಡದೆ ವಂಚಿಸುತ್ತಿರುವರು. ಆದರೆ ನಕಲಿ ವಿಕಲಚೇತನರು ಸರ್ಟಿಫಿಕೇಟ್ ಪಡೆದು ಹಲವರು ಹುದ್ದೆಯಲ್ಲಿದ್ದರೆ ಇನ್ನೂ ಕೆಲವರು ಉದ್ಯೋಗಕ್ಕಾಗಿ ಅನುದಾನ, ಕಿರುಸಾಲ ನಿವೇಶನ ಇತ್ಯಾದಿ ಸವಲತ್ತುಗಳು ಪಡೆದು ಸರ್ಕಾರಕ್ಕೆ ವಂಚಿಸುತ್ತಿರುವರು. ಇಂಥವರನ್ನು ಸದೆ ಪಡೆಯಲು ಸರ್ಕಾರ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕೆಂದು ಭಾವಿದೊಡ್ಡಿ ಆಗ್ರಹಿಸಿದರು.

ಅದೇ ರೀತಿ ವಿಕಲಚೇತನರಿಗೆ ಸರ್ಕಾರ ಗ್ರಾಮ ಪಂಚಾಯತಿ ಹಾಗೂ ವಿವಿಧ ಇಲಾಖೆಯಲ್ಲಿ 5 ಪ್ರತಿಶತದಷ್ಟು ಅನುದಾನ ನೀಡಬೇಕೆಂದು ಸರ್ಕಾರದ ಆದೇಶ ಇದ್ದರೂ ಕೂಡ ಇಲ್ಲಿವರೆಗೆ ಅಂಗವಿಕಲರ ಅನುಕೂಲಕ್ಕಾಗಿ ಬಳಕೆ ಆಗುವ ಅನುದಾನ ಸಮರ್ಪಕವಾಗಿ ಬಳಕೆ ಆಗುತ್ತಿಲ್ಲ ಕಳವಳ ವ್ಯಕ್ತಪಡಿಸಿ ಈ ಸಮಸ್ಯೆ ಆದಷ್ಟು ಬೇಗ ಬಗೆಹರಿಸದಿದ್ದಲ್ಲಿ ಬೀದಿಗಿಳಿದು ಹೋರಾಟ ಮಾಡುವುದಾಗಿ ಎಚ್ಚರಿಸಿದರು.

## ಅಟಲ್‌ಜೀ ಸಾಧನೆ ತಿಳಿಸಲು ಹಳ್ಳಿಗೆ ನಡೆಯಿರಿ ಕಾರ್ಯಕ್ರಮ: ಸೋಮನಾಥ ಪಾಟೀಲ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 07 : ಮಾಜಿ ಪ್ರಧಾನಮಂತ್ರಿ ದಿವಂಗತ ಅಟಲ್ ಬಿಹಾರಿ ವಾಯಪೇಯಿಯವರ ಜೀವನ ಮತ್ತು ಸಾಧನೆ ಹಾಗೂ ಈ ಹಿಂದೆ ಬಿಜೆಪಿ ಸರ್ಕಾರದ ಸಾಧನೆ ಮತ್ತು ಕಾಂಗ್ರೇಸ್ ಸರ್ಕಾರದ ಜನವಿರೋಧಿ ನೀತಿ ತಿಳಿಸಲು ಬಿಜೆಪಿ ವತಿಯಿಂದ ಶೀಘ್ರದಲ್ಲಿಯೇ 'ಹಳ್ಳಿಗೆ ನಡೆಯಿರಿ' ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಇದು ಬಿಜೆಪಿ ಸಂಸ್ಥಾಪನಾ ದಿನಾಚರಣೆಯ ಒಂದು ಭಾಗವಾಗಲಿದೆ ಎಂದು ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ತಿಳಿಸಿದರು.

ನಗರದ ನೌಬಾದನಲ್ಲಿರುವ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ ಬಿಜೆಪಿ ಸಂಸ್ಥಾಪನಾ ದಿನ ಹಾಗೂ ಆಟಲ್ ಬಿಹಾರಿ ವಾಜಪೇಯಿ ಜನ್ಮಶತಮಾನೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹಳ್ಳಿಗೆ ನಡೆಯಿರಿ ಕಾರ್ಯಕ್ರಮದ ಮೂಲಕ ಹಳ್ಳಿಗಳಲ್ಲಿ ಬಿಜೆಪಿ ಸಕ್ರಿಯ ಹಾಗೂ ಸಾಮಾನ್ಯ ಸದಸ್ಯರ ಸಭೆ ಮಾಡಬೇಕಾಗಿದೆ. ಜೊತೆಗೆ ಏಪ್ರಿಲ್ 14 ರಂದು ಎಲ್ಲಾ ಬಿಜೆಪಿ ಕಚೇರಿ ಸೇರಿದಂತೆ ಎಲ್ಲಾ ಕಡೆಗಳಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜಯಂತಿ ಆಚರಣೆ ಮಾಡಬೇಕು ಎಂದು ತಿಳಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಮನ್ ಕಿ ಬಾತ್ ಆಲಿಸುವುದರಲ್ಲಿ ಈ ಬಾರಿಯೂ ಬೀದರ ಜಿಲ್ಲೆ ನಂಬರ್ ಒನ್ ಸ್ಥಾನದಲ್ಲಿ ಬಂದಿದೆ. ಜೊತೆಗೆ ಆಟಲ್ ವಿರಾಸತ್ ಕಾರ್ಯಕ್ರಮದ ಭಾಗವಾಗಿ ಕಳೆದ ಒಂದು ತಿಂಗಳಿನಿಂದ ಕವಿ ಸಮ್ಮೇಳನ ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಬಾಬು ವಾಲಿಯವರ ಸಂಚಾಲಕತ್ವದಲ್ಲಿ ಯಶಸ್ವಿಯಾಗಿ ಮಾಡಲಾಗಿದೆ. ಸಾಕಷ್ಟು ಕವಿಗಳು ಉತ್ಸಾಹದಿಂದ ಪಾಲ್ಗೊಂಡಿದ್ದರು ಎಂದು ಪಾಟೀಲ ತಿಳಿಸಿದರು.


ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಮಾತನಾಡಿ ರಾಜ್ಯದಲ್ಲಿ ಕಾಂಗ್ರೇಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಕಳೆದರೂ ಸಮರ್ಪಕವಾದ ಆಡಳಿತ ನೀಡಿಲ್ಲ. ಅನುಭವ ಮಂಟಪಕ್ಕೆ ಸಮರ್ಪಕ ಅನುದಾನ ನೀಡಿಲ್ಲ. ಔರಾದ ತಾಲೂಕಿನಲ್ಲಿ ಸೀಪೆಟ್ ಕಾಲೇಜು ಸ್ಥಾಪನೆಗಾಗಿ ಹಾಗೂ 36 ಕೆರೆಳ ತುಂಬಿಸಲು ನಮ್ಮ ಸರ್ಕಾರ ಅನುದಾನ ನೀಡಿತ್ತು. ಆದರೆ ಕಾಂಗ್ರೇಸ್ ಸರ್ಕಾರ ಈಗ ನೀಡಿಲ್ಲ. ಬೀದರ–ನಾಂದೇಡ್ ರೈಲ್ವೆ ಮಾರ್ಗ ನಿರ್ಮಿಸಲು ಬೊಮ್ಮಾಯಿ ಸರ್ಕಾರ ಅನುದಾನ ನೀಡಿತ್ತು. ಆದರೆ ಇಂದು ಕಾಂಗ್ರೇಸ್ ಸರ್ಕಾರ ನೀಡಲಿಲ್ಲ. ಇಂತಹ ಅನೇಕ ಕಾಂಗ್ರೇಸ್ ಸರ್ಕಾರದ ವೈಫಲ್ಯಗಳ ವಿರುದ್ಧ ಶೀಘ್ರದಲ್ಲೇ ಹೋರಾಟ ಮಾಡಿ ಸರ್ಕಾರಕ್ಕೆ ಬಿಸಿ ತಲುಪಿಸೋಣ. ಆಟಲ್ ಬಿಹಾರಿ ವಾಜಪೇಯಿಯವರ ಅಭಿವೃದ್ಧಿ ಕುರಿತು ಜನತೆಗೆ ತಿಳಿಸುವ ಕೆಲಸ ಮಾಡೋಣ ಎಂದರು.

ವೇದಿಕೆ ಮೇಲೆ ವಿಧಾನ ಪರಿಷತ್ ಸದಸ್ಯ ಎಂ.ಜಿ.ಮುಳೆ, ಶಾಸಕ ಹಾಗೂ ಬಿಜೆಪಿ ರಾಜ್ಯ ಕಾರ್ಯದರ್ಶಿ ಶೈಲೇಂದ್ರ ಕೆ. ಬೆಲ್ದಾಳೆ, ಮಾಜಿ ವಿಧಾನ ಪರಿಷತ್ ಸ್ಪೀಕರ್ ರಘುನಾಥರಾವ ಮಲ್ಕಾಪುರೆ, ಪಕ್ಷದ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ ಗಂದಗೆ, ಬಾಬುರಾವ ಮದಕಟ್ಟಿ, ಆಟಲ್ ವಿರಾಸತ್ ಸಮಿತಿ ಸಂಚಾಲಕ ಬಾಬು ವಾಲಿ, ಸದಸ್ಯರಾದ ಶಕುಂತಲಾ ಬೆಲ್ದಾಳೆ, ಶ್ರೀನಿವಾಸ ಚೌಧರಿ, ಗುರುನಾಥ ಜ್ಯಾಂತಿಕರ್, ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಾಧವರಾವ ಹುಸಾರೆ, ಪಕ್ಷದ ಬೀದರ ಕ್ಷೇತ್ರದ ನಾಯಕ ಈಶ್ವರಸಿಂಗ್ ಠಾಕೂರ್, ಕಿರಣ ಪಾಟೀಲ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಬಿಜೆಪಿ ಮುಖ್ಯ ವಕ್ತಾರ ಶಿವರಾಜ ಗಂದಗೆ ಆಟಲ್ ಬಿಹಾರಿ ವಾಜಪೇಯಿಯವರ ಸಾಧನೆ ಕುರಿತು ಮಾತನಾಡಿದರು. ಇದೇ ವೇಳೆ ಭಾರತೀಯ ಜನತಾ ಪಕ್ಷದ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

## ಏ. 11 ರಿಂದ ಸ್ಪೈಕಾನ್-4 ರಾಷ್ಟ್ರೀಯ ವಿಚಾರ ಸಂಕಿರಣ ಹಾಗೂ ವಸ್ತು ಪ್ರದರ್ಶನ ಪಾಲ್ಗೊಳ್ಳಲು ವೀರಶೆಟ್ಟಿ ಮಣಗೆ ಕರೆ

ಬೀದರ. ಏ. 07: ಈ ತಿಂಗಳ 11, 12 ಹಾಗೂ 13 ರಂದು ಮೂರು ದಿನಗಳ ಕಾಲ ನಗರದ ಚಿಕ್ಕಪೇಟ ರಿಂಗ್ ರಸ್ತೆಯಲ್ಲಿರುವ ಲಾವಣ್ಯ ಫಂಕ್ಷನ್ ಹಾಲ್‌ನಲ್ಲಿ ಸ್ಪೈಕಾನ್–4 ಕುರಿತ ರಾಷ್ಟ್ರೀಯ ವಿಚಾರ ಸಂಕಿರಣ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ (ಇಂಡಿಯಾ) ದ ಜಿಲ್ಲಾ ಘಟಕದ ಅಧ್ಯಕ್ಷ ವೀರಶೆಟ್ಟಿ ಮಣಗೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು 11 ರಂದು ಬೆ. 11 ಗಂಟೆಗೆ ವಿಚಾರ ಸಂಕಿರಣದ ಉದ್ಘಾಟನಾ ಸಮಾರಂಭ ಜರುಗಲಿದ್ದು, ದಿವ್ಯ ಸಾನಿಧ್ಯವನ್ನು ರಾಮಕೃಷ್ಣ ವಿವೇಕಾನಂದ ಆಶ್ರಮದ ಪೂಜ್ಯ ಶ್ರೀ ಜ್ಯೋತಿರ್ಮಯಾನಂದ ಸ್ವಾಮೀಜಿ ವಹಿಸಲಿದ್ದು, ಸಂಸದ ಸಾಗರ ಖಂಡ್ರೆ ಸಮಾರಂಭ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಪೌರಾಡಳಿತ ಸಚಿವ ರಹಿಂಖಾನ್, ಗೌರವ ಅತಿಥಿಗಳಾಗಿ ಬೀದರ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಬಿಡಿಎ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ನಗರಸಭೆ ಅಧ್ಯಕ್ಷ ಮಹ್ಮದ್ ಗೌಸ್ ಪಾಲ್ಗೊಳ್ಳುವರು.



ಅಂಚೂರಿ ಹೈದರಾಬಾದನ ಮುಖ್ಯ ಕನ್ಸಲ್ಟೆಂಟ್ ಡಾ. ಎಸ್.ಪಿ. ಅಂಚೂರಿ ಪ್ರಾಸ್ತಾವಿಕವಾಗಿ ಮಾತನಾಡುವರು. ಗುರುನಾನಕ ಗ್ರೂಪ್ ಆಫ್ ಇನ್ಸಿಟ್ಯೂಶನ್ ಅಧ್ಯಕ್ಷ ಡಾ. ಬಲಬೀರಸಿಂಗ್, ಶರಣಬಸವೇಶ್ವರ ವಿದ್ಯಾವರ್ಧಕ ಸಂಘ ಕಲಬುರಗಿಯ ಕಾರ್ಯದರ್ಶಿ ಬಸವರಾಜ ದೇಶಮುಖ, ಬಸವಕಲ್ಯಾಣ ಎಜುಕೇಶನ್ ಟ್ರಸ್ಟ್ನ ಟ್ರಸ್ಟಿ ಸಂತೋಷಕುಮಾರ ತಾಳಂಪಳ್ಳಿ ಹಾಗೂ ಇತರರು ಸಮಾರಂಭದಲ್ಲಿ ಉಪಸ್ಥಿತರಿರುವರು.

ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ (ಇಂಡಿಯಾ) ಸಂಸ್ಥೆಯ ಹತ್ತನೇ ವರ್ಷದ ವಾರ್ಷಿಕೋತ್ಸವ, ಸ್ಮರಣ ಸಂಚಿಕೆ ಬಿಡುಗಡೆ, ಮೂರು ದಿವಸಗಳ ಕಾಲ ಕಟ್ಟಡ ನಿರ್ಮಾಣದ ವಸ್ತುಗಳ ಸಮಗ್ರ ವಸ್ತು ಪ್ರದರ್ಶನ ಹಾಗೂ ವಿವಿಧ ವಿಚಾರ ಸಂಕಿರಣ ಮೂಲಕ ಸಿವಿಲ್ ಅಭಿಯಂತರರಿಗೆ ತರಬೇತಿ ನೀಡಲಾಗುತ್ತಿದೆ ಎಂದರು. ಈ ಮೂರು ದಿವಸಗಳ ಕಾರ್ಯಕ್ರಮದಲ್ಲಿ ಐಸಿಐ ರಾಷ್ಟ್ರೀಯ ಅಧ್ಯಕ್ಷ ಡಾ. ರಾಮಚಂದ್ರನ್, ಕೆಪಿಸಿಇಎ–ಎಸ್‌ಸಿ ಅಧ್ಯಕ್ಷ ಶ್ರೀಕಾಂತ ಚನಲ್, ಪಿಜಿ ಮನೀಶ, ಡಾ. ರಾಕೇಶರೆಡ್ಡಿ, ಶೇಶಾದ್ರಿ, ಡಾ. ಬ್ರಿಜ್‌ಭೂಷಣ್, ರಾಜೇಶ ಆರ್. ಕಣ್ಣನ್ ಬೆಂಗಳೂರು, ಸೀತಾ ಮಹಾಲಕ್ಷ್ಮೀ, ಎಸ್.ಪಿ. ಅಂಚುರಿ ಸೇರಿದಂತೆ ಮಹಾರಾಷ್ಟ್ರ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ಕರ್ನಾಟಕದ ಹಲವು ಜಿಲ್ಲೆಗಳಿಂದ ಸಿವಿಲ್ ಅಭಿಯಂತರರು ಆಗಮಿಸುತ್ತಿದ್ದಾರೆ ಎಂದು ವೀರಶೆಟ್ಟಿ ಮಣಗೆ ತಿಳಿಸಿದರು. ಈ ಮೂರು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಬಿಕೆಐಟಿ ಭಾಲ್ಕಿಯ ತಾಂತ್ರಿಕ ಮಹಾವಿದ್ಯಾಲಯದ ಸಿವಿಲ್ ಇಂಜಿನಿಯರಿಂಗ್, ಬೀದರನ ಜಿಎನ್‌ಡಿ ಇಂಜಿನಿಯರಿಂಗ್ ಕಾಲೇಜಿನ, ಬಸವಕಲ್ಯಾಣ ಇಂಜಿನಿಯರಿಂಗ್ ಕಾಲೇಜು, ಬೀದರನ ಅಪ್ಪಾ ಇಂಜಿನಿಯರಿಂಗ್ ಕಾಲೇಜಿನ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ (ಇಂಡಿಯಾ) ಕಾರ್ಯದರ್ಶಿ ಅಶೋಕ ಉಪ್ಪೆ ಮಾತನಾಡಿ ಭೂಕಂಪ ಆದರೂ ಕಟ್ಟಡಗಳು ದೀರ್ಘಕಾಲದ ವರೆಗೆ ಬಾಳಿಕೆ ಬರುವಂತೆ ಅನುಸರಿಸಬೇಕಾದ ಮಾರ್ಗೋಪಾಯಗಳು, ಕಟ್ಟಡಗಳು ಶಿಥಿಲಾವಸ್ಥೆಗೆ ಬರದಂತೆ ತಡೆಯುವ ಕ್ರಮ, ಕಟ್ಟಡ ಕಾರ್ಮಿಕರ ಸುರಕ್ಷತೆ ದೃಷ್ಟಿಯಿಂದ ಅನುಸರಿಸಬೇಕಾದ ಮಾರ್ಗೋಪಾಯಗಳ ಕುರಿತು ಈ ವಿಚಾರ ಸಂಕಿರಣದಲ್ಲಿ ಮಾಹಿತಿ ನೀಡಲಾಗುತ್ತದೆ.

ಕಟ್ಟಡಕ್ಕೆ ಉಪಯುಕ್ತ ತಂತ್ರಜ್ಞಾನ ಉಪಕರಣ ಸಿಮೆಂಟ್ ಸೇರಿದಂತೆ ಕಟ್ಟಡಕ್ಕೆ ಬಳಸುವ ಇತರೆ ವಸ್ತುಗಳನ್ನು ಪ್ರದರ್ಶನದಲ್ಲಿ ಇಡಲಾಗುತ್ತದೆ ಎಂದರು.

ಸಂಸ್ಥೆಯ ಖಜಾಂಚಿ ಓಂಕಾರ ಪಾಟೀಲ, ವ್ಯವಸ್ಥಾಪಕ ಮಂಡಳಿ ಸದಸ್ಯರಾದ ಶಿವಕುಮಾರ ಯಲಾಲ್, ಸಂದೀಪ ಕಾಡವಾದ, ಅಮಿತ ನಾಗೂರೆ, ಸದಸ್ಯರಾದ ಮಹೇಶ ಹೊರಂಡೆ, ದಿಲೀಪ ನಿಟ್ಟೂರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಸರ್ಕಾರ ಬದ್ಧ ; ಸಚಿವ ದರ್ಶನಾಪೂರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ರಾಜ್ಯದಲ್ಲಿ ಮುಖ್ಯಮಂತ್ರಿಸಿದ್ದರಾಮಯ್ಯನವರ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದು ರಾಜ್ಯದಲ್ಲಿ 2 ವರ್ಷ ಕಳೆಯುತ್ತಿದೆ, ಗಿರಿ ಜಿಲ್ಲೆಯಲ್ಲಿ ಜನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಮಹತ್ವದ ಯೋಜನೆಗಳಿಗೆ ಚಾಲನೆ ನೀಡುವ ಮೂಲಕ ಜಿಲ್ಲೆಯಸರ್ವಾಂಗೀಣಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದು ರಾಜ್ಯ ಸಣ್ಣ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪೂರ ಹೇಳಿದರು.

ನಗರದಕಮಲಾನೆಹರುಪಾರ್ಕ್ ಆವರಣದಲ್ಲಿ ನಗರಾಭಿವೃದ್ಧಿ ಇಲಾಖೆ,ಜಿಲ್ಲಾಡಳಿತ,ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ, ನಗರಸಭೆ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಯಾದಗಿರಿ ನಗರಕ್ಕೆ ಭೀಮಾ ನದಿಯಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿಯಲ್ಲಿಕುಡಿಯುವ ನೀರು ಸರಬರಾಜು ಮಾಡುವ 53 ಕೋಟಿ ರೂ ವೆಚ್ಚದ ಕಾಮಗಾರಿಗೆ ಶಂಕು ಸ್ಥಾಪನೆ ನೆರವೇರಿಸಿ ಮಾತನಾಡಿದರು.

ಈ ಯೋಜನೆಯನ್ನು ನಗರ ವ್ಯಾಪ್ತಿಯಲ್ಲಿಬರುವ31ವಾರ್ಡಗಳ ಪ್ರದೇಶಗಳಲ್ಲಿ2025ನೇಸಾಲಿನಲ್ಲಿ ಇರಬಹುದಾದ ಅಂದಾಜು 95 ಸಾವಿರ ಜನಸಂಖ್ಯೆಗೆ ಪ್ರತಿದಿನ ಪ್ರತಿಯೊಬ್ಬರಿಗೆ135ಲೀ.ನೀರು ಸರಬರಾಜುಮಾಡಲು,2040ನೇ ಸಾಲಿನಲ್ಲಿ ಅಂದಾಜು 1.25 ಲಕ್ಷ ಜನಸಂಖ್ಯೆಗೆ ಅನುಗುಣವಾಗಿ ನೀರು ಸರಬರಾಜು ಮಾಡಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.



ಭೀಮಾ ನದಿ ದಂಡೆಯಿಂದ ಎಂ,ಎಸ್ 711 ವ್ಯಾಸದ 7 ಕೊಳವೆ ಮಾರ್ಗ, 4.5 ಕಿ.ಮೀ ಹಾಲಿ ಇರುವ ನೀರು ಶುದ್ಧಿಕರಣ ಘಟಕದವರೆಗೆನಿರ್ಮಾಣಮಾಡುವ ಜೊತೆಗೆಹೊಸ 7.00 ಎಂಎಲ್‌ಡಿ ಸಾಮರ್ಥ್ಯದ ಜಲ ಶುದ್ಧಿಕರಣ ಘಟಕ ನಿರ್ಮಾಣ, ಇದರಲ್ಲಿ 3 ಸಂಖ್ಯೆಯ 250 ಹೆಚ್‌ಪಿ ಶುದ್ಧ ನೀರೆತ್ತುವ ಯಂತ್ರಗಳನ್ನು ಅಳವಡಿಸುತ್ತಾರೆ, ಅದರಂತೆ ಈ ಉದ್ಯಾನವನದಲ್ಲಿ 7.50 ಲಕ್ಷ ಲೀ. ಸಾಮರ್ಥ್ಯದ ಜಲ ಸಂಗ್ರಹ ಘಟಕ ನಿರ್ಮಾಣ ಮಾಡಿ, ಪೈಪಲೈನ್ ಮೂಲಕ ಇತರ ವಾರ್ಡಗಳಿಗೆ ನೀರು ಪೂರೈಕೆ ಮಾಡಲಾಗುತ್ತದೆ ಎಂದು ತಿಳಿಸಿದರು.

ಕೋಲಿವಾಡದಲ್ಲಿರುವ 27 ದಶಲಕ್ಷ ಲೀ. ಸಾಮರ್ಥ್ಯದ ಜಲ ಸಂಗ್ರಹಗಾರವನ್ನು ನವೀಕರಣಗೊಳಿಸಲಾಗುವುದು, ಬರುವ ದಿನಗಳಲ್ಲಿ ನಗರದ ಎಲ್ಲಾ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಕೆಗೆ ನಾವೂ ಎಲ್ಲರ ಜೊತೆಗೂಡಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ ಎಂದು ಭರವಸೆ ನೀಡಿದರು.

ಮುಖ್ಯಮಂತ್ರಿಸಿದ್ದರಾಮಯ್ಯನವರು ಇಲ್ಲಿಯವರೆಗೆ16 ಬಜೆಟ್‌ಗಳನ್ನು ಮಂಡಿಸಿದ್ದಾರೆ,ಅವರಗೆ ಅಪಾರ ಆರ್ಥಿಕಅನುಭವವಿದೆ,ಪರಿಣಾಮ ಸರ್ಕಾರ ಉಚಿತ ಗ್ಯಾರಂಟಿಗಳಿಗೆ ಹಣ ಹೊಂದಿಸುವ ಜೊತೆಗೆ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ಸಕಾಲಕ್ಕೆ ಅನುದಾನ ನೀಡುತ್ತಿದೆ, ಇದರಿಂದಅಭಿವೃದ್ಧಿ ವೇಗಹೆಚ್ಚಾಗಿದೆ ಎಂದು ಅಭಿಪ್ರಾಯಪಟ್ಟರು.

ಪ್ರತಿ ವರ್ಷ ಕಲ್ಯಾಣ ಕರ್ನಾಟಕಕ್ಕೆ ಸರ್ಕಾರ 5 ಸಾವಿರ ಕೋಟಿ ಅನುದಾನ ನೀಡುತ್ತಿದೆ, ಈ ಭಾಗಕ್ಕೆ 120 ಕ್ಕೂಹೆಚ್ಚು ಕೋಟಿ ಅನುದಾನ ಬಿಡುಗಡೆಯಾಗಿದೆ, ಆರೋಗ್ಯ ಕ್ಷೇತ್ರಕ್ಕೆ 900 ಕೋಟಿ ಖರ್ಚು ಮಾಡಲಾಗುತ್ತಿದೆ, ಶಿಕ್ಷಣ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ, ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಗ್ರಾಮೀಣ 35 ಕಿ.ಮೀ ರಸ್ತೆಗಳ ನಿರ್ಮಾಣ ಮಾಡಲಾಗಿದೆ, ಜಿಲ್ಲಾಸ್ಪತ್ರೆಯಲ್ಲಿ ಸಿಟಿ ಸ್ಕ್ಯಾನಿಂಗ್‌ಗೆ 8 ಕೋಟಿ ರೂ. ಒದಗಿಸಲಾಗಿದೆ, ಅದರಂತೆ ಲೋಕೋಪಯೋಗಿ ಇಲಾಖೆ,ಜಿ.ಪಂ, ಸಣ್ಣ ನೀರಾವರಿ ಇಲಾಖೆಯಿಂದ ಮಹತ್ವದ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗಿದೆ ಎಂದು ವಿವರಿಸಿದರು.

ಈಗಾಗಲೇ ಜಿಲ್ಲೆಯ ಸುರಪುರ ನಗರಕ್ಕೆ ಕುಡಿಯುವ ನೀರು ಕಾಮಗಾರಿ ಮುಗಿದಿದೆ, ಅದರಂತೆ ಶಹಾಪುರಕ್ಕೆ ಭೀಮಾನದಿಯಿಂದ 170 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರು ಪೂರೈಸುವ ಕಾಮಗಾರಿ ಪ್ರಗತಿಯಲ್ಲಿದೆ ಎಂದರು.

ಸಮಾರಂಭದ ಅಧ್ಯಕ್ಷತೆವಹಿಸಿದ ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನೂರ ಮಾತನಾಡಿ, ಕಳೆದ 5-6 ವರ್ಷಗಳಿಂದ ನಗರದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದಾರೆ, ಸದ್ಯ ಬೇಸಿಗೆ ಸಮಯವಾಗಿದೆ, ಎಲ್ಲರಿಗೂ ನೀರು ತಲುಪಿಸುವ ಪ್ರಯತ್ನ ನಡೆಯುತ್ತಿದೆ, ಇನ್ನೂ 2 ವರ್ಷದಲ್ಲಿ ಈ ಕಾಮಗಾರಿ ಮುಗಿದರೆ ಎಲ್ಲರಿಗೂಅನುಕೂಲತೆವಾಗುತ್ತದೆ, ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಕಾಮಗಾರಿಯನ್ನು ಗುಣಮಟ್ಟದಿಂದಕೈಗೊಂಡುನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಿ ಎಂದು ಸೂಚಿಸಿದರು.

ಕ.ಕ ಜನರ ಬಹುದಿನದ ಬೇಡಿ-ಕೆಯಾದ ಸಂವಿದಾನದ 371ನೇಜೆ ಕಲಂ ತಿದ್ದುಪಡಿಯಾಗಲು ಮಾಜಿ ಮುಖ್ಯಮಂತ್ರಿ ದಿ. ಧರ್ಮಸಿಂಗ ಹಾಗೂ ಹಾಲಿ ಎಐಸಿಸಿ ಅಧ್ಯಕ್ಷ ಡಾ,ಮಲ್ಲಿಕಾರ್ಜುನ ಖರ್ಗೆಯವರು ಶ್ರಮಿಸಿದ ಪರಿಣಾಮ ಈ ಭಾಗಕ್ಕೆ ಅಭಿವೃದ್ಧಿಗಾಗಿ ಹೆಚ್ಚಿನ ಅನುದಾನ ಬರುತ್ತಿದೆ, ಬರುವ ದಿನಗಳಲ್ಲಿ ಯಾದಗಿರಿ ಮತಕ್ಷೇತ್ರದ ಜನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನುಒದಗಿಸುಗಿಸುವ ಮಹತ್ವದ ಯೋಜನೆಗಳ ಅನುಷ್ಠಾನಕ್ಕೆ ಯತ್ನಿಸುತ್ತೇನೆ ಎಂದು ತಿಳಿಸಿದರು,

ನಗರ ನೀರು ಸರಬರಾಜು ಹಾಗೂ ಒಳಚರಂಡಿ ಮಂಡಳಿ ಸಹಾಯಕಇಂಜಿಯರರಾಜಕುಮಾರ ಪ್ರಾಸ್ತಾವಿಕಮಾತನಾಡಿ,ಯೋಜನೆ ವಿವರ ವಿವರಿಸಿದರು.

ವೇದಿಕೆ ಮೇಲೆ ಜಿಲ್ಲಾಧಿಕಾರಿ ಡಾ,ಸುಶೀಲಾ.ಬಿ,ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಲವೀಶ ಒರಾಡಿಯಾ,ನಗರಸಭೆ ಅಧ್ಯಕ್ಷೆ ಕು. ಲಲಿತಾ ಅನಪೂರ, ಉಪಾಧ್ಯಕ್ಷೆರುಖೀಯಾ ಬೇಗಂ, ಯುಡಾ ಅಧ್ಯಕ್ಷ ವಿನಾಯಕ ಮಾಲಿ ಪಾಟೀಲ್,ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ನರಸಿಂಹರಡ್ಡಿ, ಸಹಾಯಕ ಕಾರ್ಯನಿರ್ವಾಹಕ ಅಧಿಕಾರಿ ಅಶೋಕ ಕುಮಾರ,ನಗರಸಭಾ ಸದಸ್ಯರಾದ ನಿರ್ಮಲಾ ಜಗನ್ನಾಥ, ಹಣಮಂತ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ನಗರಸಭೆಪೌರಾಯುಕ್ತಉಮೇಶ ಚವ್ಹಾಣ ಸ್ವಾಗತಿಸಿದರು,ಸಹಾಯಕ ಇಂಜಿನಿಯರ ಶಂಕರಗೌಡ ವಂದಿಸಿದರು.

## ಡಾ.ಬಾಬುಜೀಯರ ಆದರ್ಶಗಳು ಜೀವನದಲ್ಲಿ ಅಳವಡಿಸಿಕೊಳ್ಳಲು ಕರೆ




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಹಸಿರು ಕ್ರಾಂತಿ ಹರಿಕಾರ, ಮಾಜಿ ಉಪ ಪ್ರಧಾನಿ ಡಾ,ಬಾಬು ಜಗಜೀವನರಾಂರವರ 118 ನೆಯ ಜಯಂತಿಯನ್ನು ತಾಲುಕಾ ಅಡಳಿತ ಆಶ್ರೆಯದಲ್ಲಿ ನಗರಸಭೆ ಅವರಣದಲ್ಲಿನಡೆಯಿತು, ಕಾರ್ಯಕ್ರಮವನ್ನು ಉಧ್ಘಾಟಿಸಿ ಮಾತನಾಡಿದ ತಹಿಸಲ್ದಾರ ಉಮಾಕಾಂತ ಹಳ್ಳೆಯವರು, ಡಾ,ಬಾಬು ಜಗಜೀವನರಾಂರವರು ಜಾರಿಗೆ ತಂದಿರುವ ಅನೇಕ ಜನಪಕಾರ್ಯ ಯೋಜನೆಗಳಿಂದ ಅಭಿವೃದ್ದಿಯತ್ತ ಸಾಗುತ್ತಿದ್ದೇವೆ, ಅವರ ತತ್ವಸಿದ್ದಾಂತಗಳು ಇಂದಿನ ಯುವ ಪಿಳಿಗೆ ಓದಿ ಅರ್ಥೈಸಿಕೊಂಡು ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಅವರು ಕರೆ ನಿಡಿದರು, ನಗರಸಭೆ ಅಧ್ಯಕ್ಷರಾದ ಶ್ರೀಮತಿ ಮೃಹರುನ್ನಾಸಾಬೇಗಂ,ರವರು ಡಾ,ಬಾಬುಜೀಯವರ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು,ತಾ,ಪಂ, ಕಾರ್ಯನಿರ್ವಾಹಣಾಧಿಕಾರಿಗಳಾದ ಬಸವರಾಜ ಶರಬೈ,,ಖಜಾನೆ ಇಲಾಖೆ ಅಧಿಕಾರಿ ಡಾ, ಮೋನಪ್ಪ ಶಿರವಾಳ, ನಗರಸಭೆ ಪೌರಾಯುಕ್ತರಾದರಮೇಶಬಡಿಗೇರ, ಲೋಕೋಪಯೋಗಿ ಇಲಾಖೆ ಎಇಇ ಸೂಗರಡ್ಡಿ ಪಾಟೀಲ್, ಬಿಸಿಯೂಟದ ಸಾಹಾಯಕ ನಿರ್ದೇಶಕರಾದ ಮಲ್ಲನಗೌಡ ಪಾಟೀಲ್, ತಾಲುಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಾದ ಚೆನ್ನಪ್ಪಗೌಡ ಚೌದ್ರಿ, ಸಣ್ಣ ನಿಂಗಣ್ಣ ನಾಯ್ಕೊಡಿ, ಜಯಂತೋತ್ಸವ ಸಮಿತಿಯ ಅಧ್ಯಕ್ಷರಾದ ವಾಸುದೇವ ಕಟ್ಟಿಮನಿ ವಕೀಲರು, ಸಮಾಜದ ಮುಖಂಡರಾದ ಶಿವುಕುಮಾರ ದೊಡ್ಡಮನಿ,ಧರ್ಮಣ್ಣದೊಡಮನಿ, ಸೇರಿದಂತೆ ಅನೇಕ ಗಣ್ಯರು ವಿವಿಧ ಇಲಾಖೆ ಅಧಿಕಾರಿಗಳು ಪಾಲ್ಗೊಂಡಿದ್ದರು,ಈಕಾರ್ಯಕ್ರಮದಲ್ಲಿ ಸಾಮಾಜದಲ್ಲಿ ಸಮಾಜಿಕ ಸೇವೆ ಸಲ್ಲಿಸಿದ ಶಿವುಕುಮಾರ ದೊಡ್ಡಮನಿ, ಭೀಮರಾಯ ರಸ್ತಾಪುರ, ವಾಸುದೇವ ಕಟ್ಟಿಮನಿಯರಿಗೆ ಗೌರವಿಸಲಾಯಿತು.

## ಸಾಮಾಜಿಕ ಪತ್ರಿಕಾಸೇವೆಗೈದ ವೆಂಕಟೇಶ ಆಲೂರವರಿಗೆ ಸನ್ಮಾನ.



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಹಸಿರು ಕ್ರಾಂತಿ ಹರಿಕಾರ ಮಾಜಿ ಉಪ ಪ್ರಧಾನಿ ಡಾ,ಬಾಬುಜಗಜೀವನರಾಂ,ರವರ 118 ನೆಯ ಜಯಂತಿ ಯಾದಗಿರಿ ಜಿಲ್ಲಾಡಳಿತದಿಂದ ಡಾ,ಬಾಬು ಜಗಜೀವನರಾಂ ಭವನದಲ್ಲಿ ನಡೆಯಿತು. ಈ ಸಮಯದಲ್ಲಿ ಸಾಮಾಜಿಕ, ಕೃಷಿ, ಪತ್ರಿಕಾ, ಸೇವೆ ಪರಿಗಣಿಸಿ ಜಿಲ್ಲಾಡಳಿತ ಶಹಾಪುರದ ಸಮಾಜ ಸೇವೆ, ಮತ್ತು ಪತ್ರಿಕೆ ಸೇವೆಯಲ್ಲಿ ಕೃಷಿ ಮಾಡಿರುವ ವೆಂಕಟೇಶ ಆಲೂರವರನ್ನು ಮತ್ತು ಶಾಂತಪ್ಪ ಗುತ್ತೆದಾರವರನ್ನು ಯಾದಗಿರಿ ಶಾಸಕರಾದ ಚೆನ್ನಾರಡ್ಡಿ ತುನ್ನೂರ, ಜಿಲ್ಲಾಧಿಕಾರಿಗಳಾದ ಡಾ,ಪಿ,ಸುಶೀಲ.ಜಿಲ್ಲಾ ಪೋಲಿಸ್ ವರೀಷ್ಠಾಧಿಕಾರಿಗಳಾದ ಪೃತ್ವಿಕ ಶಂಕರ್, ಜಿ,ಪಂ, ಮುಖ್ಯಕಾರ್ಯ ನಿರ್ವಾಹಣಾಧಿಕಾರಿಗಳಾದ ಲವಿಶ ಓರಡಿಯಾ. ನಗರಸಭೆ ಅಧ್ಯಕ್ಷರಾದ ಕು,ಲಲಿತಾ ಅನನಪೂರ,,ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ. ಚೆನ್ನಬಸ್ಸಪ್ಪ, ಡಾ,ಬಾಬು ಜಗಜೀವನರಾಂ, 118 ನೆಯ ಜಯಂತೋತ್ಸವ ಸಮಿತಿ ಅಧ್ಯಕ್ಷರಾದ ಲಿಂಗಪ್ಪ ಹತ್ತಿಮನಿ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ದಲಿತಪರ ಸಂಘಟನೆಗಳ ಮುಖಂಡರು ಹಾಜರಿದ್ದರು,ಈ ಸಂಧರ್ಭದಲ್ಲಿ ಶಹಾಪುರ ತಾಲುಕಾ ಪತ್ರಿಕಾ ಬಳಗದಿಂದ ವೆಂಕಟೇಶ ಆಲೂರವರನ್ನು ಹಾಗೂ ಶಾಂತಪ್ಪ ಕಟ್ಟಿಮನಿಯವರನ್ನು ಗೌರವಿಸಿ ಸನ್ಮಾನಿಸಲಾಯಿತು, ಹಿರಿಯ ಪತ್ರಕರ್ತರಾದ ಈರಣ್ಣ ಹಾದಿಮನಿ, ಸುದಿಫ ಶಿಕ್ಷಣ ಸಂಸ್ಥೆ ಅಧ್ಯಕ್ಷರಾದ ಸಾಹೇಬಣ್ಣ ಪುರ್ಲೆ, ಪತ್ರಕರ್ತರಾದ ಚಂದ್ರಶೇಖರ ಕಟ್ಟಿಮನಿ, ದಲಿತ ಮುಖಂಡರಾದ ಸೊಪಣ್ಣ ದರಿಯಾಪುರ, ಭೀಮರಾಯ ದೊಡ್ಡಮನಿ,ರುದ್ರಪ್ಪ ಹುಲಿಮನಿ, ನಗರಸಭೆ ನಾಮನಿರ್ದೇಶನ ಸದಸ್ಯರಾದ ವಿಜಯಕುಮಾರ ಎದರಮನಿ, ಬಸವರಾಜ ನಾಯ್ಕಲ್, ರವಿಂದ್ರಚಂದ್ರ ಎದರಮನಿ, ಗುರು ದೊಡ್ಮನಿ, ಶಿವುಪತ್ರರಬನಳ್ಳಿ ಭೀಮರಾಯ ನರಬೋಳಿ, ಸೇರಿದಂತೆ ಅನೇಕ ಗಣ್ಯರು ದಲಿತ ಮುಖಂಡರು ಹಿರಿಯರು ಪಾಲ್ಗೊಂಡಿದ್ದರು,

## ಶಾಂತರಸರಿಗೂ ಕೊಪ್ಪಳಕ್ಕೂ ಇದೆ ವಿಶೇಷ ನಂಟು: ಮದರಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಹೋರಾಟದ ಹಾದಿ, ಸಾಹಿತ್ಯ ಕ್ಷೇತ್ರದಲ್ಲಿ ಶಾಂತರಸ ಅವರದ್ದು ದೊಡ್ಡಹೆಜ್ಜೆ. ಅವರಿಗೂ ಕೊಪ್ಪಳಕ್ಕೂ ವಿಶೇಷ ನಂಟಿದೆ ಎಂದು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಪ್ರಶಸ್ತಿ ವಿಜೇತರಾದ ಎ.ಎಂ.ಮದರಿ ಹೇಳಿದರು.

ಕವಿ ಸಮೂಹ ಕೊಪ್ಪಳ, ಸಂಸ ಥಿಯೇಟರ್ ಬೆಂಗಳೂರು, ಬಹುತ್ವಬಳಗ ಕೊಪ್ಪಳ, ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ವಿಭಾಗದ ಸಹಯೋಗದಲ್ಲಿ ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಸೋಮವಾರ ನಡೆದ ಶಾಂತರಸರ ಶತಮಾನೋತ್ಸವ ಆಚರಣೆ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಹಿಂದಿನವರನ್ನು ನಾವು ನೆನಪಿಸಿಕೊಳ್ಳಬೇಕು. ಕೃತಜ್ಞತಾ ಭಾವದಿಂದ ಅವರಿಗೆ ಗೌರವವನ್ನು ಸಲ್ಲಿಸಬೇಕು. ಇದು ನಮ್ಮ ಕರ್ತವ್ಯವು ಹೌದು . ಆ ಊರು ಈ ಊರು ಯಾವ ಊರಾದರೇನು? ನಮ್ಮ ಊರೇ ನಮಗೆ ಚೆಂದ. ನಮ್ಮೆಲ್ಲರ ಕನಸಿನಲ್ಲಿ ಬರುವುದು ಸಹ ನಮ್ಮದೇ ಊರು, ನಮ್ಮದೇ ಭಾಷೆ. ಹೀಗೆ ಹೆಂಬೆರಾಳ ಶಾಂತರಸರಿಗೂ, ಕೊಪ್ಪಳಕ್ಕೂ ವಿಶೇಷ ನಂಟಿದೆ. ಹೀಗಾಗಿ ಈ ಕಾರ್ಯಕ್ರಮ ವಿಶೇಷವಾಗಿದೆ ಎಂದು ವಿಮರ್ಶಕ ಎ.ಎಂ ಮದರಿ ತಿಳಿಸಿದರು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದ ಹಿಂಭಾಗದಲ್ಲಿ ಸಂಸ ರಂಗ ಮಂದಿರವಿದೆ. ಅವರು ದೊಡ್ಡ ನಾಟಕಕಾರರು. ಅವರ ಹೆಸರಿನ ಸಂಘಟನೆಯೂ ಸಹ ಈ ಕಾರ್ಯಕ್ರಮದಲ್ಲಿಜೊತೆಯಾಗಿರುವುದು ವಿಶೇಷ. ಕಾರ್ಯಕ್ರಮಗಳನ್ನು ಉದ್ಘಾಟನೆ ಮಾಡುವುದು ನೀರು ಎರೆವುದರ ಮೂಲಕ. ಅಂದರೆ ಅದು ಬೆಳೆಸುವುದರ ಸಂಕೇತ. ವಿದ್ಯಾರ್ಥಿಗಳು ಸಹ ಸಸಿಗಳಂತೆ. ವಿವಿಧ ವಿಷಯಗಳನ್ನು ಧಾರೆ ಎರೆದುಅವರನ್ನುಬೆಳೆಸಬೇಕಾಗುತ್ತದೆ ಎಂದು ಹೇಳಿದರು.

ಬಂಡಾಯ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು ಕೊಪ್ಪಳಕ್ಕೆ ಬರಲಿರುವ ಫ್ಯಾಕ್ಟರಿ ಬಗ್ಗೆ ವಿದ್ಯಾರ್ಥಿಗಳು, ಜನರು ಎಚ್ಚೆತ್ತುಕೊಳ್ಳಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯ್ಕ ಮಾತನಾಡಿ, ಕಾಲೇಜಿನ ಕನ್ನಡ ವಿಭಾಗ ಇಂಥ ಕಾರ್ಯಕ್ರಮಗಳನ್ನು ಹೆಚ್ಚಾಗಿ, ಅಚ್ಚುಕಟ್ಟಾಗಿ ರೂಪಿಸಬೇಕು. ವಿದ್ಯಾರ್ಥಿಗಳು ಸಹ ಇಂಥ ಕಾರ್ಯಕ್ರಮಗಳಿಂದ ಸಾಧಕರ ಬದುಕು ಅರಿತು, ಪ್ರೇರಣೆ ಪಡೆದು, ಸಾಧನೆಯ ಹಾದಿಯಲ್ಲಿ ಸಾಗಬೇಕು ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಕಾಲೇಜಿನ ಕನ್ನಡ ವಿಭಾಗದ ಸಹಪ್ರಾಧ್ಯಾಪಕರಾದ ಡಾ.ಭಾಗ್ಯಜ್ಯೋತಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ, ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜುಂದಾರ, ಹಿರಿಯ ಚಿಂತಕ ರವಿ ಕಾಂತನವರ, ಬಿಕನಳ್ಳಿಯ ರಂಗಭೂಮಿ ಕಲಾವಿದ ಮಲ್ಲಪ್ಪ ಕುರಿ, ಬಹುತ್ವ ಬಳಗದ ಎಚ್. ವಿ.ರಾಜಾಭಕ್ಷಿ, ಚುಟುಕು ಕವಿ ಶಿವಪ್ರಸಾದ ಹಾದಿಮನಿ, ಕಾಲೇಜಿನ ಬೋಧಕ ಸಿಬ್ಬಂದಿ ಡಾ.ಪ್ರಕಾಶ್ ಬಳ್ಳಾರಿ, ಡಾ.ಬೋರೇಶ್.ಇ, ಎಂ.ಶಿವಣ್ಣ, ಬಸವರಾಜ ಕರುಗಲ್, ಉಮೇಶ್ ಅಂಗಡಿ, ಮತ್ತಿತರರು ಇದ್ದರು.

ಚೈತ್ರಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಸಾಹಿತಿ, ನ್ಯಾಯವಾದಿಗಳಾದ ವಿಜಯ ಅಮೃತರಾಜ್ ಸ್ವಾಗತಿಸಿದರು. ಕವಿಸಮೂಹದ ಸಿರಾಜ್ ಬಿಸರಳ್ಳಿ ಪ್ರಾಸ್ತಾವಿಕ ಮಾತನಾಡಿದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ಡಾ.ಅನ್ನಪೂರ್ಣ ಗೋಸಬಾಳ ವಂದಿಸಿದರು.

## ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ 54ನೇ ಸಂಸ್ಥಾಪನ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರು ತಾಲೂಕಿನ ಮಸಬ ಹಂಚಿನಾಳ ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಭಾರತೀಯ ಜನತಾ ಪಕ್ಷದ 45ನೇ ಸಂಸ್ಥಾಪನ ದಿನಾಚರಣೆಯ ಕಾರ್ಯಕ್ರಮವನ್ನು ಆಚರಣೆ ಮಾಡಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಡಲದ ಬಿಜೆಪಿ ಅಧ್ಯಕ್ಷರಾದ ಮಾರುತಿ ಗಾವರಾಳ ಕಾರ್ಯಕ್ರಮದ ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ಮಾಜಿ ಸಚಿವರು ಹಿರಿಯರಾದ ಹಾಲಪ್ಪ ಆಚಾರ್ ಅವರು ಬಿಜೆಪಿ ಪಕ್ಷದ ಸಂಸ್ಥಾಪನೆ ದಿನಾಚರಣೆ ಕುರಿತು ಹಾಗೂ ಪಕ್ಷದ ಕಾರ್ಯಕರ್ತರ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಪ್ರಧಾನ ಕಾರ್ಯದರ್ಶಿಯಾದ ಅಂಬರೀಶ್ ಹುಬ್ಬಳ್ಳಿ, ಶಿವಕುಮಾರ ನಾಗಲಾಪುರಮಠ, ಶರಣಪ್ಪ ಬಣ್ಣದ ಬಾವಿ, ಬಸನಗೌಡ ತೊಂಡಿಹಾಳ, ಶಂಬು ಜೋಳದ, ನಾಗರಾಜ ವೆಂಕಟಾಪುರ, ಮಹಿಳಾ ಮೋರ್ಚಾ ಅಧ್ಯಕ್ಷಣಿ ಸಂತೋಷಮ್ಮ ಜೋಶಿ,

ಬಿಜೆಪಿ ಮಹಿಳಾ ಮೋರ್ಚಾ ಕಾರ್ಯದರ್ಶಿ ಪಾರ್ವತಿ ಅನಸಿ, ಯುವ ಮೋರ್ಚಾ ಅಧ್ಯಕ್ಷ ಕಲ್ಲೇಶಪ್ಪ ಕರಮುಡಿ, ಹಾಗೂ ಕುಕುನೂರು ಪಟ್ಟಣ ಪಂಚಾಯತಿ ಸದಸ್ಯರಾದ ಜಗನ್ನಾಥ್ ಬೋವಿ, ಬಾಲರಾಜ್ ಗಾಳಿ,ಶಿವರಾಜ್ ಎಲ್ಲಪ್ಪ ಗೌಡ್ರು, ಮಾಂತೇಶ್ ಹೂಗಾರ್, ಚಂದ್ರು ಬಗನಾಳ, ನಾಗರಾಜ್ ಬನ್ನಿಕೊಪ್ಪ,ಉಮೇಶ್ ಗೌಡ ಪಾಟೀಲ್, ಪ್ರಕಾಶ್ ತಹಸಿಲ್ದಾರ್, ಲಕ್ಷ್ಮಣ ಕಾಳಿ, ಪ್ರಕಾಶ್ ರಾಜೂರು,ದ್ಯಾಮಣ್ಣ ಬೇವೂರ, ಹಾಗೂ ಇತರರು ಇದ್ದರು.

## ಜೆಸ್ಕಾಂ ಗ್ರಾಮೀಣ: ಇಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್ 07-ಜೆಸ್ಕಾಂ ರಾಯಚೂರು ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ 110/11 ಕೆವಿ ಮಲಿಯಾಬಾದ, ವಡವಟ್ಟಿ, ಯರಗೇರಾ, ಯಾಪಲದಿನ್ನಿ ಉಪ-ಕೇಂದ್ರಗಳು ಮತ್ತು 33/11 ಕೆವಿ ಗಿಲ್ಲೇಸೂಗೂರು, ಇಡಪನೂರು ಉಪ-ಕೇಂದ್ರಗಳಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವಪ್ರಯುಕ್ತ ಏಪ್ರೀಲ್ 8ರ ಬೆಳ್ಳಿಗ್ಗೆ 09ಗಂಟೆಯಿಂದ ಮಧ್ಯಾಹ್ನ 03ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ಬೆಳಿಗ್ಗೆಯಿಂದ ಮಲಿಯಾಬಾದ, ವಡವಟ್ಟಿ, ಯರಗೇರಾ, ಯಾಪಲದಿನ್ನಿ ಗಿಲ್ಲೇಸೂಗೂರು, ಇಡಪನೂರು ವಿದ್ಯುತ್ ಉಪ-ಕೇಂದ್ರಗಳ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ರಾಯಚೂರು ಗ್ರಾಮೀಣ ಕಾರ್ಯ ಮತ್ತು ಪಾಲನೆ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾದ್ವಾರ ಗ್ರಾಮದ ನೂತನ ಬಸ್ ನಿಲ್ದಾಣದ ಉದ್ಘಾಟನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 07-: ಯಾದಗಿರಿ ವಿಭಾಗದಲ್ಲಿ ಕಲ್ಯಾಣ ಕರ್ನಾಟಕರಸ್ತೆಸಾರಿಗೆನಿಗಮದಿಂದ ಮಾದ್ವಾರ ಗ್ರಾಮದ ನೂತನ ಬಸ್ ನಿಲ್ದಾಣದ ಉದ್ಘಾಟನೆ ಕಾರ್ಯಕ್ರಮವನ್ನು 2025ರ ಏಪ್ರಿಲ್ 9ರ ಬುಧವಾರ ರಂದು ಬೆಳಿಗ್ಗ 10.30 ಗಂ-ಟೆಗೆ ಆಯೋಜಿಸಲಾಗಿದೆ. ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಯಾದಗಿರಿ ವಿಭಾಗದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಮಾದ್ವಾರ ಗ್ರಾಮದ ನೂತನ ಬಸ್ ನಿಲ್ದಾಣದ ಉದ್ಘಾಟನೆಯನ್ನು ಸಚಿವರ ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು. ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಅಧ್ಯಕ್ಷರು ಹಾಗೂ ಸಾರಿಗೆ ಇಲಾಖೆ, ಮುಜರಾಯಿ ಇಲಾಖೆ ಸಚಿವರು ಶ್ರೀ ರಾಮಲಿಂಗಾರೆಡ್ಡಿ ಕಾರ್ಯಕ್ರಮವನ್ನುಉದ್ಘಾಟಿಸುವರು.

ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರಗೌರವಾನ್ವಿತ ಉಪಸ್ಥಿತಿಯಲ್ಲಿ ನೆರವೇರಲಿದೆ. ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅಧ್ಯಕ್ಷತೆ ವಹಿಸುವರು. ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಮದ್ವಾರ ಗ್ರಾಮ ಪಂಚಾಯತ ಅಧ್ಯಕ್ಷರು ಶ್ರೀ ಶಂಕರಪ್ಪ ಅತಿಥಿಗಳಾಗಿ ಪಾಲ್ಗೊಳ್ಳುವರು. ಕರ್ನಾಟಕ ಸರ್ಕಾರ ಸಾರಿಗೆ ಇಲಾಖೆ ಕಾರ್ಯದರ್ಶಿಗಳು ಡಾ.ಎನ್.ವಿ ಪ್ರಸಾದ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಪಶುಸಂಗೋಪನಾ ಹಾಗೂ ಮೀನುಗಾರಿಕೆ ಇಲಾಖೆ ಕಾರ್ಯದರ್ಶಿಗಳು ಅನ್ಬುಕುಮಾರ, ಯಾದಗಿರಿ ಜಿಲ್ಲಾ ಪಂಚಾಯತ್, ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ,ಆಡಳಿತಾಧಿಕಾರಿಗಳು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರ ಮತ್ತು ಕಾನೂನು ಮಾಪನ ಶಾಸ್ತ್ರ ಇಲಾಖೆ ಹಾಗೂ ಯೋಜನಾ ಕಾರ್ಯಕ್ರಮ ಸಂಯೋಜನ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಇಲಾಖೆ ಮತ್ತು ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಮನೋಜ್ ಜೈನ್, ಕಲಬುರಗಿ ವಿಭಾಗ ಪ್ರಾದೇಶಿಕ ಆಯುಕ್ತರು ಶ್ರೀ ಕೃಷ್ಣ ಭಾಜಪೇಯಿ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕರು ಶ್ರೀ ರಾಮಚಂದ್ರನ್.ಆರ್,ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಹುಬ್ಬಳ್ಳಿ ವಾಯು ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯವಸ್ಥಾಪಕ ನಿರ್ದೇಶಕರು ಶ್ರೀಮತಿ ಪ್ರಿಯಾಂಗ. ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಸಿಬ್ಬಂದಿ, ಆಡಳಿತ ವರ್ಗ ಹಾಗೂ ಸರ್ವರಿಗೂ ಆದರದ ಸ್ವಾಗತವನ್ನು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವ್ಯವಸ್ಥಾಪಕ ನಿರ್ದೇಶಕರು ಶ್ರೀ ಎಂ.ರಾಚಪ್ಪ, ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಮುಖ್ಯ ಕಾಮಗಾರಿ ಅಭಿಯಂತರರು ಶ್ರೀ ಚನ್ನನ ಬೋರಯ್ಯ, ಯಾದಗಿರಿ ವಿಭಾಗ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗೀಯ ನಿಯಂತ್ರಣಾಧಿಕಾರಿ ಸುನೀಲಕುಮಾರ ಹ. ಚಂದರಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ

# ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿರಲಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಬೇಸಿಗೆ ಹಿನ್ನೆಲೆಯಲ್ಲಿ ವಿವಿಧ ತಾಲ್ಲೂಕು ಹಾಗೂ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆ ಸಮರ್ಪಕವಾಗಿರಬೇಕು ಹಾಗೂ ನಿರ್ವಹಣೆಯಲ್ಲಿ ಯಾವುದೇ ಲೋಪವಾಗುವಂತಿಲ್ಲ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರದಂದು,ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೇಸಿಗೆಯಲ್ಲಿ ಜಿಲ್ಲೆಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಕೊರತೆ–ಯಾಗದಂತೆ ನೋಡಿಕೊಳ್ಳಬೇಕು. ನಗರ ಮತ್ತು ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರು ಸಮಸ್ಯೆಯಾದಲ್ಲಿ ನೀರಿನ ಟ್ಯಾಂಕರ್ ಇರಿಸಿಕೊಳ್ಳಬೇಕು. ಅಗತ್ಯ ಮೇವಿನ ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಸಮಸ್ಯೆ ಬರಬಹುದಾದಂತಹ ಗ್ರಾಮಗಳನ್ನು ಗುರುತಿಸಿ, ಆ ಗ್ರಾಮಗಳಿಗೆ ಆಯಾ ತಾಲ್ಲೂಕು ತಹಶೀಲ್ದಾರರು, ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಗರಸಭೆ, ಪುರಸಭೆ ಹಾಗೂ ಪಪಂ ಮುಖ್ಯಾಧಿಕಾರಿಗಳು ಭೇಟಿ ನಡೆಸಬೇಕು ಎಂದು ನಿರ್ದೇಶನ ನೀಡಿದರು.

ಗ್ರಾಮೀಣ ಭಾಗಗಳಲ್ಲಿ ಆರ್‌ಓ ಘಟಕಗಳನ್ನು ಶುದ್ಧಗೊಳಿಸಿಟ್ಟುಕೊಳ್ಳಬೇಕು.

ಕುಡಿಯುವ ನೀರು ಎಲ್ಲೂ ಕಲುಷಿತಗೊಳ್ಳದಂತೆ ಎಚ್ಚರವಹಿಸಬೇಕು. ಮುಖ್ಯವಾಗಿ ಬಳ್ಳಾರಿ ತಾಲ್ಲೂಕಿನ ಹಲಕುಂದಿ, ಹೊನ್ನಳ್ಳಿ, ಹೊನ್ನಳ್ಳಿ ತಾಂಡಾ ಗ್ರಾಮಗಳಲ್ಲಿ ಉಲ್ಬಣವಾಗಬಹುದಾದ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ತಾಲ್ಲೂಕು ತಹಶೀಲ್ದಾರರಿಗೆ ಸೂಚಿಸಿದರು.

**ಅಧಿಕಾರಿಗಳೊಂದಿಗೆ ಸಮನ್ವಯತೆ ಇರಲಿ:**

ಕುಡಿಯುವ ನೀರು ಪೂರೈಕೆ ಸಂಬಂಧಿಸಿದಂತೆ ವಿದ್ಯುತ್ ಸಮಸ್ಯೆ ಕಂಡುಬಂದಲ್ಲಿ ಕೂಡಲೇ ಜೆಸ್ಕಾಂ ಇಲಾಖೆಯ ಅಧಿಕಾರಿಗಳೊಂದಿಗೆ ಸಮನ್ವಯತೆ ಸಾಧಿಸಬೇಕು. ನಿಗದಿತ ಅವಧಿಯೊಳಗೆ ಸಮಸ್ಯೆ ಪರಿಹರಿಸಲು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಅವರು ತಿಳಿಸಿದರು.

ಬಿಸಿಲಿನ ಪ್ರಖರತೆ ಹೆಚ್ಚಾಗಿರುವ ಹಿನ್ನಲೆಯಲ್ಲಿ ಸರ್ಕಾರಿ ಕಚೇರಿಗಳ ಸಮಯವು ಬದಲಾಗಿರುವುದರಿಂದ ಅವಶ್ಯಕತೆ ಬಂದಾಗ ಸಮಯ ಮೀರಿಯೂ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕೆಲಸ ನಿರ್ವಹಿಸಬೇಕು. ಉದಾಸೀನತೆ ತೋರುವಂತಿಲ್ಲ ಎಂದು ಎಚ್ಚರಿಸಿದರು.

ಜಿಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಮಾತನಾಡಿ, ಆಯಾ ಗ್ರಾಪಂ ಮಟ್ಟದಲ್ಲಿನ ಕುಡಿಯುವ ನೀರಿನ ಓವರ್ ಹೆಡ್ ಟ್ಯಾಂಕ್‌ಗಳ ಭರ್ತಿಗೆ ಕ್ರಮವಹಿಸಬೇಕು. ಸ್ವಚ್ಛತೆಗೆ ಆದ್ಯತೆ ನೀಡಬೇಕು. ಈ ಕುರಿತು ಅಧಿಕಾರಿಗಳು ವ್ಯಾಟ್ಸ್ ಆಪ್ ಗುಂಪು ರಚಿಸಿ ಎಲ್ಲರು ಜಂಟಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಪ್ರಮೋದ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಇಂದುಧರ್, ಬಳ್ಳಾರಿ ಗ್ರಾಮೀಣ ಜೆಸ್ಕಾಂನ ಕಾರ್ಯನಿರ್ವಾಹಕ ಅಭಿಯಂತರರಾದ ರಂಗನಾಥಬಾಬು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಡೆಂಗ್ಯು; ಒಂದೇ ದಿನ ಜ್ವರ ಬಂದರೂ ನಿರ್ಲಕ್ಷ್ಯ ಸಿವಂತಿಲ್ಲ: ಡಾ.ಆರ್.ಅಬ್ದುಲ್ಲಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಸಾರ್ವಜನಿಕರು ಒಂದೇ ದಿನವು ಜ್ವರ ಬಂದರೂ ನಿಲ್ಯಕ್ಷಿಸಬಾರದು, ಡೆಂಗ್ಯೂ ಜ್ವರವಿರಬಹುದು. ಹಾಗಾಗಿ ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರೀಕ್ಷಿಸಿಕೊಳ್ಳಬೇಕು ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಹೇಳಿದರು.

ಸೋಮವಾರದಂದು, ಬಳ್ಳಾರಿಯ ಜಾಗೃತಿ ನಗರದಲ್ಲಿ ವೈದ್ಯಕೀಯ ತಂಡದೊಂದಿಗೆ ಮನೆ ಭೇಟಿ ನೀಡಿ ಅವರು ಮಾತನಾಡಿದರು.

ಇತ್ತೀಚೆಗೆ ಜಿಲ್ಲೆಯಾದ್ಯಂತ ಸುರಿದ ಅಕಾಲಿಕ ಮಳೆಯಿಂದ ತಗ್ಗು ಗುಂಡಿಗಳು ಸೇರಿದಂತೆ ಅಲ್ಲಲ್ಲಿ ನೀರು ನಿಲ್ಲುವುದರಿಂದ ಡೆಂಗ್ಯು ಹರಡುವ ಈಡಿಸ್ ಇಜಿಪ್ಟೈ ಸೊಳ್ಳೆಯ ಸಂತತಿ ಹೆಚ್ಚಾಗುವ ಸಾಧ್ಯತೆ ಇದೆ. ಅಲ್ಲದೆ ಡೆಂಗ್ಯು ಪ್ರಕರಣಗಳು ಕಂಡು ಬರುವ ಸಾಧ್ಯತೆಗಳಿದ್ದು ಎಚ್ಚರ ವಹಿಸಬೇಕು ಎಂದರು.

ನೀರು ನಿಲ್ಲದಂತೆ ನೋಡಿಕೊಳ್ಳುವುದರ ಜೊತೆಗೆ ಬಳಕೆಗಾಗಿ ನೀರು ತುಂಬುವ ಪರಿಕರಣಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಬೇಕು. ಯಾರಿಗಾದರೂ ಒಂದೇ ದಿನ ಜ್ವರ ಕಂಡು ಬಂದರೂ ಸಹ



ವೈದ್ಯರ ಬಳಿ ಪರೀಕ್ಷಿಸಿ ಅಗತ್ಯ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ಡೆಂಗ್ಯು ಸಂಬಂಧಿತ ಜ್ವರವಾಗಿದ್ದರೆ ರೋಗಿಯು ಪ್ಲೇಟ್‌ಲೆಟ್ಸ್‌ಳ ಶೀಘ್ರ ಕುಸಿಯುವಿಕೆಯಿಂದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂತಹ ಗಂಭಿರ ಸಮಸ್ಯೆ ಎದುರಿಸಬೇಕಾಗಬಹುದಾಗಿದೆ. ಹಾಗಾಗಿ ಯಾರಿಗಾದರೂ 3 ದಿನಗಳ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸಿದೇ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸುವುದರ ಮೂಲಕ ವೈದ್ಯರ ಸಲಹೆಯಂತೆ ಲಕ್ಷಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.

ಆಶ್ರಯ ಕಾಲೋನಿ ವೈದ್ಯಾಧಿಕಾರಿ ಡಾ.ಕಾಶಿಪ್ರಸಾದ್ ಅವರು ಮಾತನಾಡಿ, ಈಗಾಗಲೇ ಮನೆಗಳಿಗೆ ಭೇಟಿ ನೀಡುವಾಗ ಬಾಟಲ್‌ನಲ್ಲಿ ಲಾರ್ವಾ (ಸೊಳ್ಳೆಯ ಮರಿ) ಸಂಗ್ರಹಿಸಿಕೊಂಡು ಜನತೆಗೆ ಪ್ರಾತ್ಯಕ್ಷಿಕೆಯನ್ನು ನೀಡಿ ಡ್ರಮ್, ಬ್ಯಾರಲ್, ನೀರಿನ ತೊಟ್ಟಿ, ಕಲ್ಲಿನ ಡೋಣಿ, ಹೂವಿನ ಕುಂಡಲ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಹಾಗೂ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಬೇಕು ಎಂದು ತಿಳಿಸುವ ಕೆಲಸ ಮಾಡಲಾಗುತ್ತಿದೆ. ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಬಹುದಾಗಿದೆ ಎಂದು ಅವರು ವಿವರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶಾಂತಮ್ಮ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ದಾನಕುಮಾರಿ, ಆಶಾ ಕಾರ್ಯಕರ್ತೆ ಭುವನೇಶ್ವರಿ, ಅಂಗನವಾಡಿ ಕಾರ್ಯಕರ್ತೆ ರತ್ನಾ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

## ಸಮಾಜ ಕಲ್ಯಾಣ ಇಲಾಖೆ: ಪ್ರತಿಷ್ಠಿತ ಖಾಸಗಿ ಶಾಲೆಗಳಲ್ಲಿ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ 2025–26ನೇ ಸಾಲಿಗೆ 6ನೇ ತರಗತಿಗೆ ಪ್ರತಿಷ್ಠಿತ ಖಾಸಗಿ ಶಾಲೆಗಳಲ್ಲಿ ಅರ್ಹತಾ ಪರೀಕ್ಷೆಯ ಮೂಲಕ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಬಿ.ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ.

ಆಸಕ್ತ ಪರಿಶಿಷ್ಟಜಾತಿ ವಿದ್ಯಾರ್ಥಿಗಳು ಆಯಾ ತಾಲ್ಲೂಕಿನ ಸಹಾಯ ನಿರ್ದೇಶಕರ ಕಚೇರಿಗಳಿಂದ ಅರ್ಜಿ ಪಡೆದು ಭರ್ತಿ ಮಾಡಿ ಮೇ 03 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಮೇ 09 ರಂದು ಡಯಟ್ ಮೂಲಕ ಪ್ರವೇಶ ಪರೀಕ್ಷೆ ನಡೆಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08392–267932 ಅಥವಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**CHANGE OF NAME**

I, **VEERSHETTY S/o KAMALAKAR KAMANNA** Age:40 Years, Occupation:Privat Employee R/o H.No.1/72, Belura, Tq:Basavakalyan, Dist:Bidar-585327 That I hereby declare That my Previous Passport Name is **KAMANNA VEERSHETTY S/o KAMALAKAR KAMANNA** Residing at H.no.1/72, Belura, Tq:Basavakalyan, Dist:Bidar and I Have Chanded my Name to **VEERSHETTY S/o KAMALAKAR KAMANNA** R/o H.No.1/72, Belura Tq:Basavakalyan Dist:Bidar Vide affidavit **Dated:07.04.2025** Sworn before **Advocate & Notary KAHADME UMESH**

## ನರೇಗಾ ಕಾಮಗಾರಿ ಸ್ಥಳಕ್ಕೆ ಜಿಪಂ ಉಪಕಾರ್ಯದರ್ಶಿ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಕುರುಗೋಡು ತಾಲ್ಲೂಕಿನ ಬಾದನಹಟ್ಟಿ ಗ್ರಾಪಂನ ಮನರೇಗಾ ಯೋಜನೆಯಡಿ ಕೈಗೊಂಡಿರುವ ಕಾಮಗಾರಿ ಸ್ಥಳಕ್ಕೆ ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿ ಗಿರಿಜಾ ಶಂಕರ್ ಅವರು ಸೋಮವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬಳಿಕ ಮಾತನಾಡಿದ ಅವರು, ಒಂದು ಕುಟುಂಬಕ್ಕೆ 100 ದಿನಗಳ ನಿರಂತರ ಕೆಲಸ ನೀಡಲಾಗುತ್ತದೆ. ವಿಶೇಷ ಚೇತನರಿಗೂ ಸಹ ಮನರೇಗಾ ಯೋಜನೆಯಡಿ ಕೂಲಿ ಕೆಲಸದಲ್ಲಿ ತೊಡಗಿಸಿಕೊಳ್ಳಬಹುದು ಎಂದು ಅವರು ತಿಳಿಸಿದರು.

ಮಹಿಳೆಯರಿಗೆ ಕನಿಷ್ಠ ಶೇ.60 ರಷ್ಟು ಕಡ್ಡಾಯವಾಗಿ ಕೂಲಿ ಕೆಲಸ ನೀಡಲಾಗುವುದು ಹಾಗೂ ಕಡ್ಡಾಯವಾಗಿ ಎನ್‌ಎಂಎಂಎಸ್ ಆಪ್ ಮೂಲಕವೇ ಎರಡು ಬಾರಿ ಹಾಜರಾತಿ ಹಾಕಬೇಕು ಎಂದು ಹೇಳಿದರು.

ಮುಖ್ಯವಾಗಿ ಅಳತೆ ತಕ್ಕಂತೆ ಕೆಲಸ ನಿರ್ವಹಿಸಬೇಕು. ತಪ್ಪಿದ್ದಲ್ಲಿ ಕೂಲಿ ಕಡಿಮೆಯಾಗಲಿದೆ. ಬಿಸಿಲಿನ ತಾಪಮಾನ ಹೆಚ್ಚಾಗಿರುವುದರಿಂದ 60 ವಯಸ್ಸಿನ ವಯೋಮಾನದವರು ಕೆಲಸದಲ್ಲಿ ತೊಡಗಿಸಿಕೊಳ್ಳಬಾರದು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು. ನರೇಗಾ ಕೆಲಸಗಾರರು ಕೂಸಿನ ಮನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಮನರೇಗಾ ಯೋಜನೆಯಡಿ ಕೂಲಿ ಮೊತ್ತವು 370 ರೂ. ಹೆಚ್ಚಳ ಆಗಿರುವುದರ ಕುರಿತು ಮಾಹಿತಿ ತಿಳಿಸಿದರು.

ಈ ಸಂದರ್ಭದಲ್ಲಿ ಕುರುಗೋಡು ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಕೆ.ವಿ.ನಿರ್ಮಲ, ಸಹಾಯಕ ನಿರ್ದೇಶಕ ಪಿ.ಶಿವರಾಮರೆಡ್ಡಿ, ಬಾದನಹಟ್ಟಿ ಗ್ರಾಪಂ ಅಭಿವೃದ್ಧಿ ಅಧಿಕಾರಿ ಮಲ್ಲಿಕಾರ್ಜುನ ಸೇರಿದಂತೆ ತಾಲ್ಲೂಕು ನರೇಗಾ ಸಿಬ್ಬಂದಿ ಹಾಗೂ ತಾಲ್ಲೂಕು ಪಂಚಾಯತ್, ತಾಂತ್ರಿಕ ಸಂಯೋಜಕರು, ಐ.ಇ.ಸಿ ಸಂಯೋಜಕರು, ಬಿಎಫ್‌ಟಿ, ಗ್ರಾ.ಪಂ ಸಿಬ್ಬಂದಿ, ಗ್ರಾಮ ಕಾಯಕ ಮಿತ್ರರು ಹಾಗೂ ಕೂಲಿಕಾರರು ಹಾಜರಿದ್ದರು.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀನದ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಆಯ್ಕೆಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿ ಬಿಡುಗಡೆ ಮಾಡಲಾಗಿದೆ.

ತಾತ್ಕಾಲಿಕವಾಗಿ ಆಯ್ಕೆಗೊಂಡ ಅಂಗನವಾಡಿ ಕಾರ್ಯಕತೆ–ಯರು ಮತ್ತು ಅಂಗನವಾಡಿ ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಮಹಾನಗರಪಾಲಿಕೆ, ನಗರ ಸಭೆ, ಪ.ಪಂಚಾಯತ್, ಪುರಸಭೆ, ಗ್ರಾಮ ಪಂಚಾಯತ್, ಜಿಲ್ಲಾ ಉಪನಿರ್ದೇಶಕರ ಕಚೇರಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಸಲಾಗಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಇದ್ದಲ್ಲಿ ಏ.22 (ರಜೆ ದಿನಗಳನ್ನು ಹೊರತುಪಡಿಸಿ) ರಂದು ಮಧ್ಯಾಹ್ನ 1.30ರೊಳಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಸೂಕ್ತ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ವೃತ್ತಿಪರ ತರಬೇತಿ ಕೋರ್ಸ್ ಗಳಲ್ಲಿ ತರಬೇತಿ ಜೊತೆಗೆ ಶಿಷ್ಯವೇತನ ನೀಡಲು ಉದ್ದೇಶಿಸಲಾಗಿದ್ದು, ಪರಿಶಿಷ್ಟ ಪಂಗಡದ ಇಂಜಿನಿಯರಿಂಗ್ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಐಐಎಸ್‌ಸಿ, ಐಐಟಿ ಮತ್ತು ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಮತ್ತು ಮಷಿನ್ ಲರ್ನಿಂಗ್ ತರಬೇತಿ ನೀಡಲಾಗುತ್ತಿದ್ದು, ಒಟ್ಟು 200 ಇಂಜಿನೀಯರಿಂಗ್ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದ್ದು, ರೂ.15000/–ಗಳ ಶಿಷ್ಯವೇತನ ಮತ್ತು ತರಬೇತಿ ನೀಡಲಾಗುತ್ತದೆ.

ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿಗಳನ್ನು ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಉಚಿತವಾಗಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಇದೇ ಕಚೇರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಏ.11 ಕೊನೆಯ ದಿನ ಆಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08395–200073 ಗೆ ಸಂಪರ್ಕಿಸಬಹುದು ಎಂದು ಸಂಡೂರು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಾಮಧೇಯ ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಬಳ್ಳಾರಿ ರೈಲ್ವೆ ನಿಲ್ದಾಣ ವ್ಯಾಪ್ತಿಯ ಹೊಸಪೇಟೆ ಮತ್ತು ಮುನಿರಾಬಾದ್ ರೈಲು ನಿಲ್ದಾಣಗಳ ಮಧ್ಯ ರೈಲ್ವೇ ಕೆ.ಎಂ.ನಂ. 139/00 ನ ಆಪ್ ಲೈನ್ ರೈಲು ಹಳಿಯಲ್ಲಿ ಅಂದಾಜು 50 ವರ್ಷದ ಅನಾಮಧೇಯ ವ್ಯಕ್ತಿಯು ಏ.02 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರ ಬಗ್ಗೆ ತಿಳಿದಿರುವುದಿಲ್ಲ. ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಬಳ್ಳಾರಿ ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಉಪ–ನಿರೀಕ್ಷಕರು ಮನವಿ ಮಾಡಿದ್ದಾರೆ.

**ಚಹರೆ ಗುರುತು:** ಎತ್ತರ 5.6 ಅಡಿ, ಕೋಲು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ಉದ್ದ ಮೂಗು, ಅಗಲವಾದ ಹಣೆ ಹೊಂದಿದ್ದು, ಮೃತನ ತಲೆಯ ಮೇಲೆ 02 ಇಂಚು ಬಿಳಿ ಮತ್ತು ಕಪ್ಪು ಮಿಶ್ರಿತ ಕೂದಲು, ಮುಖದಲ್ಲಿ ಸಣ್ಣ ಮೀಸೆ ಇರುತ್ತದೆ. ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಇದ್ದಲ್ಲಿ ಬಳ್ಳಾರಿ ರೈಲ್ವೆ ಪೊಲೀಸ್ ಠಾಣೆಯ ಪೊಲೀಸ್ ಉಪ ನಿರೀಕ್ಷಕರ ಮೊ.9480802131, ರಾಯಚೂರು ರೈಲ್ವೆ ಪೊಲೀಸ್ ವೃತ್ತದ ಪೊಲೀಸ್ ವೃತ್ತ ನಿರೀಕ್ಷಕರ ಮೊ.9480800471 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕಿಯರ ವಸತಿ ನಿಲಯಕ್ಕೆ ದಾಖಲಾತಿ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಧಾರವಾಡ ಶಹರದ ಸಪ್ತಾಪುರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯದಲ್ಲಿ 2025–26ನೇ ಶೈಕ್ಷಣಿಕ ವರ್ಷಕ್ಕಾಗಿ ಬಳ್ಳಾರಿ ಜಿಲ್ಲೆಯ ಯುದ್ಧದಲ್ಲಿ ಮಡಿದ ಮತ್ತು ಮಾಜಿ ಸೈನಿಕರ ಹೆಣ್ಣು ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ.

5ನೇ ತರಗತಿಯಿಂದ ಪಿಯುಸಿ–2 ರ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ. ವಸತಿ ನಿಲಯದಲ್ಲಿ ವಾಸ್ತವ್ಯ ಮತ್ತು ಊಟೋಪಚಾರಗಳು ಉಚಿತವಾಗಿದ್ದು, ಮಾಜಿ ಸೈನಿಕರ ಹೆಣ್ಣು ಮಕ್ಕಳು ಈ ಸೌಲಭ್ಯದ ಉಪಯೋಗ ಪಡೆಯಬಹುದು. ವಸತಿ ನಿಲಯದಲ್ಲಿ ಧಾರವಾಡ ನಗರದಲ್ಲಿರುವ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ನಿಲಯದಲ್ಲಿ ಪ್ರವೇಶ ನೀಡಲಾಗುವುದು. ಅರ್ಜಿಗಳನ್ನು ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಮೇ.10 ರೊಳಗಾಗಿ ಸಲ್ಲಿಸಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಉದಯ ಹಾಸ್ಟೆಲ್ ಸರ್ಕಲ್ ಸೈನಿಕ ವಿಶ್ರಾಂತಿ ಗೃಹ ಆವರಣ, ಧಾರವಾಡ ಅಥವಾ ದೂ.0836–2440176 ಗೆ ಸಂಪರ್ಕಿಸಬಹುದು ಎಂದು ಧಾರವಾಡದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ನಗರದ ದೇವಿನಗರ ಬಡಾವಣೆಯ 5ನೇ ಕ್ರಾಸ್ ನ ಕುರುಬರ ಹಾಸ್ಟೆಲ್ ಹಿಂಭಾಗ ನಿವಾಸಿಯಾದ ಸೋಮಶೇಖರ ಎನ್ನುವ 25 ವರ್ಷದ ವ್ಯಕ್ತಿಯು ಮಾ.30 ರಂದು ಕಾಣೆಯಾಗಿದ್ದು, ಈ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ತಿಳಿಸಿದ್ದಾರೆ.

ಚಹರೆ ಗುರುತು:

ಅಂದಾಜು 5.5 ಅಡಿ ಎತ್ತರ, ಕಪ್ಪು ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಎಡಗೈ ಮೇಲೆ ತ್ರಿಶೂಲದ ಹಚ್ಚೆ ಮತ್ತು ಎಡ ತೋಳಿನ ಮೇಲೆ ಆಂಜನೇಯ ಹಚ್ಚೆ ಹಾಕಿಸಿಕೊಂಡಿರುತ್ತಾನೆ.

ವ್ಯಕ್ತಿಯ ಬಗ್ಗೆ ಸುಳಿವು ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆ–ಯ ದೂ.08392–240731, 244145, ಕೌಲ್ ಬಜಾರ್ ಪಿಎಸ್‌ಐ ದೂ.94808203085, ಪಿಐ ದೂ. 9480803047, ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಯ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀನದ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಆಯ್ಕೆಗಾಗಿ ಅಧಿಸೂಚನೆ ಹೊರಡಿಸಲಾಗಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿ ಬಿಡುಗಡೆ ಮಾಡಲಾಗಿದೆ.

ತಾತ್ಕಾಲಿಕವಾಗಿ ಆಯ್ಕೆಗೊಂಡ ಅಂಗನವಾಡಿ ಕಾರ್ಯಕತೆ–ಯರು ಮತ್ತು ಅಂಗನವಾಡಿ ಸಹಾಯಕಿಯರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಮಹಾನಗರಪಾಲಿಕೆ, ನಗರ ಸಭೆ, ಪ.ಪಂಚಾಯತ್, ಪುರಸಭೆ, ಗ್ರಾಮ ಪಂಚಾಯತ್, ಜಿಲ್ಲಾ ಉಪನಿರ್ದೇಶಕರ ಕಚೇರಿ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಸಲಾಗಿದ್ದು, ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಇದ್ದಲ್ಲಿ ಏ.22 (ರಜೆ ದಿನಗಳನ್ನು ಹೊರತುಪಡಿಸಿ) ರಂದು ಮಧ್ಯಾಹ್ನ 1.30ರೊಳಗೆ ಸಂಬಂಧಪಟ್ಟ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗಳಿಗೆ ಸೂಕ್ತ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಬಹುದು ಎಂದು ಬಳ್ಳಾರಿ ಗ್ರಾಮಾಂತರದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೃದ್ಧ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.07–ಬಳ್ಳಾರಿ ತಾಲ್ಲೂಕಿನ ಜೋಳದರಾಶಿ ಗ್ರಾಮದ ನಿವಾಸಿಯಾದ ಚನ್ನಬಸವನಗೌಡ ಎನ್ನುವ 82 ವರ್ಷದ ವ್ಯಕ್ತಿಯು 03.08.2020 ರಂದು ಕಾಣೆಯಾಗಿದ್ದು, ಈ ಕುರಿತು ಪಿ.ಡಿ.ಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿಗಳು ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5 ಅಡಿ ಎತ್ತರ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ದುಂಡು ಮುಖ ಹೊಂದಿರುತ್ತಾನೆ.

ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಅಂಗಿ, ಬಿಳಿ ಬಣ್ಣದ ಲುಂಗಿ ಧರಿಸಿರುತ್ತಾನೆ.

ಕಾಣೆಯಾದ ವೃದ್ಧನ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 102 ಬಳ್ಳಾರಿ ಎಸ್.ಪಿ ಅವರ ಕಚೇರಿ ದೂ.08392–258400, ಸಿರುಗುಪ್ಪ ಡಿ.ಎಸ್.ಪಿ ದೂ.08392–276000, ಪಿ.ಡಿ.ಹಳ್ಳಿ ವೃತ್ತ ಸಿ.ಪಿ.ಐ ಮೊ.08392–276461, ಪಿ.ಡಿ.ಹಳ್ಳಿ ಪೊಲೀಸ್ ಠಾಣೆ ದೂ.08392–265010 ಮತ್ತು ಪಿಎಸ್‌ಐ ಮೊ. 9480803052 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಕುರಿಗಾಹಿಗಳ ಆತ್ಮ ರಕ್ಷಣೆಗೆ ಬಂದೂಕು ತರಬೇತಿ ಅಗತ್ಯ-ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.7-ಕಠಿಣ ಸವಾಲಿನ ಜೀವನಶೈಲಿ ಹೊಂದಿರುವ ಕುರಿಗಾಹಿಗಳಿಗೆ ಆತ್ಮರಕ್ಷಣೆ ಅತ್ಯಂತ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಹೇಳಿದರು.

ನವನಗರದ ಪೊಲೀಸ್ ಮಂಗಲ ಭವನದಲ್ಲಿ ಕುರಿಗಾಹಿಗಳಿಗಾಗಿ ಆಯೋಜಿಸಲಾಗಿರುವ ಬಂದೂಕು ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕುರಿಗಾರರು ಮಳೆ, ಬಿಸಿಲು ಲೆಕ್ಕಿಸದೇ ಗುಡ್ಡಗಾಡು ಪ್ರದೇಶಗಳಲ್ಲಿ ಒಬ್ಬಂಟಿಯಾಗಿ ಕುರಿ ಮೇಯಿಸುತ್ತಾರೆ. ಈ ಹಿನ್ನೆಲೆಯಲ್ಲಿ ಅವರಿಗೆ ಮತ್ತು ಕುರಿಗಳ ರಕ್ಷಣೆಗೆ ಸಹಾಯವಾಗುವಂತೆ ವಿಶೇಷ ಬಂದೂಕು ತರಬೇತಿ ಶಿಬಿರ ಆಯೋಜಿಸಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಕುರಿಗಾಹಿಗಳು ಕುರಿಗಳನ್ನು ಬೇರೆ ಬೇರೆ ಪ್ರದೇಶಗಳಿಗೆ ಮೇಯಿಸಲು ತೆಗೆದುಕೊಂಡು ಹೋಗುವ ಸಂದರ್ಭದಲ್ಲಿ ಅವರ ರಕ್ಷಣೆಗೆ ಬಂದೂಕಿನ ಅವಶ್ಯಕತೆಯಿದೆ. ಈ ಹಿನ್ನೆಲೆಯಲ್ಲಿ ತರಬೇತಿ ನೀಡಲಾಗುತ್ತಿದೆ. ತರಬೇತಿಯಲ್ಲಿ ಏಕಾಗ್ರತೆಯಿಂದ ಪಾಲ್ಗೊಂಡು, ಉತ್ತೀರ್ಣರಾಗಿ ಬಂದೂಕು ಪರವಾನಿಗೆ ಪಡೆಯಬೇಕು ಎಂದು ಅವರು ತಿಳಿಸಿದರು.

ಬಂದೂಕು ಜತೆ ನಡವಳಿಕೆಯಲ್ಲಿ ಅತ್ಯಂತ ಸೂಕ್ಷ್ಮತೆ ಅಗತ್ಯವಾಗಿದೆ. ಬಂದೂಕು ಭಾವನೆ ರಹಿತವಾಗಿದೆ. ಅದು ಜೀವಕ್ಕೆ ಅಪಾಯ ತರಬಲ್ಲದು. ಬಂದೂಕನ್ನು ಸರಿಯಾಗಿ ಇಟ್ಟುಕೊಳ್ಳಬೇಕು. ಫೋಟೋಗೆ ಇಲ್ಲವೇ ಪ್ರದರ್ಶನಕ್ಕಾಗಿ ಸ್ನೇಹಿತರಿಗೆ ಕೊಡಬಾರದು ಎಂದು ಜಿಲ್ಲಾಧಿಕಾರಿ ಎಚ್ಚರಿಸಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಮಾತನಾಡಿ, ಏಪ್ರಿಲ್ 13ರ ವರೆಗೆ ನಡೆಯುತ್ತಿರುವ ಈ ಶಿಬಿರದಲ್ಲಿ 500ಕ್ಕೂ ಹೆಚ್ಚು ಕುರಿಗಾಹಿಗಳು ಭಾಗವಹಿಸಿದ್ದಾರೆ. ಶಿಬಿರದಲ್ಲಿ ಗುರಿ ನಿಖರವಾಗಿ ಹೇಗೆ ಇಡಬೇಕು, ಬಂದೂಕು ಹಸ್ತಾಂತರಿಸುವ ವಿಧಾನ, ಕಾನೂನು ನಿಯಮಗಳು ಮತ್ತು ಶಿಸ್ತು ಕುರಿತು ತರಬೇತಿ ನೀಡಲಾಗುತ್ತಿದೆ. ತರಬೇತಿಯ ನಂತರ ಕಾಡು ಪ್ರಾಣಿಗಳಿಗೆ ಯಾವುದೇ ರೀತಿಯ ತೊಂದರೆ ನೀಡಬಾರದು. ದುರುಪಯೋಗ ಮಾಡಿದರೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಹೇಳಿದರು. ಶಿಬಿರದಲ್ಲಿ ಮೂರು ಜನ ಮಹಿಳೆಯರು ಸಹ ಭಾಗವಹಿಸಿದ್ದು, ತೇರದಾಳ ತಾಲೂಕಿನ ಸಸಲಾಟ್ಟಿ ಗ್ರಾಮದ ಸಾಕ್ಷಿ ಎಂಬ ಯುವತಿ ವಿಶೇಷ ಗಮನ ಸೆಳೆದಿದ್ದಾರೆ. ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಕಾಶಿನಾಥ ಹುಡೇದ, ಹಾಲುಮತ ಸಮಾಜದ ರಾಜ್ಯ ಕಾರ್ಯದರ್ಶಿ ಸುವರ್ಣಾ, ತರಬೇತಿದಾರರು ಉಪಸ್ಥಿತರಿದ್ದರು.

## ಕೂಡಲಸಂಗಮದಲ್ಲಿ ಬಸವ ಜಯಂತಿ-ಮುಖ್ಯಮಂತ್ರಿ ಚಾಲನೆ

# ಬಸವಾದಿ ಶರಣರ ವೈಭವ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.7-ಬಸವಣ್ಣನವರ ಐಕ್ಯಸ್ಥಳ ಕೂಡಲಸಂಗಮದಲ್ಲಿ ಬಸವ ಜಯಂತಿ ನಿಮಿತ್ಯ ಅನುಭವ ಮಂಟಪ, ಬಸವಾದಿ ಶರಣರ ವೈಭವ ಹೆಸರಿನಲ್ಲಿ ಎಪ್ರೀಲ್ 29 ಮತ್ತು 30 ರಂದು ಎರಡು ದಿನಗಳ ಕಾಲ ವಿಶೇಷ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಹೇಳಿದರು.

ಕೂಡಲಸಂಗಮದ ಅಭಿವೃದ್ಧಿ ಪ್ರಾಧಿಕಾರದ ಸಭಾಭವನದಲ್ಲಿ ರವಿವಾರ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಅವರೊಂದಿಗೆ ಜಂಟಿ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಸರಕಾರ ಬಸವಣ್ಣನವರನ್ನು ಕರ್ನಾಟಕದ ಸಾಂಸ್ಕೃತಿಕ ರಾಯಬಾರಿಯನ್ನಾಗಿ ಘೋಷಿಸಿದ ಹಿನ್ನೆಲೆಯಲ್ಲಿ ಬಸವಣ್ಣನವರ ಬದುಕು, ಸಂದೇಶ ಹಾಗೂ ಚಿಂತನೆಯನ್ನು ವ್ಯಾಪಕವಾಗಿ ಸಾರುವ ನಿಟ್ಟಿನಲ್ಲಿ 12ನೇ ಶತಮಾನದ ಅನುಭವ ಮಂಟಪವನ್ನು ಮರು ಸೃಷ್ಟಿಸುವ ಕಾರ್ಯ ಮಾಡಲಾಗುತ್ತಿದೆ ಎಂದರು.

ಏಪ್ರೀಲ್ 29 ಮತ್ತು 30 ರಂದು ಎರಡು ದಿನಗಳ ಕಾಲ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಮೊದಲ ದಿನ ಬೆಳಿಗ್ಗೆ ಎರಡು ಹಾಗೂ ಮಧ್ಯಾಹ್ನ ಎರಡು ವಚನ ಗೋಷ್ಠಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ನಂತರ ಸಂಜೆ ಸಾಣೆಹಳ್ಳಿ ಮಠದ ಕಲಾ ತಂಡದಿಂದ 'ಕಲ್ಯಾಣಕ್ರಾಂತಿ' ನಾಟಕ ಪ್ರದರ್ಶನ ಕೂಡ ಹಮ್ಮಿಕೊಳ್ಳಲಾಗುತ್ತಿದೆ. 30 ರಂದು ಬೆಳಿಗ್ಗೆ ಬಸವಣ್ಣವರ ವಚನ ಗಂಟುಗಳ ಅದ್ದೂರಿ ಮೆರವಣಿಗೆ ನಡೆಸಲಾಗುತ್ತಿದೆ. ನಂತರ ನಡೆಯುವ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ ಎಂದರು.

ಎಪ್ರೀಲ್ 30 ರಂದು ಒಂದೇ ವೇದಿಕೆಯಲ್ಲಿ ಎರಡು ಭಾಗಗಳಾಗಿ ಮಾಡಲಾಗುತ್ತಿದ್ದು, ಮುಖ್ಯ ವೇದಿಕೆಯಲ್ಲಿ ಜನಪ್ರತಿನಿಧಿಗಳ ಜೊತೆಗೆ ವಿವಿಧ ಧರ್ಮ ಗುರುಗಳು ಪಾಲ್ಗೊಳ್ಳಲಿದ್ದಾರೆ. ಇನ್ನೊಂದು ವೇದಿಕೆಯಲ್ಲಿ ಶರಣರು ಹಾಗೂ ಮಠಾಧೀಶರು ವೇದಿಕೆ ಹಂಚಿಕೊಳ್ಳಲಿದ್ದಾರೆ. ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ಏಕೆ ಘೋಷಣೆ ಮಾಡಿದೆವು ಎಂಬುದರ ಬಗ್ಗೆ ಕಿರು ಹೊತ್ತಿಗೆಯನ್ನು ಹೊರತರಲಾಗುತ್ತಿದೆ. ಕಾರ್ಯಕ್ರಮ ಆಯೋಜನೆಗೆ ಈಗಾಗಲೇ 1 ಕೋಟಿ ರೂ. ಅನುದಾನ ಸರಕಾರ ಘೋಷಿಸಿದ್ದು, ಹೆಚ್ಚಿನ ಅನುದಾನ ಸಹ ನೀಡಲಾಗುತ್ತಿದೆ ಎಂದು ಸಚಿವ ತಂಗಡಗಿ ಹೇಳಿದರು.


ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ಸದೃಡ ಸಮಾಜಕ್ಕಾಗಿ ಮಹಾನ್ ಶರಣರು ನೀಡಿರುವ ವಿಚಾರಧಾರೆಗಳನ್ನು ಸರ್ವಕಾಲಿಕ ಮತ್ತು ಶಾಶ್ವತವಾಗಿ ಇರುವಂತೆ ಮಾಡುವುದು ಹಾಗೂ ತನ್ಮೂಲಕ ಸಾಮರಸ್ಯದ ಬದುಕನ್ನು ಯಾವ ರೀತಿ ಕಟ್ಟಿಕೊಳ್ಳಬೇಕೆಂಬುದು ತಿಳಿಸುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಕಳೆದ 800 ವರ್ಷಗಳ ಹಿಂದಿನ ಅನುಭವ ಮಂಟಪವನ್ನು ಮರು ಸೃಷ್ಟಿಸುವುದು ದೇಶದಲ್ಲಿಯೇ ಪ್ರಥಮ ಎಂದರು.

ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ ಮಾತನಾಡಿ, ಬಸವಣ್ಣನವರ ವಿಶೇಷ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಕಳೆದ ಬಜೆಟ್‌ನಲ್ಲಿ ಸರ್ವಧರ್ಮ ಸಂಸತ್ತು ಎಂದು ಘೋಷಿಸಿದ್ದರು. ಈ ಹಿನ್ನಲೆಯಲ್ಲಿ ದೇಶದ ಗಮನ ಸೆಳೆಯುವ ಕಾರ್ಯಕ್ರಮಕ್ಕೆ ರೂಪುರೇಷೆಗಳನ್ನು ಮಾಡಲಾಗುವುದು ಎಂದು ತಿಳಿಸಿದರು.

ಇದಕ್ಕೂ ಪೂರ್ವ ಸಮಿತಿ ಸದಸ್ಯರ ಸಭೆ ಜರುಗಿತು. ಕಾರ್ಯಕ್ರಮ ರೂಪುರೇಷೆಗಳ ಬಗ್ಗೆ ಚರ್ಚಿಸಲಾಯಿತು. ಅನುಭವ ಮಂಟಪ ಸಾರುವ ನಿಟ್ಟಿನಲ್ಲಿ ಒಂದು ದೊಡ್ಡ ಹಾಗೂ ಎರಡು ಚಿಕ್ಕರಥ ತಯಾರಿಸಿ ಜಿಲ್ಲಾ ಹಾಗೂ ರಾಜ್ಯವ್ಯಾಪಿ ಸಂಚಾರ ನಡೆಸಲು ತೀರ್ಮಾನಿಸಲಾಯಿತು. ಲಾಂಚನ, ರಥ ನಿರ್ಮಾಣ ಕುರಿತು ಚರ್ಚಿಸಲಾಯಿತು.

ನಿಷ್ಕಲ ಮಂಟಪದ ನಿಜಗುಣಾನಂದ ಸ್ವಾಮೀಜಿ, ಜ್ಞಾನಪ್ರಕಾಶ ಸ್ವಾಮೀಜಿ, ಡಾ.ಪ್ರಶಾಂತ, ಮಾರ್ತಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕಿ ಕೆ.ಎಂ. ಗಾಯತ್ರಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿ.ಪಂ ಸಿಇಓ ಶಶಿಧರ ಕುರೇರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಮಹಾದೇವ ಮುರಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಛಲವಾದಿ ಸಮಾಜಕ್ಕೆ ಪರಿಷತ್ ಸ್ಥಾನ ನೀಡಿ-ಗರಸಂಗಿ



ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಏ.7-ಛಲವಾದಿ ಸಮಾಜಕ್ಕೆ ವಿಧಾನ ಪರಿಷತ್ತಿನ ಸದಸ್ಯ ಸ್ಥಾನದ ಅವಕಾಶ ನೀಡಬೇಕು ಎಂದು ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾದ ಬಾಗಲಕೋಟೆ ಜಿಲ್ಲಾ ಘಟಕ ಆಗ್ರಹಿಸಿದೆ.

ನಗರದಲ್ಲಿ ಸೋಮವಾರ ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಪ್ರೇಮನಾಥ ಗರಸಂಗಿ, ಸಧ್ಯಕ್ಕೆ ವಿಧಾನ ಪರಿಷತ್ತಿನಲ್ಲಿ ಖಾಲಿ ಇರುವ 4 ಸದಸ್ಯ ಸ್ಥಾನಗಳಲ್ಲಿ ಒಂದನ್ನು ಛಲವಾದಿ ಸಮಾಜಕ್ಕೆ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಈ ಹಿಂದೆ ಬಾದಾಮಿ ಮತಕ್ಷೇತ್ರದಲ್ಲಿ ಸಿದ್ದರಾಮಯ್ಯ ಅವರ ಗೆಲುವಿಗೆ ಬಹಳಷ್ಟು ಶ್ರಮಿಸಿರುವ ಕಾಂಗ್ರೆಸ್ ಹಿರಿಯ ಮುಖಂಡ ಎಂ.ಎಚ್.ಚಲವಾದಿ ಅವರಿಗೆ ವಿಧಾನ ಪರಿಷತ್ ಸ್ಥಾನಕ್ಕೆ ನೇಮಕ ಮಾಡಬೇಕು. ಛಲವಾದಿ ಸಮುದಾಯ ಹಿಂದಿನಿಂದಲೂ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತ ಬಂದಿದೆ. ಈಗ ಅವಕಾಶ ಬಂದಿದ್ದು ಮುಖ್ಯಮಂತ್ರಿಗಳು ನಮ್ಮ ಸಮಾಜದ ಚಲವಾದಿ ಅವರಿಗೆ ಪರಿಷತ್ ಸ್ಥಾನ ನೀಡಿ ನ್ಯಾಯ ಒದಗಿಸಬೇಕು ಎಂದು ಗರಸಂಗಿ ಹೇಳಿದರು.

ಮಹಾದೇವ ಹಾದಿಮನಿ ಮಾತನಾಡಿದರು. ಚಂದ್ರಶೇಖರ ಚಲವಾದಿ, ಎನ್.ಬಿ.ಗಸ್ತಿ, ರವಿ ಬಬಲೇಶ್ವರ, ಪರುಶುರಾಮ ನಾರಾಯಣಿ, ಹುಲಿಗೆಪ್ಪ ಹೊದ್ಲೂರ, ಶಿವಾನಂದ ಕಾಂಬಳೆ, ಬ್ರಹ್ಮಾನಂದ ಕಾಂಬಳೆ, ಮಹೇಶ ಬೀಳಗಿ ಇದ್ದರು.

# ಬೈಲಗುಡ್ಡ:ಗರುಡಗಿರೇಶ್ವರ ಜಾತ್ರಾ ಮಹೋತ್ಸವ,ಕಾಯಿ ಕಳಚುವ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು:ಮಸ್ಕಿ ತಾಲೂಕಿನ ಬೈಲಗುಡ್ಡ ಗ್ರಾಮದಲ್ಲಿ ಗುರಡಗಿರೇಶ್ವರ ಜಾತ್ರಾ ಮಹೋತ್ಸವವು ಜರುಗಿದ್ದು ಅದರಲ್ಲಿ ದೇವರ ಕಾಯಿ ಕಳಚುವ ಸಂಭ್ರಮವನ್ನು ಕಂಡು ಭಕ್ತಜನರು ಹರ್ಷ ವ್ಯಕ್ತಪಡಿಸಿದರು

ಮಸ್ಕಿ ತಾಲೂಕಿನ ಬೈಲಗುಡ್ಡ ಗ್ರಾಮದ ಗರುಡಗಿರೇಶ್ವರ ದೇವಾಲಯವು ಪುರಾತನವಾಗಿದ್ದು ವಿಜಯನಗರದ ಆಡಳಿತದ ಕಾಲದ್ದೆಂದು ಹೇಳಲಾಗುತ್ತಿದೆ ಸದರಿ ದೇವಾಲಯವು ವೈಷ್ಣವ ಸಂಪ್ರದಾಯಕ್ಕೆ ಸೇರಿದ್ದು ವಿಜಯನಗರದ ಕಟ್ಟಡ ಶೈಲಿಯನ್ನು ಹೊಂದಿದೆ ಈ ದೇವಸ್ಥಾನದ ಮುಂದೆ ಆಳವಾದ ಹೊಂಡವಿದ್ದು ಅದನ್ನು ಹಿಂದೆ ಗ್ರಾಮದ ಜನರು ಬಾವಿಯಿಂದ ನೀರು ತಂದು ತುಂಬಿಸುತ್ತಿದ್ದರಂತೆ ಆದರೆ ಈಗ ಯಂತ್ರದ ಮೂಲಕ ನೀರು ತುಂಬಿಸಲಾಗುತ್ತಿದೆ ಆ ಹೊಂಡದಲ್ಲಿ ಸುರುಮ ಮಿಶ್ರಿತ ಮಾಡಲಾಗುತ್ತದೆ ಹಂದರ ಹಾಕಿ ಅದರಲ್ಲಿ ಕಾಯಿ ಕಟ್ಟಲಾಗುತ್ತದೆ ಗ್ರಾಮದ ಯುವಕರು ಹೊಂಡದಲ್ಲಿ ಹಾರುವ ಮೂಲಕ ಕಾಯಿಯನ್ನು ಕಳಚಲಾಗುತ್ತದೆ ಅದಕ್ಕೂ ಮೊದಲು ಪೂಜಾರಿ ಹೊಂಡಕ್ಕೆ ಪೂಜೆ ಸಲ್ಲಿಸಿ ಹೊಂಡದಲ್ಲಿ ಹಾರುತ್ತಾನೆ ನಂತರ ಕಾಯಿ ಕಳಚುವ ಸಂಭ್ರಮ ನಡೆ-ಯುತ್ತದೆ ಇದನ್ನು ನೋಡಲು ಗ್ರಾಮ ಸೇರಿದಂತೆ ಸುತ್ತಮುತ್ತಲ ಗ್ರಾಮದ ಜನರು ಸೇರಿರುತ್ತಾರೆ

ಹೊಂಡದ ಮೇಲೆ ಹಂದರ ಹಾಕಿ ಅದರಲ್ಲಿ ಕಟ್ಟಲಾದ ಕಾಯಿಯನ್ನು ಅದೇ ಗ್ರಾಮದ ಯುವಕರು ಮಾತ್ರ ಕೀಳಲು ಯತ್ನಿಸುತ್ತಾರೆ ಬೇರೆ ಗ್ರಾಮದವರಿಗೆ ಅವಕಾಶ ಇರುವುದಿಲ್ಲ ಅಲ್ಲದೆ ಈ ಗ್ರಾಮದಲ್ಲಿ ಓಕುಳಿಯಾಟವನ್ನು ಆಡುವುದಿಲ್ಲವಂತೆ ಹೊಂಡದಲ್ಲಿ ಹಾರುವುದೆ ಓಕುಳಿ ಎನ್ನಲಾಗುತ್ತಿದೆ.

ಬೆಳಗಿನಿಂದಲೇ ಗರುಡಗಿರೇಶ್ವರನಿಗೆ ಪೂಜೆ ಪುನಸ್ಕಾರಗಳು ಸಾಂಗವಾಗಿ ನಡೆಯುತ್ತವೆ ಸಂಜೆ ಕಾಯಿ ಹರಿಯುವ ಮೂಲಕ ಜಾತ್ರೆಯ ಕಳೆ ಹೆಚ್ಚುತ್ತದೆ ನಂತರ ಎಲ್ಲಾ ಭಕ್ತರು ದೇವರಿಗೆ ಕಾಯಿ ಅರ್ಪಿಸುತ್ತಾರೆ ಹೀಗೆ ವಿಶೇಷವಾಗಿ ಜಾತ್ರೆ ಆಚರಣೆ ಮಾಡಲಾಗುತ್ತಿದೆ.

# ಕಾರ್ಯಕರ್ತರೇ ಬಿಜೆಪಿಗೆ ಶಕ್ತಿ-ಸಂಸದ ಗದ್ದಿಗೌಡರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.7-ಭಾರತೀಯ ಜನತಾ ಪಕ್ಷ ರಾಷ್ಟ್ರೀಯ ತತ್ವಗಳ ಮೇಲೆ ನಿರ್ಮಿತ ಸಂಘಟನೆಯಾಗಿದ್ದು, ಅದರ ಶಕ್ತಿ ಕಾರ್ಯಕರ್ತರು. ಇದು ಯಾವುದೇ ವ್ಯಕ್ತಿ, ನಾಯಕ, ಜಾತಿ ಮತ್ತು ಧರ್ಮವನ್ನು ಮೀರಿದ್ದಾಗಿದೆ ಎಂದು ಸಂಸದ ಪಿ.ಸಿ.ಗದ್ದಿಗೌಡರ ಹೇಳಿದರು. ನವನಗರದ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಕಾರ್ಯಾಲಯದಲ್ಲಿ ರವಿವಾರ ಹಮ್ಮಿಕೊಂಡಿದ್ದ ರಾಮ ನವಮಿ ಹಾಗೂ ಬಿಜೆಪಿ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾವು ಭಾರತ ಮಾತಾ ಕಿ ಜೈ' ನಿಂದ ಶಕ್ತಿಯನ್ನು ಪಡೆಯುತ್ತೇವೆ. ಭಾರತ ನಮ್ಮ ಭೂಮಿ, ಮಾತಾ ಅಂ-ದರೆ ನಮ್ಮ ಪರಂಪರೆ ಮತ್ತು ಸಂಸ್ಕೃತಿ. ಇನ್ನು ಜೈ ಎಂದರೆ ಜನರ ಆಕಾಂಕ್ಷೆಗಳು ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ, ದೀನ ದಯಾಳ ಉಪಾಧ್ಯಾಯ, ಶ್ಯಾಮ ಪ್ರಸಾದ ಮುಖರ್ಜಿ, ಅಟಲ್ ಬಿಹಾರಿ ವಾಜಪಾಯಿ, ಲಾಲ್‌ಕೃಷ್ಣ ಅಡ್ವಾಣಿಯಂತಹ ಆದರ್ಶ ಪುರುಷರು ಬಿಜೆಪಿಯನ್ನು ಕಟ್ಟಿದ್ದು, ಆ ಎಲ್ಲ ಮಹನೀಯರ ಕನಸುಗಳನ್ನು ಇಂದು ನರೇಂದ್ರ ಮೋದಿಯವರ ನನಸು ಮಾಡುತ್ತಿದ್ದಾರೆ ಎಂದರು.

ಮಾಜಿ ಶಾಸಕ ವೀರಣ್ಣ ಚರಂತಿಮಠ ಮಾತನಾಡಿ, ಬಿಜೆಪಿ ಬಲಯುತವಾಗಿ ಬೆಳೆಯಲು ಕಾರ್ಯಕರ್ತರ ಶ್ರಮವಿದೆ. ಬಿಜೆಪಿಯ ಹಿರಿಯ ನಾಯಕರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ವಹಿಸಿದ್ದರು.

ಮುಖಂಡರಾದ ಜಿ.ಎನ್.ಪಾಟೀಲ, ಡಾ.ಎಂ.ಎಸ್. ದಡ್ಡೆನ್ನವರ, ಮಲ್ಲಯ್ಯ ಮುಗನೂರಮಠ, ಗುಂಡುರಾವ ಶಿಂಧೆ, ಭಾಗೀರಥಿ ಪಾಟೀಲ, ಜ್ಯೋತಿ ಭಜಂತ್ರಿ, ಸರಸ್ವತಿ ಕುರಬರ, ಭುವನೇಶ್ವರಿ ಕುಪ್ಪಸ್ತ, ಜಯಶ್ರೀ ಏಕಬೋಟೆ, ಯಲ್ಲಪ್ಪ ಬೆಂಡಿಗೇರ, ರಾಜು ಮುದೇನೂರ, ಈರಪ್ಪ ಶಿರಗನ್ನವರ, ಚೆನ್ನಯ್ಯ ಹಿರೇಮಠ, ಸುರೇಶ ಕೊಣ್ಣೂರ, ಕಲ್ಲಪ್ಪ ಭಗವತಿ, ಮಲ್ಲೇಶ ಬಿಜಾಪುರ, ಬಸವರಾಜ ಹುನಗುಂದ, ಉಮೇಶ ಹಂಚಿನಾಳ ಇದ್ದರು.

# ಪ್ರವಾಸೋದ್ಯಮ ಇಲಾಖೆ: ಛಾಯಾಚಿತ್ರ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರೀಲ್.07-ಲ್ಲೆಯ ಪ್ರವಾಸೋದ್ಯಮವನ್ನು ಇನ್ನಷ್ಟು ಮೇಲ್ದರ್ಜೆಗೇರಿಸಲು ಹಾಗೂ ಎಲ್ಲಾ ವರ್ಗದ ಧಾರ್ಮಿಕ, ಸಾಂಸ್ಕೃತಿಕ, ಪಾರಂಪರಿಕ, ಕರಕುಶಲ, ನೈಸರ್ಗಿಕ, ವನ್ಯಜೀವಿ ಮತ್ತು ಸಾಹಸ ಚಟುವಟಿಕೆಗಳು ಹಾಗೂ ಇತರೆ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ದೃಷ್ಟಿಕೋನದಲ್ಲಿ ಪ್ರಮುಖ ತಾಣಗಳನ್ನು ಗುರುತಿಸಿ, ವಿಶ್ವ ದರ್ಜೆಯಲ್ಲಿ ಅಭಿವೃದ್ಧಿ ಪಡಿಸಲು ಕೇಂದ್ರ ಪ್ರವಾಸೋದ್ಯಮದಿಂದ Discover the Beauty of India ಶೀರ್ಷಿಕೆಯಡಿ Dekho Apna Desh Photo Con-test -2025ರ ಛಾಯಾಚಿತ್ರ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಜಿಲ್ಲೆಯ ಐತಿಹಾಸಿಕ ಸ್ಮಾರಕಗಳು, ವನ್ಯಜೀವಿ ಧಾಮಗಳು, ಜಿಐ ಟ್ಯಾಗ್ ಹೊಂದಿರುವ ಕರಕುಶಲ ಮತ್ತು ಕೈಮಗ್ಗಗಳು, ಭೂದೃಶ್ಯ ಅಂದರೆ ಬೆಟ್ಟಗುಡ್ಡಗಳು, ಸಾಹಸಮಯ ಪ್ರವಾಸಿ ತಾಣಗಳ ಆಕರ್ಷಕ ಛಾಯಾಚಿತ್ರಗಳನ್ನು ಆಯೋಜಿಸಿರುವ ಸ್ಪರ್ಧೆಗೆ ಪ್ರವಾಸಿ ತಾಣಗಳ ಕಿರು ವಿವರಣೆಯೊಂದಿಗೆ ಅತ್ಯುತ್ತಮ ಛಾಯಾಚಿತ್ರಗಳನ್ನು ಏಪ್ರಿಲ್ 07ರ ಒಳಗೆ ಇ-ಮೇಲ್ ವಿಳಾಸ: Dekhoapnadeshpho-tos@gmail.com ಗೆ ಕಳುಹಿಸಬಹುದಾಗಿದೆ.

# ಏ.9 ವಾಕ್ ಫಾರ್ ಹೋಮಿಯೋಪತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.7-ಹೋಮಿಯೋಪತಿ ಪಿತಾಮಹ ಡಾ.ಸ್ಯಾಮುಯೆಲ್ ಹಾನಿಮನರ ಜನ್ಮ ದಿನಾಚರಣೆ ಅಂಗವಾಗಿ ಎ.9 ರಂದು ನಗರದ ಬಿ.ವಿ.ವಿ.ಎಸ್. ಹೋಮಿಯೋಪಥಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ವೈದ್ಯ ವಿದ್ಯಾರ್ಥಿಗಳು ಹಾಗೂ ವೈದ್ಯ ಉಪನ್ಯಾಸಕರಿಂದ ಹೋಮಿಯೋಪಥಿ ವೈದ್ಯಪದ್ದತಿಯ ಕುರಿತು ಜನ ಸಾಮಾನ್ಯರಲ್ಲಿ ಅರಿವು ಮೂಡಿಸಲು ವಾಕಥಾನ್-ವಾಕ್ ಫಾರ್ ಹೋಮಿಯೋಪಥಿ ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 6 ಗಂಟೆಗೆ ನಗರದ ರೋಟರಿ ಸರ್ಕಲದಿಂದ ಪ್ರಾರಂಭಗೊಂಡು ಹಳೆ ಬಾಗಲಕೋಟೆಯ ವಿವಿಧ ಮಾರ್ಗಗಳ ಮುಖಾಂತರ ಸಂಚರಿಸಿ ಮಹಾವಿದ್ಯಾಲಯಕ್ಕೆ ಬಂದು ಸಮಾಪ್ತಿಯಾಗುವದು.

ವಾಕಥಾನಕ್ಕೆ ಜಿಲ್ಲಾಧಿಕಾರಿ ಜಾನಕಿ, ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಅವರು ಚಾಲನೆ ನೀಡಲಿದ್ದಾರೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಪ್ರಕಾಶ ಬಿರಾದಾರ. ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ.ಎಸ್.ಜಿ.ಮಠ ಹಾಗೂ ಬವಿವ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಆಯುಷ್ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ ಭಾಗವಹಿಸುವರು ಎಂದು ಪ್ರಾಚಾರ್ಯ ಡಾ.ಅರುಣ ಹೂಲಿ, ಸರ್ಜರಿ ವಿಭಾಗದ ಮುಖ್ಯಸ್ಥ ಡಾ.ರವಿ.ಕೋಟೆಣ್ಣವರ, ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥೆ ಡಾ.ಅಖಿಲಾ ಹುಲ್ಲೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದಿನಿಂದ ಚಿಕ್ಕಸಂಗಮ ಸಂಗಮೇಶ್ವರ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.7-ಜಿಲ್ಲೆಯ ಬೀಳಗಿ ತಾಲೂಕಿನ ಚಿಕ್ಕಸಂಗಮದ ಸಂಗಮೇಶ್ವರ ಜಾತ್ರಾ ಮಹೋತ್ಸವ ಎ.8 ರಿಂದ ಪ್ರಾರಂಭವಾಗಲಿದ್ದು, ಎ.12 ರಂದು ರಥೋತ್ಸವ ಜರುಗಲಿದೆ. ಎ.8 ಮಂಗಳವಾರದಿಂದ ಎ.11 ರವರೆಗೆ ಪ್ರತಿದಿನ ರಾತ್ರಿ 8 ಗಂಟೆಗೆ ಸಂಗಮೇಶ್ವರ ದೇವರ ಉತ್ಸವ ಮೂರ್ತಿಯೊಂದಿಗೆ ಉಚಾ-ಯ ತೇರು ಜರುಗಲಿದೆ. ಎ.12 ಶನಿವಾರ ಬೆಳಿಗ್ಗೆ ಸಂಗಮನಾಥನಿಗೆ ಮಹಾ ರುದ್ರಾಭಿಷೇಕ, ಸಹಸ್ರ ಬಿಲ್ವಾರ್ಚನೆ, ಹೋಮ, ಹವನ, ಮಹಾಮಂಗಳಾರತಿ ನಡೆಯಲಿದೆ.

ಮಧ್ಯಾಹ್ನ 1 ಗಂಟೆಗೆ ಕಳಸದ ಪೂಜೆಯ ನಂತರ ಅನ್ನಸಂತರ್ಪಣೆ ನೆರವೇರುವುದು. ನಂತರ ಕೃಷ್ಣಾ ಹಾಗೂ ಘಟಪ್ರಭಾ ನದಿಗಳ ಸಂಗಮ ಸ್ಥಾನದಲ್ಲಿ ಸಂಗಮನಾಥನಿಗೆ ಗಂಗಾ ಸ್ನಾನ ಜರುಗುವುದು. ಬೀರಕಬ್ಬಿ ಭಕ್ತರಿಂದ ಸಂಗನಾಥನಿಗೆ ವಿಶೇಷ ಪೂಜೆ, ಹೆಗ್ಗೂರ ಗ್ರಾಮದಿಂದ ತೇರಿನ ಹಗ್ಗ, ಮುತ್ತತ್ತಿಯಿಂದ ಹೂಮಾಲೆ, ಜಡ್ರಾಮಕುಂಟಿಯಿಂದ ಕಳಸದ ಮೆರವಣಿಗೆ ಆಗಮಿಸಲಿವೆ.

ಅಂದೇ ಸಾಯಂಕಾಲ 5 ಗಂಟೆಗೆ ಕಳಸದ ಮೆರವಣಿಗೆ ನಡೆದು 5-30 ಕ್ಕೆ ರಥೋತ್ಸವ ಜರುಗುವುದು. ಎ.13 ರವಿವಾರ ಸಂಗಮನಾಥನಿಗೆ ಪೂಜೆ, ಎಡೆ ಕೊಡುವ ಕಾರ್ಯಕ್ರಮ ನಡೆಯಲಿದ್ದು, 1 ಗಂಟೆಗೆ ಜಾನಮಟ್ಟಿ ಗ್ರಾಮಸ್ಥರಿಂದ ಅನ್ನ ಸಂತರ್ಪಣೆ, ರಾತ್ರಿ 8 ಗಂಟೆಗೆ ದೀಪೋತ್ಸವ ಸೇವೆ ನಡೆಯಲಿದೆ.

ಎ.14 ಸೋಮವಾರ ಸಾಯಂಕಾಲ 5 ಗಂಟೆಗೆ ಕಡುಬಿನ ಕಾಳಗ, ಎ.17 ಗುರುವಾರ ಮಧ್ಯಾಹ್ನ 12 ಗಂಟೆಗೆ ಕಳಸ ಇಳಿಸುವ ಕಾರ್ಯಕ್ರಮಗಳು ಜರುಗಲಿವೆ ಎಂದು ದೇವಸ್ಥಾನದ ಪ್ರಧಾನ ಅರ್ಚಕರಾದ ಚಂದ್ರಶೇಖರಯ್ಯ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಮಾನ್ಯ ಸಭೆಗೆ ಆಹ್ವಾನ

ಕೊಪ್ಪಳ : ಕುಕನೂರು ಕನ್ನಡ ಸಾಹಿತ್ಯ ಪರಿಷತ್ತಿನ ಕೇಂದ್ರ ಸಮಿತಿಯ 2023-24 ನೆಯ ಸಾಲಿನ ವಾರ್ಷಿಕ ಸಾಮಾನ್ಯ ಸಭೆ ಹಾಗೂ ಸಾಮಾನ್ಯ ಸಭೆ ಏಪ್ರಿಲ್ 27 ರಂದು ಭಾನುವಾರ ಬೆಳಿಗ್ಗೆ ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ನಂದಿಹಳ್ಳಿಯಲ್ಲಿರುವ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ ಸ್ನಾತಕೋತ್ತರ ಅಧ್ಯಯನ ಕೇಂದ್ರದ ಸಭಾಂಗಣದಲ್ಲಿ ಜರುಗಲಿದೆ. ಸಭೆ ಅಧ್ಯಕ್ಷತೆಯನ್ನು



ಕೇಂದ್ರ ಸಮಿತಿಯ ಅಧ್ಯಕ್ಷರಾದ ನಡೋಜ ಡಾ. ಮಹೇಶ್ ಜೋಶಿ ವಹಿಸಲಿದ್ದು ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲೆ ಹಾಗೂ ತಾಲೂಕ ಹೋಬಳಿ ಕೇಂದ್ರದ ಅಜೀವ ಸದಸ್ಯರು ಹಾಗೂ ಪದಾಧಿಕಾರಿಗಳು ಹಾಗೂ ಕನ್ನಡ ಮನಸುಗಳು ಸಭೆಗೆ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಕುಕನೂರು ತಾಲೂಕು ಕನ್ನಡ ಸಾಹಿತ್ಯ ಪರಿಷತ ಅಧ್ಯಕ್ಷರಾದ ಕಳಕಪ್ಪ ಕುಂಬಾರ ಪ್ರಕಟಣೆಲ್ಲಿ ತಿಳಿಸಿದ್ದಾರೆ.

